ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



‘ಟಾಕ್ಸಿಕ್’ ಸಿನಿಮಾದ ಬ್ಯಾಕ್-ಟು-ಬ್ಯಾಕ್ ರೊಮ್ಯಾಂಟಿಕ್ ಹಾಡುಗಳ ಯಶಸ್ಸಿನ ಬೆನ್ನಲ್ಲೇ ಈಗ ಮೂರನೇ ಸಾಂಗ್ ರಿಲೀಸ್‌ಗೆ ಕೌಂಟ್‌ಡೌನ್ ಶುರುವಾಗಿದೆ. ಗ್ಯಾಂಗ್‌ಸ್ಟರ್ ಹಿನ್ನೆಲೆಯ ಈ ಚಿತ್ರದಲ್ಲಿ ಯಶ್ ಹಾಗೂ ಕಿಯಾರಾ ಅಡ್ವಾಣಿ ಕಾಂಬಿನೇಷನ್‌ನ ಮತ್ತೊಂದು ಪ್ರಣಯ ಗೀತೆ ವಿಶಾಲ್ ಮಿಶ್ರಾ ಸಂಗೀತದಲ್ಲಿ ಮೂಡಿಬರಲಿದ್ದು, ಅಭಿಮಾನಿಗಳಲ್ಲಿ ಭಾರಿ ಕುತೂಹಲ ಮೂಡಿಸಿದೆ.

BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669
RNI KARKAN2011/44806
prabhavaa.com
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ





## ಕಾಕ್ರೋಚ್ ಜನತಾ ಪಾರ್ಟಿ

# ಪ್ರತಿಭಟನೆ ಅಂತ್ಯ

ಮಾತುಕತೆ ಬಳಿಕ ಕೇಂದ್ರ ಸಚಿವರಾದ ಜೆ.ಪಿ. ನಡ್ಡಾ ಮತ್ತು ಜಿತೇಂದ್ರ ಸಿಂಗ್ ಅವರ ಸಮ್ಮುಖದಲ್ಲಿ ಸಿಜೆಪಿ ವಕ್ತಾರರಾದ ಸೌರವ್ ದಾಸ್ ಮತ್ತು ಅಶುತೋಷ್ ರಂಕಾ ಸುದ್ದಿಗೋಷ್ಠಿ ನಡೆಸಿ ಪ್ರತಿಭಟನೆ ಅಂತ್ಯಗೊಳಿಸುವ ನಿರ್ಧಾರವನ್ನು ಪ್ರಕಟಿಸಿದರು. ಸರ್ಕಾರ ನೀಡಿರುವ ಭರವಸೆಗಳನ್ನು ಈಡೇರಿಸಲಿದೆ ಎಂಬ ವಿಶ್ವಾಸದ ಹಿನ್ನೆಲೆಯಲ್ಲಿ ಪ್ರತಿಭಟನೆ ಹಿಂಪಡೆಯಲಾಗಿದೆ ಎಂದು ಅವರು ತಿಳಿಸಿದರು. ವಿದ್ಯಾರ್ಥಿಗಳ ವಿರುದ್ಧ ಪ್ರತಿಭಟನೆ ಸಂದರ್ಭದಲ್ಲಿ ದಾಖಲಾಗಿರುವ ಪೊಲೀಸ್ ಪ್ರಕರಣಗಳನ್ನು ಹಿಂಪಡೆಯ ಲಾಗುವುದು. ಭವಿಷ್ಯದಲ್ಲಿಯೂ ಅವರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳುವುದಿಲ್ಲ.

ನವದೆಹಲಿ: ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ ಖಂಡಿಸಿ ಕಳೆದ 37 ದಿನಗಳಿಂದ ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆಯುತ್ತಿದ್ದ ಪ್ರತಿಭಟನೆ ಕೊನೆಗೂ ಅಂತ್ಯಗೊಂಡಿದೆ.

ಕೇಂದ್ರ ಸರ್ಕಾರ ಉಳಿದ ಮೂರು ಬೇಡಿಕೆಗಳನ್ನು ಈಡೇರಿಸುವ ಭರವಸೆ ನೀಡಿದ ಹಿನ್ನೆಲೆಯಲ್ಲಿ ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ಪ್ರತಿಭಟನೆಯನ್ನು ಹಿಂಪಡೆದಿದೆ.

ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸುತ್ತಿದ್ದವರು ಶಾಂತಿಯುತವಾಗಿ ತಮ್ಮ ಮನೆಗಳಿಗೆ ಮರಳುವಂತೆ ಸಿಜೆಪಿ ವಕ್ತಾರ ಸೌರವ್ ದಾಸ್ ಮನವಿ ಮಾಡಿದ್ದಾರೆ.

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿದ್ಯಾರ್ಥಿಗಳು ನಡೆಸುತ್ತಿದ್ದ ಹೋರಾಟದ ಹಿನ್ನೆಲೆಯಲ್ಲಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ರಾಜೀನಾಮೆ ನೀಡಿದ ಬಳಿಕ, ಕೇಂದ್ರ ಸಚಿವರಾದ ಜೆ.ಪಿ. ನಡ್ಡಾ ಮತ್ತು ಜಿತೇಂದ್ರ ಸಿಂಗ್ ಅವರು ಸಿಜೆಪಿ ಪ್ರತಿನಿಧಿಗಳೊಂದಿಗೆ ಮೂರನೇ ಸುತ್ತಿನ ಮಾತುಕತೆ ನಡೆಸಿದರು. ಈ ವೇಳೆ ಸಿಜೆಪಿ ಮುಂದಿಟ್ಟಿದ್ದ ಉಳಿದ ಮೂರು ಬೇಡಿಕೆಗಳನ್ನು ಈಡೇರಿಸುವುದಾಗಿ ಕೇಂದ್ರ ಸರ್ಕಾರ ಭರವಸೆ ನೀಡಿದೆ ಎಂದು ತಿಳಿದುಬಂದಿದೆ.

ಮಾತುಕತೆ ಬಳಿಕ ಕೇಂದ್ರ ಸಚಿವರಾದ ಜೆ.ಪಿ. ನಡ್ಡಾ ಮತ್ತು ಜಿತೇಂದ್ರ ಸಿಂಗ್ ಅವರ ಸಮ್ಮುಖದಲ್ಲಿ ಸಿಜೆಪಿ ವಕ್ತಾರರಾದ ಸೌರವ್ ದಾಸ್ ಮತ್ತು ಅಶುತೋಷ್ ರಂಕಾ ಸುದ್ದಿಗೋಷ್ಠಿ ನಡೆಸಿ ಪ್ರತಿಭಟನೆ ಅಂತ್ಯಗೊಳಿಸುವ ನಿರ್ಧಾರವನ್ನು ಪ್ರಕಟಿಸಿದರು.

ಸರ್ಕಾರ ನೀಡಿರುವ ಭರವಸೆಗಳನ್ನು ಈಡೇರಿಸಲಿದೆ ಎಂಬ ವಿಶ್ವಾಸದ ಹಿನ್ನೆಲೆಯಲ್ಲಿ ಪ್ರತಿಭಟನೆ ಹಿಂಪಡೆಯಲಾಗಿದೆ ಎಂದು ಅವರು ತಿಳಿಸಿದರು.

ವಿದ್ಯಾರ್ಥಿಗಳ ವಿರುದ್ಧ ಪ್ರತಿಭಟನೆ ಸಂದರ್ಭದಲ್ಲಿ ದಾಖಲಾಗಿರುವ ಪೊಲೀಸ್ ಪ್ರಕರಣಗಳನ್ನು ಹಿಂಪಡೆಯಲಾಗುವುದು. ಭವಿಷ್ಯದಲ್ಲಿಯೂ ಅವರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳುವುದಿಲ್ಲ.

ಅಲ್ಲದೆ, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಹಿನ್ನೆಲೆಯಲ್ಲಿ ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಗಳ ಕುಟುಂಬಗಳಿಗೆ ನಿಯಮಾನುಸಾರ ಪರಿಹಾರ ನೀಡಲಾಗುವುದು ಎಂದು ಸರ್ಕಾರ ಭರವಸೆ ನೀಡಿದೆ ಎಂದು ಸಿಜೆಪಿ ವಕ್ತಾರರು ತಿಳಿಸಿದ್ದಾರೆ.

37 ದಿನಗಳ ಸುದೀರ್ಘ ಪ್ರತಿಭಟನೆಯ ಬಳಿಕ ಸರ್ಕಾರ ನಮ್ಮ ಬೇಡಿಕೆಗಳನ್ನು ಒಪ್ಪಿಕೊಂಡಿದೆ.

# ಬಿಪಿಎಲ್ ಕಾರ್ಡ್ ಮಿತಿ ಹೆಚ್ಚಳ..?

ವಿವಿಧ ಕಾರಣಗಳಿಂದ ಸ್ಥಗಿತಗೊಂಡಿರುವ ಕೆಲವು ಬಿಪಿಎಲ್ ಕಾರ್ಡ್‌ಗಳನ್ನು ಎಪಿಎಲ್ ಕಾರ್ಡ್‌ಗಳಾಗಿ ಪರಿವರ್ತಿಸುವ ಪ್ರಕ್ರಿಯೆಯೂ ನಡೆಯುತ್ತಿದೆ. ರಾಜ್ಯದಲ್ಲಿ ಬರದ ಪರಿಸ್ಥಿತಿ ಎದುರಾದರೂ ಆಹಾರ ಧಾನ್ಯಗಳ ವಿತರಣೆಯಲ್ಲಿ ಯಾವುದೇ ತೊಂದರೆಯಾಗುವುದಿಲ್ಲ. ಒಂದು ವರ್ಷಕ್ಕೆ ಸಾಕಾಗುವಷ್ಟು ರಾಗಿ ಮತ್ತು ಅಕ್ಕಿ ದಾಸ್ತಾನು ರಾಜ್ಯದಲ್ಲಿದೆ. ಕೇಂದ್ರ ಸರ್ಕಾರದ ಬಳಿಯೂ ಅಗತ್ಯ ಪ್ರಮಾಣದ ಅಕ್ಕಿ ಲಭ್ಯವಿದೆ ಎಂದು ಸಚಿವರು ಭರವಸೆ ನೀಡಿದರು.

ಬೆಂಗಳೂರು: ಬಿಪಿಎಲ್ ಕಾರ್ಡ್ ಪಡೆಯಲು ನಿಗದಿಪಡಿಸಿರುವ ವಾರ್ಷಿಕ ಆದಾಯ ಮಿತಿಯನ್ನು ರೂ.3 ಲಕ್ಷದವರೆಗೆ ಹೆಚ್ಚಿಸುವ ಕುರಿತು ಸರ್ಕಾರದಲ್ಲಿ ಚರ್ಚೆ ನಡೆಯುತ್ತಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಮಾರ್ಗಸೂಚಿಗಳ ಅನ್ವಯ ಬಿಪಿಎಲ್ ಕಾರ್ಡ್‌ಗೆ ಸಂಬಂಧಿಸಿದ ಆದಾಯ ಮಿತಿಯನ್ನು ಪರಿಷ್ಕರಿಸುವ ಪ್ರಕ್ರಿಯೆ ನಡೆಯುತ್ತಿದೆ. ಈಗಾಗಲೇ ಸುಮಾರು ಶೇ.50ರಷ್ಟು ಪರಿಷ್ಕರಣೆ ಪ್ರಕ್ರಿಯೆ ಪೂರ್ಣಗೊಂಡಿದ್ದು, ಮುಖ್ಯಮಂತ್ರಿ ಅವರೊಂದಿಗೆ ಚರ್ಚಿಸಿದ ಬಳಿಕ ಆದಾಯ ಮಿತಿಯನ್ನು ರೂ.3 ಲಕ್ಷಕ್ಕೆ ಹೆಚ್ಚಿಸುವ ಕುರಿತು ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಹೇಳಿದರು.

ವಿವಿಧ ಕಾರಣಗಳಿಂದ ಸ್ಥಗಿತಗೊಂಡಿರುವ ಕೆಲವು ಬಿಪಿಎಲ್ ಕಾರ್ಡ್‌ಗಳನ್ನು ಎಪಿಎಲ್ ಕಾರ್ಡ್‌ಗಳಾಗಿ ಪರಿವರ್ತಿಸುವ ಪ್ರಕ್ರಿಯೆಯೂ ನಡೆಯುತ್ತಿದೆ. ರಾಜ್ಯದಲ್ಲಿ ಬರದ ಪರಿಸ್ಥಿತಿ ಎದುರಾದರೂ ಆಹಾರ ಧಾನ್ಯಗಳ ವಿತರಣೆಯಲ್ಲಿ ಯಾವುದೇ ತೊಂದರೆಯಾಗುವುದಿಲ್ಲ. ಒಂದು ವರ್ಷಕ್ಕೆ ಸಾಕಾಗುವಷ್ಟು ರಾಗಿ ಮತ್ತು ಅಕ್ಕಿ ದಾಸ್ತಾನು ರಾಜ್ಯದಲ್ಲಿದೆ. ಕೇಂದ್ರ ಸರ್ಕಾರದ ಬಳಿಯೂ ಅಗತ್ಯ ಪ್ರಮಾಣದ ಅಕ್ಕಿ ಲಭ್ಯವಿದೆ ಎಂದು ಸಚಿವರು ಭರವಸೆ ನೀಡಿದರು.




ಮಳೆ ಕೊರತೆ ಕುರಿತು ಆತಂಕಪಡುವ ಅಗತ್ಯವಿಲ್ಲ. ರಾಜ್ಯದಲ್ಲಿ ಇನ್ನೂ ಮಳೆಯಾಗುವ ನಿರೀಕ್ಷೆಯಿದೆ ಎಂದು ತಿಳಿಸಿದ ಮುನಿಯಪ್ಪ, ಸಚಿವ ಸಂಪುಟ ವಿಸ್ತರಣೆ ಕುರಿತು ಹೈಕಮಾಂಡ್ ಅಂತಿಮ ತೀರ್ಮಾನ ಕೈಗೊಳ್ಳಲಿದೆ ಎಂದು ಸ್ಪಷ್ಟಪಡಿಸಿದರು.

ಇದೇ ವೇಳೆ, ಬಿಪಿಎಲ್ ಕಾರ್ಡ್ ಹೊಂದಿರುವ ಕುಟುಂಬದ ಯಜಮಾನಿ ಮೃತಪಟ್ಟ ಸಂದರ್ಭದಲ್ಲಿ ಅವರ ಸ್ಥಾನಕ್ಕೆ ಸೊಸೆ ಅಥವಾ ಮಗಳ ಹೆಸರನ್ನು ಸೇರಿಸುವ ಪ್ರಕ್ರಿಯೆಯನ್ನು ಸರಳಗೊಳಿಸಲಾಗಿದೆ. ಈ ಹಿಂದೆ ಅನುಮೋದನೆಗೆ ಮೂರು ತಿಂಗಳವರೆಗೆ ಸಮಯ ಬೇಕಾಗುತ್ತಿತ್ತು. ಇದೀಗ ಈ ಪ್ರಕ್ರಿಯೆಯನ್ನು ಒಂದು ತಿಂಗಳೊಳಗೆ ಪೂರ್ಣಗೊಳಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

ನ್ಯಾಯಬೆಲೆ ಅಂಗಡಿಗಳು ಬೆಳಗ್ಗೆ 6 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ತೆರೆದಿರಬೇಕು ಎಂದು ಸೂಚನೆ ನೀಡಲಾಗಿದೆ.

ನಿಯಮ ಪಾಲಿಸದ ನ್ಯಾಯಬೆಲೆ ಅಂಗಡಿಗಳ ವಿರುದ್ಧ ಸಾರ್ವಜನಿಕರು ಆಹಾರ ಇಲಾಖೆಯ ‘ಅನ್ನ ಸಹಾಯವಾಣಿ’ 1967ಕ್ಕೆ ಕರೆ ಮಾಡಿ ದೂರು ಸಲ್ಲಿಸಬಹುದು ಎಂದು ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದ್ದಾರೆ.

# ಅಪರೂಪದ ವೀರಗಲ್ಲು ಪತ್ತೆ

ನೆಲಮಂಗಲ: ಗಂಗರ ಆಳ್ವಿಕೆಯ ಕಾಲಘಟ್ಟವಾದ ಕ್ರಿ.ಶ. 850ರ ಸುಮಾರಿಗೆ ಸೇರಿರುವ ಅಪರೂಪದ ಶಾಸನ ಸಹಿತ ಹುಲಿಬೇಟೆ ವೀರಗಲ್ಲೊಂದು ನೆಲಮಂಗಲ ತಾಲೂಕಿನ ಬೈರಸಂದ್ರ ಗ್ರಾಮದಲ್ಲಿ ಪತ್ತೆಯಾಗಿದೆ.



ಬೈರಸಂದ್ರ ಗ್ರಾಮದ ರಂಗಸ್ವಾಮಯ್ಯನವರ ಜಮೀನಿನಲ್ಲಿ ಉಳುಮೆ ಮಾಡುತ್ತಿದ್ದ ಸಂದರ್ಭದಲ್ಲಿ ಈ ವೀರಗಲ್ಲು ಪತ್ತೆಯಾಗಿದೆ. ಕೂಡಲೇ ಅದನ್ನು ಸಂರಕ್ಷಿಸಿದ ರಂಗಸ್ವಾಮಯ್ಯ ಅವರು ಈ ಕುರಿತು ಪತ್ರಕರ್ತರೊಬ್ಬರಿಗೆ ಮಾಹಿತಿ ನೀಡಿದ್ದಾರೆ. ಬಳಿಕ ಇತಿಹಾಸತಜ್ಞರಾದ ಗೋಪಾಲ್‌ರಾವ್ ಅವರ ಪುತ್ರ ಬಾಲಸುಬ್ರಹ್ಮಣ್ಯ, ವೇದಾವತಿ, ಕೆ. ಧನ್‌ಪಾಲ್ ಹಾಗೂ ನರೇಂದ್ರ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಇದು ಗಂಗರ ಕಾಲಘಟ್ಟಕ್ಕೆ ಸೇರಿದ ಹುಲಿಬೇಟೆ ವೀರಗಲ್ಲು ಎಂದು ದೃಢಪಡಿಸಿದ್ದಾರೆ.

ಗೋಪಾಲ್‌ರಾವ್ ಅವರ ಕಿರಿಯ ಪುತ್ರ ಕಾರ್ತಿಕೇಯ, ಸೊಸೆ ಡಾ.ವೇದಾವತಿ ಹಾಗೂ ಇತಿಹಾಸ ತಜ್ಞರಾದ ಪಿ.ವಿ.ಕೃಷ್ಣಮೂರ್ತಿ ಮತ್ತು ಕೆ.ಆರ್.ನರಸಿಂಹನ್ ಅವರು ವೀರಗಲ್ಲಿನಲ್ಲಿರುವ ಶಾಸನವನ್ನು ಓದಿ ಅದರ ಮಹತ್ವವನ್ನು ವಿವರಿಸಿದ್ದಾರೆ.

**ಶಾಸನದಲ್ಲಿ ವೀರನ ಸಾಹಸದ ಉಲ್ಲೇಖ:**

ಕನ್ನಡ ಶಾಸನದ ಪ್ರಕಾರ, ತ್ರಣೀಯ ರಟ್ಟಮ್ಮರೊಡೆಯನ ಮಗನಾದ ಸಿವಮರೆನಾದಿ ಎಂಬಾತ ಮಣ್ಣೆನಾಡಿನ ನಾಡಗೌಡನಾಗಿದ್ದ ಮಾರಮ್ಮನ್ ಎಂಬುವರ ಸೇವಕನಾಗಿದ್ದನು. ಸಿವಮರೆನಾದಿಯು ಹುಲಿಯೊಂದಿಗೆ ಹೋರಾಡುವ ಸಂದರ್ಭದಲ್ಲಿ ವೀರಮರಣ ಹೊಂದಿದ್ದಾನೆ ಎಂಬ ವಿವರ ಶಾಸನದಲ್ಲಿದೆ. ಈ ಶಾಸನವನ್ನು ಗಂಗರ ಕಾಲದ ಕನ್ನಡ ಅಕ್ಷರಗಳಲ್ಲಿ ಕೆತ್ತಲಾಗಿದೆ ಎಂದು ಇತಿಹಾಸ ತಜ್ಞರು ತಿಳಿಸಿದ್ದಾರೆ.

ವೀರಗಲ್ಲಿನಲ್ಲಿ ಕನ್ನಡ ಶಾಸನದ ಜೊತೆಗೆ ಹುಲಿಯೊಂದಿಗೆ ಸೆಣಸಾಡುತ್ತಿರುವ ವೀರನ ಚಿತ್ರವೂ ಕಂಡುಬಂದಿದೆ. ಒಂದು ಕೈಯಲ್ಲಿ ಹುಲಿಯನ್ನು ಹಿಡಿದುಕೊಂಡಿರುವ ವೀರ, ಮತ್ತೊಂದು ಕೈಯಲ್ಲಿ ಕತ್ತಿಯನ್ನು ಹಿಡಿದು ಹೋರಾಡುತ್ತಿರುವ ದೃಶ್ಯವನ್ನು ಕೆತ್ತಲಾಗಿದೆ. ವೀರಮರಣ ಹೊಂದಿದ ಬಳಿಕ ದೇವಲೋಕದ ಅಪ್ಸರೆಯರು ಆತನನ್ನು ಕರೆದೊಯ್ಯುತ್ತಿರುವ ಚಿತ್ರಣವೂ ವೀರಗಲ್ಲಿನಲ್ಲಿ ಮೂಡಿಬಂದಿದೆ.

ಗಂಗರ ಆಳ್ವಿಕೆಗೆ ಒಳಪಟ್ಟಿದ್ದ ಪ್ರದೇಶಗಳಲ್ಲಿ ಪತ್ತೆಯಾಗಿರುವ ಪುರಾತನ ಹುಲಿಬೇಟೆ ವೀರಗಲ್ಲುಗಳಲ್ಲಿ ಶಾಸನ ಸಹಿತ ಈ ವೀರಗಲ್ಲು ಅಪರೂಪದ್ದಾಗಿದೆ ಎಂದು ಇತಿಹಾಸ ತಜ್ಞರು ಹೇಳಿದ್ದಾರೆ. ಹೀಗಾಗಿ ಇದರ ಐತಿಹಾಸಿಕ ಮಹತ್ವವನ್ನು ಪರಿಗಣಿಸಿ ಸೂಕ್ತ ರೀತಿಯಲ್ಲಿ ಸಂರಕ್ಷಣೆ ಮಾಡಬೇಕು ಎಂದು ಗ್ರಾಮಸ್ಥರು ಹಾಗೂ ಇತಿಹಾಸಾಸಕ್ತರು ಆಗ್ರಹಿಸಿದ್ದಾರೆ.

## ಕುಖ್ಯಾತ ರೌಡಿ ಬಂಧನ

ಬೆಂಗಳೂರು: ನಗರದಲ್ಲಿ ಅಪರಾಧ ಚಟುವಟಿಕೆಗಳಿಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಪೊಲೀಸರು ಕಾರ್ಯಾಚರಣೆ ತೀವ್ರಗೊಳಿಸಿದ್ದು, ಸಾರ್ವಜನಿಕರಲ್ಲಿ ಭೀತಿ ಮೂಡಿಸಿದ್ದ ಕುಖ್ಯಾತ ರೌಡಿಶೀಟರ್ ವಿಘ್ನೇಶ್ ಅಲಿಯಾಸ್ ವಿಕ್ಕಿಯನ್ನು ಕೆಂಗೇರಿ ಪೊಲೀಸರು ಗೂಂಡಾ ಕಾಯ್ದೆಯಡಿ ಬಂಧಿಸಿ ಜೈಲಿಗೆ ಕಳುಹಿಸಿದ್ದಾರೆ.

ಬಂಧಿತ ರೌಡಿಶೀಟರ್ ವಿಘ್ನೇಶ್ ವಿರುದ್ಧ ನಗರದ ವಿವಿಧ ಪೊಲೀಸ್ ಠಾಣೆಗಳಲ್ಲಿ ಕೊಲೆಯತ್ನ, ಅತ್ಯಾಚಾರ, ದರೋಡೆ ಹಾಗೂ ಭೀಕರ ಹಲ್ಲೆ ಸೇರಿದಂತೆ 11ಕ್ಕೂ ಹೆಚ್ಚು ಗಂಭೀರ ಸ್ವರೂಪದ ಅಪರಾಧ ಪ್ರಕರಣಗಳು ದಾಖಲಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಹಿಂದೆ ಹಲವು ಪ್ರಕರಣಗಳಲ್ಲಿ ಬಂಧನಕ್ಕೊಳಗಾಗಿದ್ದ ವಿಘ್ನೇಶ್ ಜಾಮೀನಿನ ಮೇಲೆ ಬಿಡುಗಡೆಯಾದ ಬಳಿಕವೂ ತನ್ನ ಅಪರಾಧ ಚಟುವಟಿಕೆಗಳನ್ನು ಮುಂದುವರಿಸಿದ್ದಾನೆ ಎನ್ನಲಾಗಿದೆ.

## ‘ಧರ್ಮೇಂದ್ರ ಪ್ರಧಾನ್ ರಾಜೀನಾಮೆ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ’

ಬೆಂಗಳೂರು: ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಯನ್ನು ಕಾಂಗ್ರೆಸ್ ನಾಯಕರು ರಾಜಕೀಯವಾಗಿ ಬಳಸಿಕೊಳ್ಳುತ್ತಿರುವುದನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತೀವ್ರವಾಗಿ ಖಂಡಿಸಿದ್ದಾರೆ. ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಯನ್ನು ಕಾಂಗ್ರೆಸ್‌ನ ಗೆಲುವು ಎಂದು ಬಿಂಬಿಸುತ್ತಿರುವುದು ಕೇವಲ ರಾಜಕೀಯ ಪ್ರೇರಿತ ಹೇಳಿಕೆಯಾಗಿದ್ದು, ವಿದ್ಯಾರ್ಥಿಗಳ ಹಿತದೃಷ್ಟಿಯಿಂದಲೇ ಪ್ರಧಾನ್ ಅವರು ಈ ನಿರ್ಧಾರ ಕೈಗೊಂಡಿದ್ದಾರೆ ಎಂದು ಅವರು ಸಮರ್ಥಿಸಿಕೊಂಡರು.

ಧರ್ಮೇಂದ್ರ ಪ್ರಧಾನ್ ಅವರ ರಾಜಕೀಯ ಹಿನ್ನೆಲೆಯನ್ನು ಉಲ್ಲೇಖಿಸಿದ ವಿಜಯೇಂದ್ರ, ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್‌ನ ದಿನಗಳಿಂದಲೂ ಅವರು ವಿದ್ಯಾರ್ಥಿಗಳ ಪರವಾಗಿ ನಿರಂತರವಾಗಿ ಹೋರಾಟ ನಡೆಸಿಕೊಂಡು ಬಂದಿದ್ದಾರೆ. ದೇಶದ ಲಕ್ಷಾಂತರ ವಿದ್ಯಾರ್ಥಿಗಳ ಧ್ವನಿಯಾಗಿ ಕಾರ್ಯನಿರ್ವಹಿಸಿರುವ ಪ್ರಧಾನ್, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ವಿದ್ಯಾರ್ಥಿಗಳ ಆತ್ಮಹತ್ಯೆಯಂತಹ ಘಟನೆಗಳನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದಾರೆ. ವಿದ್ಯಾರ್ಥಿಗಳ ಭಾವನೆಗಳಿಗೆ ಗೌರವ ನೀಡಿ, ಅವರ ಹೋರಾಟವನ್ನು ಅರ್ಥಮಾಡಿಕೊಂಡು ರಾಜೀನಾಮೆ ನೀಡುವ ನಿರ್ಧಾರ ಕೈಗೊಂಡಿದ್ದಾರೆ ಎಂದು ಹೇಳಿದರು.

ನೀಟ್ ಅಕ್ರಮಗಳ ವಿರುದ್ಧ ದೆಹಲಿಯಲ್ಲಿ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸುತ್ತಿದ್ದ ಸಂದರ್ಭದಲ್ಲಿ ಕಾಂಗ್ರೆಸ್ ನಾಯಕರು ವಿದ್ಯಾರ್ಥಿಗಳ ಹೋರಾಟವನ್ನು ಬೆಂಬಲಿಸುವ ನೆಪದಲ್ಲಿ ರಾಜಕೀಯ ಲಾಭ ಪಡೆಯಲು ಮುಂದಾಗಿದ್ದರು ಎಂದು ವಿಜಯೇಂದ್ರ ಆರೋಪಿಸಿದರು. ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಬದಲು, ಅವರ ಹೋರಾಟವನ್ನು ಕೇಂದ್ರ ಸರ್ಕಾರದ ವಿರುದ್ಧದ ರಾಜಕೀಯ ಅಸ್ತ್ರವಾಗಿ ಬಳಸಿಕೊಳ್ಳಲು ಕಾಂಗ್ರೆಸ್ ಪ್ರಯತ್ನಿಸಿದೆ ಎಂದು ಅವರು ಟೀಕಿಸಿದರು.

ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಯನ್ನು ಕಾಂಗ್ರೆಸ್ ಪಕ್ಷದ ಗೆಲುವು ಎಂದು ಬಿಂಬಿಸುತ್ತಿರುವುದು ವಾಸ್ತವಕ್ಕೆ ದೂರವಾದದ್ದು. ವಿದ್ಯಾರ್ಥಿಗಳ ಹಿತಾಸಕ್ತಿ ಮತ್ತು ಅವರ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಪ್ರಧಾನ್ ಅವರು ನೈತಿಕ ಹೊಣೆಗಾರಿಕೆಯಿಂದ ಈ ನಿರ್ಧಾರ ಕೈಗೊಂಡಿದ್ದಾರೆ. ಇದನ್ನು ರಾಜಕೀಯ ಜಯವೆಂದು ಬಿಂಬಿಸುವ ಮೂಲಕ ಕಾಂಗ್ರೆಸ್ ವಿದ್ಯಾರ್ಥಿಗಳ ಹೋರಾಟದ ಮೂಲ ಉದ್ದೇಶವನ್ನೇ ಕಡೆಗಣಿಸುತ್ತಿದೆ ಎಂದು ಬಿ.ವೈ. ವಿಜಯೇಂದ್ರ ಆರೋಪಿಸಿದರು.

## ಕಾರು, ಬೈಕ್‌ಗಳ ಧ್ವಂಸ

ಬೆಂಗಳೂರು: ಕಾರಿನಲ್ಲಿ ಬಂದ ನಾಲ್ವರು ದುಷ್ಕರ್ಮಿಗಳು ಮನೆಯೊಂದರ ಮೇಲೆ ಏಕಾಏಕಿ ಲಾಂಗು, ಮಚ್ಚುಗಳಿಂದ ದಾಳಿ ನಡೆಸಿ, ಮನೆ ಹಾಗೂ ವಾಹನಗಳನ್ನು ಧ್ವಂಸಗೊಳಿಸಿರುವ ಘಟನೆ ಬೆಂಗಳೂರು ಹೊರವಲಯ ಆನೇಕಲ್ ತಾಲೂಕಿನ ಬನ್ನೇರುಘಟ್ಟ ಸಮೀಪದ ಮೈಲಸಂದ್ರ ದಿಣ್ಣೆಪಾಳ್ಯದಲ್ಲಿ ನಡೆದಿದೆ.

ಮೈಲಸಂದ್ರ ದಿಣ್ಣೆಪಾಳ್ಯದ ನಿವಾಸಿ ವಿಶ್ವನಾಥ ರೆಡ್ಡಿ ಅವರ ಮನೆ ಮೇಲೆ ದುಷ್ಕರ್ಮಿಗಳು ದಾಳಿ ನಡೆಸಿದ್ದಾರೆ.

ಊಟ ಮುಗಿಸಿ ಪತ್ನಿ ಹಾಗೂ ಸೊಸೆ ಜೊತೆ ಮನೆಯ ಹೊರಭಾಗದಲ್ಲಿ ವಿಶ್ವನಾಥ ರೆಡ್ಡಿ ವಿಶ್ರಾಂತಿ ಪಡೆಯುತ್ತಿದ್ದ ವೇಳೆ ಕಾರಿನಲ್ಲಿ ಬಂದ ನಾಲ್ವರು ಏಕಾಏಕಿ ಲಾಂಗು, ಮಚ್ಚುಗಳೊಂದಿಗೆ ಮನೆಗೆ ನುಗ್ಗಿದ್ದಾರೆ.

ಇದರಿಂದ ಆತಂಕಗೊಂಡ ವಿಶ್ವನಾಥ ರೆಡ್ಡಿ ಕುಟುಂಬ ಮನೆಯೊಳಗೆ ಓಡಿ ಹೋಗಿ ಬಾಗಿಲು ಹಾಕಿಕೊಂಡಿದೆ.

ಬಳಿಕ ದುಷ್ಕರ್ಮಿಗಳು ಲಾಂಗು, ಮಚ್ಚುಗಳಿಂದ ಮನೆಯ ಬಾಗಿಲನ್ನು ಧ್ವಂಸಗೊಳಿಸಲು ಯತ್ನಿಸಿದ್ದಾರೆ. ಬಾಗಿಲು ತೆರೆಯಲು ಸಾಧ್ಯವಾಗದ ಹಿನ್ನೆಲೆಯಲ್ಲಿ ಮನೆಯ ಕಿಟಕಿ ಗಾಜುಗಳನ್ನು ಪುಡಿಗೈದಿದ್ದಾರೆ. ಮನೆ ಮುಂದೆ ನಿಲ್ಲಿಸಿದ್ದ ಇನ್ನೋವಾ ಕಾರಿನ ಗಾಜುಗಳನ್ನು ಒಡೆದು ಹಾಕಿದ್ದು, ಬೈಕ್ ಸೇರಿದಂತೆ ಸಿಕ್ಕಸಿಕ್ಕ ವಸ್ತುಗಳನ್ನು ಧ್ವಂಸಗೊಳಿಸಿದ್ದಾರೆ.

ಇಷ್ಟಕ್ಕೆ ಸುಮ್ಮನಾಗದ ದುಷ್ಕರ್ಮಿಗಳು ಸಮೀಪದ ಬಟ್ಟೆ ಅಂಗಡಿಗೂ ನುಗ್ಗಿ ವಸ್ತುಗಳನ್ನು ಚೆಲ್ಲಾಪಿಲ್ಲಿ ಮಾಡಿದ್ದಾರೆ. ಅಂಗಡಿ ಮಾಲೀಕ ಹಾಗೂ ಬೈಕ್ ಸವಾರನ ಮೇಲೂ ಹಲ್ಲೆ ನಡೆಸಿ ಬಳಿಕ ಸ್ಥಳದಿಂದ ಪರಾರಿಯಾಗಿದ್ದಾರೆ ಎನ್ನಲಾಗಿದೆ.

# ‘ಸರ್ಕಾರವೇ ಜನರ ಬಳಿಗೆ ಹೋಗಬೇಕು; ಟೀಮ್ ಕರ್ನಾಟಕವಾಗಿ ಕೆಲಸ ಮಾಡೋಣ’

ಚಿತ್ರದುರ್ಗ: ಸರ್ಕಾರ ಮತ್ತು ಆಡಳಿತಕ್ಕೆ ಹೊಸ ರೂಪ ನೀಡುವ ಉದ್ದೇಶದಿಂದ ಹಲವು ಹೊಸ ಆಲೋಚನೆಗಳೊಂದಿಗೆ ರಾಜ್ಯ ಸರ್ಕಾರ ಮುನ್ನಡೆಯುತ್ತಿದ್ದು, ರಾಜ್ಯದ ಅಭಿವೃದ್ಧಿಗಾಗಿ ಎಲ್ಲರೂ ‘ಟೀಮ್ ಕರ್ನಾಟಕ’ವಾಗಿ ಒಗ್ಗಟ್ಟಿನಿಂದ ಕೆಲಸ ಮಾಡಬೇಕು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕರೆ ನೀಡಿದ್ದಾರೆ.

ಚಿತ್ರದುರ್ಗದಲ್ಲಿ ಶನಿವಾರ ನಡೆದ ಬೆಂಗಳೂರು ಪ್ರಾದೇಶಿಕ ವಿಭಾಗ ಮಟ್ಟದ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಅವರು, ಸರ್ಕಾರದ ಯೋಜನೆಗಳು ಹಾಗೂ ಆಡಳಿತ ವ್ಯವಸ್ಥೆ ಜನರ ಮನೆ ಬಾಗಿಲಿಗೆ ತಲುಪಬೇಕು.



ಜನರು ತಮ್ಮ ಸಮಸ್ಯೆಗಳಿಗೆ ಪರಿಹಾರ ಪಡೆಯಲು ಸರ್ಕಾರಿ ಕಚೇರಿಗಳಿಗೆ ಅಲೆದಾಡುವ ಪರಿಸ್ಥಿತಿ ಇರಬಾರದು. ಜನರು ಸಲ್ಲಿಸುವ ಪ್ರತಿಯೊಂದು ಅರ್ಜಿಯ ಸಮಸ್ಯೆ ಪರಿಹಾರವಾಗುವವರೆಗೆ ಅಧಿಕಾರಿಗಳು ಅದರ ಬಗ್ಗೆ ನಿಗಾ ವಹಿಸಬೇಕು ಎಂದು ಸೂಚಿಸಿದರು.

ಸರ್ಕಾರ ಮತ್ತು ಜನರ ನಡುವಿನ ಅಂತರವನ್ನು ಕಡಿಮೆ ಮಾಡುವ ಉದ್ದೇಶದಿಂದ ಸ್ಥಾಪಿಸಲಾಗುತ್ತಿರುವ ‘ಪ್ರಜಾಸೇವಾ ಇಲಾಖೆ’ ಹೊಸ ಆಲೋಚನೆಯಾಗಿದೆ. ಶಾಸಕರು ಮತ್ತು ಅಧಿಕಾರಿಗಳು ಈ ಇಲಾಖೆಯ ಮೂಲಕ ಜನರ ನಡುವೆ ಸರ್ಕಾರ ಇರುವಂತೆ ನೋಡಿಕೊಳ್ಳಬೇಕು. ಪ್ರತಿ ತಿಂಗಳ ಮೊದಲ ಮತ್ತು ಮೂರನೇ ಶನಿವಾರ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಜನರ ಸಮಸ್ಯೆಗಳನ್ನು ಆಲಿಸಿ, ಸಾಧ್ಯವಾದಷ್ಟು ಸ್ಥಳದಲ್ಲೇ ಪರಿಹರಿಸುವ ವ್ಯವಸ್ಥೆ ರೂಪಿಸಬೇಕು. ಇದೇ ಪ್ರಜಾಸೇವಾ ಇಲಾಖೆಯ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

ಯಾವುದೇ ಪಕ್ಷದ ಶಾಸಕರು ಪ್ರತಿನಿಧಿಸುವ ಕ್ಷೇತ್ರಗಳಿಗೂ ಸಚಿವರು ಭೇಟಿ ನೀಡಿ, ಸ್ಥಳೀಯ ಜನಪ್ರತಿನಿಧಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಜನರ ಅಹವಾಲುಗಳನ್ನು ಸ್ವೀಕರಿಸಿ ಪರಿಹರಿಸಬೇಕು.

ಪ್ರತಿ ಮನೆಗೂ ಸರ್ಕಾರದ ಸೇವೆಗಳು ತಲುಪುತ್ತಿವೆ ಎಂಬ ವಿಶ್ವಾಸವನ್ನು ಜನರಲ್ಲಿ ಮೂಡಿಸಬೇಕು ಎಂದು ಮುಖ್ಯಮಂತ್ರಿ ಹೇಳಿದರು.

ಮುಂದಿನ ವಾರ ಸಚಿವ ಸಂಪುಟ ವಿಸ್ತರಣೆಯಾಗುವ ಸಾಧ್ಯತೆಯಿದ್ದು, ಬಳಿಕ ಎಲ್ಲ ಸಚಿವರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕಾಗುತ್ತದೆ.

ರಾಜ್ಯದ ಬರ ಪರಿಸ್ಥಿತಿಯನ್ನು ಸಮಗ್ರವಾಗಿ ಅವಲೋಕಿಸಿ, ಗ್ರಾಮೀಣ ಪ್ರದೇಶಗಳಲ್ಲಿ ರೈತರ ಬದುಕಿಗೆ ಯಾವುದೇ ತೊಂದರೆಯಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವುದು ಸರ್ಕಾರದ ಪ್ರಮುಖ ಹೊಣೆಗಾರಿಕೆಯಾಗಿದೆ ಎಂದರು.

ಗ್ರಾಮೀಣ ಭಾಗದ ಪ್ರತಿ ವಿಧಾನ ಸಭಾ ಕ್ಷೇತ್ರದಲ್ಲಿ ಕುಡಿಯುವ ನೀರು ಪೂರೈಕೆಗೆ ಜಿಲ್ಲಾಡಳಿತವು 1 ಕೋಟಿವರೆಗೆ ವೆಚ್ಚ ಮಾಡಲು ಅವಕಾಶ ನೀಡಲಾಗಿದೆ.

26/07/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಹೊರವರ್ತುಲ ರಸ್ತೆ ಅಭಿವೃದ್ಧಿಗೆ ಸಮಾಲೋಚನಾ ಸಭೆ

ಬೆಂಗಳೂರು

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯ ಹೊರವರ್ತುಲ ರಸ್ತೆ ಅಭಿವೃದ್ಧಿ ಕುರಿತು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರ ಅಧ್ಯಕ್ಷತೆಯಲ್ಲಿ ಜುಲೈ 25 ಬೆಳಿಗ್ಗೆ 10.30ಕ್ಕೆ ಕಾಡುಬೀಸನಹಳ್ಳಿಯ ಹೀಲಿಯೊಸ್ ಬಿಸಿನೆಸ್ ಪಾರ್ಕ್‌ನಲ್ಲಿರುವ ಗೋಲ್ಡ್‌ಮನ್ ಸ್ಯಾಕ್ಸ್ ಸಭಾಂಗಣದಲ್ಲಿ ಸಮಾಲೋಚನಾ ಸಭೆ ನಡೆಯಲಿದೆ.

ಹೊರವರ್ತುಲ ರಸ್ತೆ ವ್ಯಾಪ್ತಿಯಲ್ಲಿನ ಸಂಚಾರ ದಟ್ಟಣೆ ನಿವಾರಣೆ, ಮೂಲಸೌಕರ್ಯ ಅಭಿವೃದ್ಧಿ, ರಸ್ತೆ ನಿರ್ವಹಣೆ, ಸಾರ್ವಜನಿಕ ಸೌಲಭ್ಯಗಳ ಸುಧಾರಣೆ, ವಿವಿಧ ಇಲಾಖೆಗಳ ನಡುವಿನ ಸಮನ್ವಯ ಹಾಗೂ ಭವಿಷ್ಯದ ಅಭಿವೃದ್ಧಿ ಯೋಜನೆಗಳ ಕುರಿತು ಸಭೆಯಲ್ಲಿ ಸಮಗ್ರ ಚರ್ಚೆ ನಡೆಯಲಿದೆ. ಅಭಿವೃದ್ಧಿ ಕಾರ್ಯಗಳಿಗೆ ಸಂಬಂಧಿಸಿದ ಕಾರ್ಯಯೋಜನೆ ರೂಪಿಸಿ, ವಿವಿಧ ಇಲಾಖೆಗಳ ಸಹಕಾರದೊಂದಿಗೆ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಅಗತ್ಯ ತೀರ್ಮಾನಗಳನ್ನು ಕೈಗೊಳ್ಳುವ ಉದ್ದೇಶದಿಂದ ಸಭೆ ಆಯೋಜಿಸಲಾಗಿದೆ.

ಬಿ–ಸ್ಮೈಲ್ ಯೋಜನೆಯಡಿ ಸಿಲ್ಕ್ ಬೋರ್ಡ್ ಜಂಕ್ಷನ್‌ನಿಂದ ಬೈಯ್ಯಪ್ಪನಹಳ್ಳಿ ಮೆಟ್ರೋ ನಿಲ್ದಾಣದವರೆಗೆ 17.1 ಕಿ.ಮೀ. ಉದ್ದದ ಹೊರವರ್ತುಲ ರಸ್ತೆಯನ್ನು ಜಾಗತಿಕ ಮಟ್ಟದ ವಿನ್ಯಾಸ ಮತ್ತು ಗುಣಮಟ್ಟಕ್ಕೆ ಅನುಗುಣವಾಗಿ ಅಭಿವೃದ್ಧಿಪಡಿಸಲು ಯೋಜನೆ ರೂಪಿಸಲಾಗಿದೆ. ಈ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಭೆಯಲ್ಲಿ ಪ್ರಮುಖವಾಗಿ ಚರ್ಚೆ ನಡೆಯಲಿದೆ.

ಸಭೆಯಲ್ಲಿ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಮುಖ್ಯ ಆಯುಕ್ತರು, ಬೆಂಗಳೂರು ಪೂರ್ವ ಮತ್ತು ಬೆಂಗಳೂರು ದಕ್ಷಿಣ ನಗರ ಪಾಲಿಕೆಗಳ ಆಯುಕ್ತರು, ಬೆಂಗಳೂರು ಮೆಟ್ರೋ ರೈಲು ನಿಗಮ, ಬೆಂಗಳೂರು ಜಲ ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಕರ್ನಾಟಕ ರೈಲು ಮೂಲಸೌಕರ್ಯ ಅಭಿವೃದ್ಧಿ ಸಂಸ್ಥೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ಹಾಗೂ ಬೆಂಗಳೂರು ಘನ ತ್ಯಾಜ್ಯ ನಿರ್ವಹಣಾ ಸಂಸ್ಥೆಯ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ.

ಇದಲ್ಲದೆ, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಪ್ರಧಾನ ಅಭಿಯಂತರರು ಹಾಗೂ ಬಿ–ಸ್ಮೈಲ್‌ನ ತಾಂತ್ರಿಕ ನಿರ್ದೇಶಕರು, ಭಾರತ್ ಸಂಚಾರ ನಿಗಮ, ಗೇಲ್ ಸಂಸ್ಥೆಗಳ ಅಧಿಕಾರಿಗಳು, ಹೊರವರ್ತುಲ ರಸ್ತೆ ಕಾರ್ಮಿಕರ ಸಂಘದ ಪ್ರತಿನಿಧಿಗಳು, ವಿವಿಧ ಕಂಪನಿಗಳ ಪ್ರತಿನಿಧಿಗಳು, ಉದ್ಯಮಿಗಳು ಹಾಗೂ ಅಭಿವೃದ್ಧಿದಾರರು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಹೊರವರ್ತುಲ ರಸ್ತೆಯ ಅಭಿವೃದ್ಧಿಯನ್ನು ಸಮಗ್ರವಾಗಿ ಕೈಗೊಳ್ಳಲು ಅಗತ್ಯವಿರುವ ಎಲ್ಲ ಇಲಾಖೆಗಳ ಸಮನ್ವಯದ ಕುರಿತು ಸಭೆಯಲ್ಲಿ ನಿರ್ಣಯ ಕೈಗೊಳ್ಳುವ ನಿರೀಕ್ಷೆಯಿದೆ.

# ಅಕ್ಷರ್ ಯೋಗ ಕೇಂದ್ರಕ್ಕೆ 21 ಹೊಸ ಗಿನ್ನೆಸ್ ವಿಶ್ವ ದಾಖಲೆ

ಬೆಂಗಳೂರು

ಹಿಮಾಲಯದ ಯೋಗ ವಿಜ್ಞಾನವನ್ನು ಸಂರಕ್ಷಿಸಿ, ವಿಶ್ವದಾದ್ಯಂತ ಪ್ರಚಾರ ಮಾಡುವ ಅಂತರರಾಷ್ಟ್ರೀಯ ಖ್ಯಾತಿಯ ಸಂಸ್ಥೆಯಾದ ಅಕ್ಷರ್ ಯೋಗ ಕೇಂದ್ರವು 21 ಹೊಸ ಗಿನ್ನೆಸ್ ವಿಶ್ವ ದಾಖಲೆಗಳನ್ನು ತನ್ನ ಹೆಸರಿಗೆ ಸೇರಿಸಿಕೊಂಡಿದ್ದು, ಇದರೊಂದಿಗೆ ಸಂಸ್ಥೆಯ ಒಟ್ಟು ಗಿನ್ನೆಸ್ ವಿಶ್ವ ದಾಖಲೆಗಳ ಸಂಖ್ಯೆ 42ಕ್ಕೆ ಏರಿಕೆಯಾಗಿದೆ.



ಈ ಐತಿಹಾಸಿಕ ಸಾಧನೆಯನ್ನು ಸ್ಮರಿಸುವ ಉದ್ದೇಶದಿಂದ ಅಕ್ಷರ್ ಯೋಗ ಕೇಂದ್ರದ ವತಿಯಿಂದ 'ಗ್ಲೋಬಲ್ ಯೋಗ ಎಕ್ಸಲೆನ್ಸ್ ಅವಾರ್ಡ್ಸ್ ಹಾಗೂ ಗಿನ್ನೆಸ್ ವಿಶ್ವ ದಾಖಲೆಗಳ ಸಂಭ್ರಮ 2026' ಕಾರ್ಯಕ್ರಮವನ್ನು ಶನಿವಾರ ಬೆಂಗಳೂರಿನ ಶೆರಾಟನ್ ಗ್ರ್ಯಾಂಡ್‌ನಲ್ಲಿ ಆಯೋಜಿಸಲಾಗಿತ್ತು. ಈ ಸಂದರ್ಭದಲ್ಲಿ ದಾಖಲೆ ನಿರ್ಮಾಣದ ಯಶಸ್ಸಿಗೆ ಶ್ರಮಿಸಿದ ವ್ಯಕ್ತಿಗಳು, ಶಿಕ್ಷಣ ಸಂಸ್ಥೆಗಳು, ಸ್ವಯಂಸೇವಕರು, ಸಹಭಾಗಿತ್ವ ಸಂಸ್ಥೆಗಳು ಹಾಗೂ ಸಾವಿರಾರು ಭಾಗವಹಿಸಿದವರನ್ನು ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ 80ಕ್ಕೂ ಹೆಚ್ಚು ದೇಶಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

ಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿ, ಆದಿಚುಂಚನಗಿರಿ ವಿಶ್ವವಿದ್ಯಾಲಯದ ಗೌರವಾನ್ವಿತ ಕುಲಾಧಿಪತಿಗಳು, ಮಲ್ಲೇಶ್ವರ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಕರ್ನಾಟಕದ ಮಾಜಿ ಉಪಮುಖ್ಯಮಂತ್ರಿಗಳಾದ ಡಾ. ಸಿ.ಎನ್. ಅಶ್ವತ್ಥನಾರಾಯಣ, ಶಾಂತಿನಗರ ಕ್ಷೇತ್ರದ ಶಾಸಕರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಅಖಿಲ ಭಾರತ ಫುಟ್‌ಬಾಲ್ ಫೆಡರೇಶನ್‌ನ ಉಪಾಧ್ಯಕ್ಷರಾದ ಎನ್.ಎ. ಹ್ಯಾರಿಸ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್, ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರಾದ ಸೌಮೇಂದು ಮುಖರ್ಜಿ ಮತ್ತು ಎಸ್. ಮುರುಗನ್, ಗಡಿ ಭದ್ರತಾ ಪಡೆಯ ಬೆಂಗಳೂರು ಫ್ರಾಂಟಿಯರ್‌ನ ಮಹಾನಿರೀಕ್ಷಕ ದಿನೇಶ್ ಕುಮಾರ್ ಯಾದವ್ ಹಾಗೂ ಕೇಂದ್ರ ಮೀಸಲು ಪೊಲೀಸ್ ಪಡೆಯ ಬೆಂಗಳೂರು ಗ್ರೂಪ್ ಸೆಂಟರ್‌ನ ಉಪ ಮಹಾನಿರೀಕ್ಷಕ ಪದ್ಮ ಕುಮಾರ್ ಎ. ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# 6.25 ಕಿ.ಮೀ. ಮಾರ್ಗ ಅತಿಕ್ರಮಣ ಮುಕ್ತ

ಬೆಂಗಳೂರು

ಪಾದಚಾರಿಗಳಿಗೆ ಸುರಕ್ಷಿತ, ಸುಗಮ ಹಾಗೂ ಅಡೆತಡೆಯಿಲ್ಲದ ಸಂಚಾರ ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ ಮುಂದುವರಿದಿದ್ದು, ಇಂದು ಒಟ್ಟು 6.25 ಕಿ.ಮೀ. ಉದ್ದದ ಪಾದಚಾರಿ ಮಾರ್ಗವನ್ನು ಅತಿಕ್ರಮಣ ಮುಕ್ತಗೊಳಿಸಲಾಗಿದೆ.

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರ ನಿರ್ದೇಶನದಂತೆ ಹಾಗೂ ಬೆಂಗಳೂರು ಉತ್ತರ ನಗರ ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಅವರ ಮಾರ್ಗದರ್ಶನದಲ್ಲಿ ವಿವಿಧ ವಿಭಾಗಗಳಲ್ಲಿ ಕಾರ್ಯಾಚರಣೆ ನಡೆಸಲಾಯಿತು.

ಬ್ಯಾಟರಾಯನಪುರ ವಿಭಾಗದಲ್ಲಿ ಜಕ್ಕೂರು ಡಬಲ್ ರಸ್ತೆಯ ಬಳ್ಳಾರಿ ರಸ್ತೆಯಿಂದ ಜಕ್ಕೂರು ಮಾರ್ಗವಾಗಿ ಜಕ್ಕೂರು ಡಬಲ್ ರಸ್ತೆವರೆಗೆ 1.25 ಕಿ.ಮೀ. ಹಾಗೂ ಬಳ್ಳಾರಿ ರಸ್ತೆಯಿಂದ ಕೆಂಪೇಗೌಡ ವೃತ್ತದವರೆಗೆ 2.50 ಕಿ.ಮೀ. ಉದ್ದದ ಪಾದಚಾರಿ ಮಾರ್ಗವನ್ನು ಒತ್ತುವರಿ ಮುಕ್ತಗೊಳಿಸಲಾಯಿತು. ದಾಸರಹಳ್ಳಿ ವಿಭಾಗದಲ್ಲಿ ಬಾಗಲಗುಂಟೆ ಅರ್ಚ್‌ನಿಂದ ಕೆನರಾ ಬ್ಯಾಂಕ್ ವೃತ್ತದವರೆಗೆ, ರಾಷ್ಟ್ರೀಯ ಹೆದ್ದಾರಿ–4 ಮಾರ್ಗದಲ್ಲಿ 2.50 ಕಿ.ಮೀ. ಉದ್ದದ ಪಾದಚಾರಿ ಮಾರ್ಗವನ್ನು ತೆರವುಗೊಳಿಸಲಾಯಿತು.

ಕಾರ್ಯಾಚರಣೆ ವೇಳೆ 8 ಅಂಗಡಿ ಮತ್ತು ಪೆಟ್ಟಿ ಅಂಗಡಿಗಳು, 16 ತಳ್ಳುವ ಗಾಡಿಗಳು, 48 ಶೀಟ್‌ಗಳು, ಕೆನೋಪಿಗಳು ಮತ್ತು ಮೇಲ್ಛಾವಣಿಗಳು, 50 ಮೆಟ್ಟಿಲುಗಳು ಹಾಗೂ ಯಾರ್ಂಪ್‌ಗಳು, 56 ಜಾಹೀರಾತು ಮತ್ತು ನಾಮಫಲಕಗಳನ್ನು ತೆರವುಗೊಳಿಸಲಾಗಿದೆ. ಇದರ ಜೊತೆಗೆ ಒಂದು ತಾತ್ಕಾಲಿಕ ಶೆಡ್‌ನ್ನು ತೆರವುಗೊಳಿಸಲಾಗಿದ್ದು, 44



ಟನ್ ಕಟ್ಟಡ ತ್ಯಾಜ್ಯ, ಮಣ್ಣು ಹಾಗೂ ಧೂಳನ್ನು ಸ್ಥಳದಿಂದ ತೆರವುಗೊಳಿಸಲಾಗಿದೆ.

ಬ್ಯಾಟರಾಯನಪುರ ವಿಭಾಗದಲ್ಲಿ ಜಕ್ಕೂರು ಡಬಲ್ ರಸ್ತೆಯ ಬಳ್ಳಾರಿ ರಸ್ತೆಯಿಂದ ಜಕ್ಕೂರು ಮಾರ್ಗವಾಗಿ ಜಕ್ಕೂರು ಡಬಲ್ ರಸ್ತೆವರೆಗೆ 1.25 ಕಿ.ಮೀ. ಹಾಗೂ ಬಳ್ಳಾರಿ ರಸ್ತೆಯಿಂದ ಕೆಂಪೇಗೌಡ ವೃತ್ತದವರೆಗೆ 2.50 ಕಿ.ಮೀ. ಉದ್ದದ ಪಾದಚಾರಿ ಮಾರ್ಗವನ್ನು ಒತ್ತುವರಿ ಮುಕ್ತಗೊಳಿಸಲಾಯಿತು.

ದಾಸರಹಳ್ಳಿ ವಿಭಾಗದಲ್ಲಿ ಬಾಗಲಗುಂಟೆ ಅರ್ಚ್‌ನಿಂದ ಕೆನರಾ ಬ್ಯಾಂಕ್ ವೃತ್ತದವರೆಗೆ, ರಾಷ್ಟ್ರೀಯ ಹೆದ್ದಾರಿ–4 ಮಾರ್ಗದಲ್ಲಿ 2.50 ಕಿ.ಮೀ. ಉದ್ದದ ಪಾದಚಾರಿ ಮಾರ್ಗವನ್ನು ತೆರವುಗೊಳಿಸಲಾಯಿತು.

ಕಾರ್ಯಾಚರಣೆ ವೇಳೆ 8 ಅಂಗಡಿ ಮತ್ತು ಪೆಟ್ಟಿ ಅಂಗಡಿಗಳು, 16 ತಳ್ಳುವ ಗಾಡಿಗಳು, 48 ಶೀಟ್‌ಗಳು, ಕೆನೋಪಿಗಳು ಮತ್ತು ಮೇಲ್ಛಾವಣಿಗಳು, 50 ಮೆಟ್ಟಿಲುಗಳು ಹಾಗೂ ಯಾರ್ಂಪ್‌ಗಳು, 56 ಜಾಹೀರಾತು ಮತ್ತು ನಾಮಫಲಕಗಳನ್ನು ತೆರವುಗೊಳಿಸಲಾಗಿದೆ.

ಇದರ ಜೊತೆಗೆ ಒಂದು ತಾತ್ಕಾಲಿಕ ಶೆಡ್‌ನ್ನು ತೆರವುಗೊಳಿಸಲಾಗಿದ್ದು, 44 ಟನ್ ಕಟ್ಟಡ ತ್ಯಾಜ್ಯ, ಮಣ್ಣು ಹಾಗೂ ಧೂಳನ್ನು ಸ್ಥಳದಿಂದ ತೆರವುಗೊಳಿಸಲಾಗಿದೆ.

ಒತ್ತುವರಿ ತೆರವು ಕಾರ್ಯಾಚರಣೆಗೆ 3 ಜೆಸಿಬಿಗಳು, 5 ಟ್ರ್ಯಾಕ್ಟರ್‌ಗಳು, 1 ಟಿಪ್ಪರ್ ಸೇರಿದಂತೆ ಒಟ್ಟು 30 ಸಿಬ್ಬಂದಿ ಮತ್ತು ಕಾರ್ಮಿಕರನ್ನು ಬಳಸಿಕೊಳ್ಳಲಾಗಿದೆ. ಪಾದಚಾರಿ ಮಾರ್ಗಗಳನ್ನು ಸಾರ್ವಜನಿಕರ ಸುಗಮ ಸಂಚಾರಕ್ಕೆ ಮುಕ್ತಗೊಳಿಸುವ ಕಾರ್ಯಾಚರಣೆ ಮುಂದಿನ ದಿನಗಳಲ್ಲಿಯೂ ಮುಂದುವರಿಯಲಿದೆ ಎಂದು ನಗರ ಪಾಲಿಕೆ ಅಧಿಕಾರಿಗಳು ತಿಳಿಸಿದ್ದಾರೆ.

# ಸಿಎಂಆರ್ ವಿಶ್ವವಿದ್ಯಾಲಯದಲ್ಲಿ 'ಸಿಇಒ ಕಾನ್‌ಕ್ಲೇವ್ 2026' ಯಶಸ್ವಿ

ಬೆಂಗಳೂರು

ನಗರದ ಬಾಗಲೂರಿನಲ್ಲಿರುವ ಸಿಎಂಆರ್ ವಿಶ್ವವಿದ್ಯಾಲಯದ ಲೇಕ್‌ಸೈಡ್ ಕ್ಯಾಂಪಸ್‌ನಲ್ಲಿ 'ಸಿಇಒ ಕಾನ್‌ಕ್ಲೇವ್ 2026' ಯಶಸ್ವಿಯಾಗಿ ನಡೆಯಿತು. ಭವಿಷ್ಯದ ಉದ್ಯೋಗ ಕ್ಷೇತ್ರ, ಅಗತ್ಯ ಕೌಶಲ್ಯಗಳು ಹಾಗೂ ಹೊಸ ತಂತ್ರಜ್ಞಾನಗಳ ಪ್ರಭಾವದ ಕುರಿತು ಚರ್ಚಿಸಲು 52ಕ್ಕೂ ಹೆಚ್ಚು ಸಿಇಒಗಳು, ನಿರ್ದೇಶಕರು, ಹಿರಿಯ ವ್ಯವಸ್ಥಾಪಕರು ಹಾಗೂ ವಿವಿಧ ಪ್ರಮುಖ ಉದ್ಯಮಗಳ ನಾಯಕರು ಕಾರ್ಯಕ್ರಮದಲ್ಲಿ ಭಾಗವಹಿಸಿ ವಿಚಾರ ವಿನಿಮಯ ನಡೆಸಿದರು.

ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿದ್ದ 'ಭವಿಷ್ಯದ ಉದ್ಯೋಗ ಕ್ಷೇತ್ರ, ಕೌಶಲ್ಯ, ತಂತ್ರಜ್ಞಾನ ಮತ್ತು ಹೊಂದಾಣಿಕೆ' ವಿಷಯದ ವಿಚಾರಗೋಷ್ಠಿಯಲ್ಲಿ ಎಚ್‌ಎಐ ಸೂಟ್‌ಕೇಸ್ ಕ್ಲಿನಿಕ್ಸ್ ಸಂಸ್ಥೆಯ ಸಿಇಒ ಸತ್ಯಜೀತ್ ಪ್ರಧಾನ, ವೆಕ್ಟರ್ ಇನ್ಫಾರ್ಮ್ಯಾಟಿಕ್ ಸಂಸ್ಥೆಯ ಅಧ್ಯಕ್ಷ ಹಾಗೂ ವ್ಯವಸ್ಥಾಪಕ ನಿರ್ದೇಶಕ ಬ್ರಹ್ಮಾನಂದ ಪಾಟೀಲ್, ಅಲ್ಗೋಶ್ಯಾಕ್ ಟೆಕ್ನಾಲಜೀಸ್



ಸಂಸ್ಥಾಪಕ ಹಾಗೂ ಸಿಇಒ ವದೀಶ್ ಬುಡ್ರಮನೆ, ಸಿಸ್ಮಿಕ್ ಇಂಡಿಯಾ ವ್ಯವಸ್ಥಾಪಕ ನಿರ್ದೇಶಕ ಪ್ರಮೋದ್ ಅಗ್ರವಾಲ್ ಹಾಗೂ ಆರ್ಟೇರಿಯಾ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್ ಸಹ–ಸಂಸ್ಥಾಪಕ ಹಾಗೂ ಸಿಇಒ ಶ್ರೀರಾಮ್ ಕನೂರಿ ಭಾಗವಹಿಸಿದ್ದರು.

ವಿಚಾರಗೋಷ್ಠಿಯಲ್ಲಿ ಮಾತನಾಡಿದ ಉದ್ಯಮ ತಜ್ಞರು, ಮುಂದಿನ ದಿನಗಳಲ್ಲಿ ಉದ್ಯೋಗ ಕ್ಷೇತ್ರದಲ್ಲಿ ಬದಲಾವಣೆಗಳಿಗೆ ಹೊಂದಿಕೊಳ್ಳುವ ಸಾಮರ್ಥ್ಯ, ವಿವಿಧ ಕ್ಷೇತ್ರಗಳ ಜ್ಞಾನ, ಪರಿಣಾಮಕಾರಿ ಸಂವಹನ ಕೌಶಲ್ಯ ಮತ್ತು ಕೃತಕ ಬುದ್ಧಿಮತ್ತೆಯ ಕುರಿತು ಅರಿವು ಅತ್ಯಂತ ನಿರ್ಣಾಯಕವಾಗಲಿದೆ ಎಂದು ಅಭಿಪ್ರಾಯಪಟ್ಟರು.

# ಫುಟ್‌ಪಾತ್ ಒತ್ತುವರಿ ತೆರವುಗೊಳಿಸಿದ ಜಿಬಿಎ ಯೋಧರಿಗೆ ಸನ್ಮಾನ



ಬೆಂಗಳೂರು

ಸರ್ಕಾರ ಎಷ್ಟೇ ಜನಪರ ಯೋಜನೆಗಳನ್ನು ರೂಪಿಸಿದರೂ, ಅವುಗಳನ್ನು ಪರಿಣಾಮಕಾರಿಯಾಗಿ ಜನರಿಗೆ ತಲುಪಿಸುವಲ್ಲಿ ನಿಷ್ಠಾವಂತ ಅಧಿಕಾರಿಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಹೇಳಿದ್ದಾರೆ.

ಸಮಾಜಘಾತಕ ಶಕ್ತಿಗಳ ಜೀವ ಬೆದರಿಕೆಗೂ ಹೆದರದೆ ಶಿವಾಜಿನಗರದಲ್ಲಿ ಫುಟ್‌ಪಾತ್ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಿ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾದ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕಾರಿಗಳನ್ನು ವಿಕಾಸಸೌಧದಲ್ಲಿರುವ ತಮ್ಮ ಕಚೇರಿಯಲ್ಲಿ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಿದ ಅವರು, ಕರ್ತವ್ಯನಿಷ್ಠ ಅಧಿಕಾರಿಗಳೇ ಇಲಾಖೆ ಹಾಗೂ ಸರ್ಕಾರದ ನಿಜವಾದ ಶಕ್ತಿ ಎಂದು ಶ್ಲಾಘಿಸಿದರು.

ಶಿವಾಜಿನಗರದಲ್ಲಿ ಸಾರ್ವಜನಿಕರ ಸುಗಮ ಹಾಗೂ ಸುರಕ್ಷಿತ ಸಂಚಾರಕ್ಕೆ ಅಡ್ಡಿಯಾಗಿದ್ದ ಫುಟ್‌ಪಾತ್ ಒತ್ತುವರಿಗಳನ್ನು ತೆರವುಗೊಳಿಸುವ ಸಂದರ್ಭದಲ್ಲಿ ಧೈರ್ಯದಿಂದ ಕಾರ್ಯನಿರ್ವಹಿಸಿದ ಕಾರ್ಯಪಾಲಕ ಅಭಿಯಂತರ ಆತಿಫ್, ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಮಾಧವರಾವ್ ಮತ್ತು ಸಾವಿತ್ರಿ, ಸಹಾಯಕ ಅಭಿಯಂತರ ರುಚಿತಾ, ಇಂಜಿನಿಯರ್ ಗೌತಮ್ ಹಾಗೂ ಜೆಸಿಬಿ ಚಾಲಕರ ಪ್ರತಿನಿಧಿಯನ್ನು ಸಚಿವರು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಮುಖ್ಯ ಆಯುಕ್ತ ಮಹೇಶ್ವರ್ ರಾವ್, ಕೇಂದ್ರ ನಗರ ಪಾಲಿಕೆ ಆಯುಕ್ತ ಜಗದೀಶ್ ಹಾಗೂ ಜಿಬಿಎ ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಎ. ಅಮೃತ್ ರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ವಿವಾದ ಸೃಷ್ಟಿ

ಬೆಂಗಳೂರು

ಇದೇ ವೇಳೆ, ಉಮರ್ ಖಾಲಿದ್ ಪರವಾದ ಪೋಸ್ಟರ್ ಹಿಡಿದು ಪ್ರತಿಭಟನಾ ಸ್ಥಳಕ್ಕೆ ಬಂದಿದ್ದ ಯುವತಿಗೆ ಇತರ ಪ್ರತಿಭಟನಾಕಾರರು ಆಕ್ಷೇಪ ವ್ಯಕ್ತಪಡಿಸಿದರು.

ಇಂತಹ ಪೋಸ್ಟರ್‌ಗಳಿಂದ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿರುದ್ಧ ನಡೆಯುತ್ತಿರುವ ಪ್ರತಿಭಟನೆಯ ಮೂಲ ಉದ್ದೇಶಕ್ಕೆ ಧಕ್ಕೆಯಾಗುತ್ತದೆ ಎಂದು ಹೇಳಿ, ಸ್ಥಳದಿಂದ ತೆರಳುವಂತೆ ಮನವಿ ಮಾಡಿದರು.

ಬಳಿಕ ಯುವತಿ ಪ್ರತಿಭಟನಾ ಸ್ಥಳದಿಂದ ಹೊರನಡೆದರು ಎಂದು ತಿಳಿದುಬಂದಿದೆ. ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಕುರಿತು ನ್ಯಾಯಸಮ್ಮತ ಹಾಗೂ ಸಮಗ್ರ ತನಿಖೆ ನಡೆಸಬೇಕು ಮತ್ತು ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂಬುದು ಪ್ರತಿಭಟನಾಕಾರರ ಪ್ರಮುಖ ಬೇಡಿಕೆಯಾಗಿದೆ.

ಆದರೆ ಪ್ರತಿಭಟನೆಯ ವೇಳೆ ಕಾಣಿಸಿಕೊಂಡ ವಿವಾದಾತ್ಮಕ ಪೋಸ್ಟರ್‌ಗಳು ಪ್ರತಿಭಟನೆಯ ಮೂಲ ಉದ್ದೇಶಕ್ಕಿಂತ ಹೆಚ್ಚಿನ ಗಮನ ಸೆಳೆದಿದ್ದು, ಸಾರ್ವಜನಿಕ ವಲಯದಲ್ಲಿ ಚರ್ಚೆಗೆ ಕಾರಣವಾಗಿವೆ.

# ಫೋನ್–ಇನ್ ಕಾರ್ಯಕ್ರಮದಲ್ಲಿ 73 ಅಹವಾಲುಗಳ ಸ್ವೀಕಾರ

ಬೆಂಗಳೂರು

ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯ ನಾಗರಿಕರ ಕುಂದುಕೊರತೆಗಳನ್ನು ಆಲಿಸಿ, ಅವುಗಳಿಗೆ ತ್ವರಿತ ಪರಿಹಾರ ಕಲ್ಪಿಸುವ ಉದ್ದೇಶದಿಂದ ಪಾಲಿಕೆ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ಶುಕ್ರವಾರ ನಡೆದ ಫೋನ್–ಇನ್ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ವಿವಿಧ ಇಲಾಖೆಗಳ ವ್ಯಾಪ್ತಿಗೆ ಸಂಬಂಧಿಸಿದ 73 ಅಹವಾಲುಗಳನ್ನು ಸ್ವೀಕರಿಸಲಾಯಿತು.

ಕಾರ್ಯಕ್ರಮದಲ್ಲಿ ಒಟ್ಟು 56 ಕರೆಗಳು ಸ್ವೀಕರಿಸಲಾಗಿದ್ದು, ದಾಖಲಾದ ಅಹವಾಲುಗಳನ್ನು ಆದ್ಯತೆ ಮೇರೆಗೆ ಪರಿಶೀಲಿಸಿ ಶೀಘ್ರವಾಗಿ ಪರಿಹರಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಆಯುಕ್ತರು ಸೂಚಿಸಿದರು.

ರಸ್ತೆ ನಿರ್ವಹಣೆ ಹಾಗೂ ಎಂಜಿನಿಯರಿಂಗ್ ಇಲಾಖೆಗೆ ಸಂಬಂಧಿಸಿದಂತೆ 33 ಅಹವಾಲುಗಳು ದಾಖಲಾಗಿವೆ. ಇದರಲ್ಲಿ ಕಟ್ಟಡ ತ್ಯಾಜ್ಯ ಮತ್ತು ನಿರ್ಮಾಣ ಸಾಮಗ್ರಿ ತೆರವು ಕುರಿತು 11, ರಸ್ತೆ ಕತ್ತರಿಸುವಿಕೆ ಕುರಿತು 6, ರಸ್ತೆ ಬದಿಯ ಚರಂಡಿಗಳಿಗೆ ಸಂಬಂಧಿಸಿದ 6, ಪಾದಚಾರಿ ಮಾರ್ಗ ಒತ್ತುವರಿ ಕುರಿತು 4, ಅನಧಿಕೃತ ಕಟ್ಟಡಗಳ ಕುರಿತು 4, ಪಾದಚಾರಿ ಮಾರ್ಗ ನಿರ್ವಹಣೆ ಕುರಿತು 2 ಹಾಗೂ ಫ್ಲೆಕ್ಸ್ ಮತ್ತು ಬ್ಯಾನರ್‌ಗಳಿಗೆ ಸಂಬಂಧಿಸಿದ



ಒಂದು ಅಹವಾಲು ಸೇರಿವೆ.

ಇದಲ್ಲದೆ, ಘನ ತ್ಯಾಜ್ಯ ನಿರ್ವಹಣೆಗೆ 7, ಇ–ಖಾತಾ ಮತ್ತು ಖಾತಾ ಸೇವೆಗಳಿಗೆ 10, ಅರಣ್ಯ ಇಲಾಖೆಗೆ 9, ಆರೋಗ್ಯ ಇಲಾಖೆಗೆ 2, ವಿದ್ಯುತ್ ಸಂಬಂಧಿತ 5, ಉದ್ಯಾನವನ ಮತ್ತು ಆಟದ ಮೈದಾನಗಳಿಗೆ 2, ಸಂಚಾರ ಎಂಜಿನಿಯರ್ ಘಟಕಕ್ಕೆ 2, ಪಶುವೈದ್ಯಕೀಯ ಇಲಾಖೆಗೆ 2 ಹಾಗೂ ಜಾಹೀರಾತು ಸಂಬಂಧಿತ ಒಂದು ಅಹವಾಲು ದಾಖಲಾಗಿದೆ. ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ಪಾಲಿಕೆಯ ಗಮನಕ್ಕೆ ತಂದಿದ್ದು, ಅವುಗಳನ್ನು ತ್ವರಿತವಾಗಿ ಪರಿಶೀಲಿಸಿ ಆದ್ಯತೆ ಮೇರೆಗೆ ಬಗೆಹರಿಸುವಂತೆ ಆಯುಕ್ತರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಬೆಂಗಳೂರು ಉತ್ತರ ನಗರ ಪಾಲಿಕೆಯಲ್ಲಿ 2025ರ ಸೆಪ್ಟೆಂಬರ್ 26ರಿಂದ ನಿರಂತರವಾಗಿ ಫೋನ್–ಇನ್ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಜುಲೈ 24, 2026ರವರೆಗೆ ಒಟ್ಟು 2,055 ಕರೆಗಳನ್ನು ಸ್ವೀಕರಿಸಲಾಗಿದ್ದು, 2,651 ಅಹವಾಲುಗಳು ದಾಖಲಾಗಿವೆ. ಈ ಪೈಕಿ 2,302 ಅಹವಾಲುಗಳನ್ನು ಇತ್ಯರ್ಥಪಡಿಸಲಾಗಿದೆ. ದೀರ್ಘಾವಧಿ ಪರಿಹಾರಕ್ಕೆ ಸಂಬಂಧಿಸಿದ 8 ಅಹವಾಲುಗಳು, ಪ್ರಗತಿಯಲ್ಲಿರುವ 2 ಅಹವಾಲುಗಳು ಹಾಗೂ ಪಾಲಿಕೆ ವ್ಯಾಪ್ತಿಗೆ ಸಂಬಂಧಿಸದ 162 ಅಹವಾಲುಗಳಿವೆ. 17 ಅಹವಾಲುಗಳನ್ನು ಮರುತೆರೆಯಲಾಗಿದ್ದು, 233 ಅಹವಾಲುಗಳು ಬಾಕಿ ಉಳಿದಿವೆ.

ಕಾರ್ಯಕ್ರಮದಲ್ಲಿ ಅಪರ ಆಯುಕ್ತರು ಹಾಗೂ ಕಂದಾಯ ಪ್ರಭಾರ ಜಂಟಿ ಆಯುಕ್ತೆ ಪಲ್ಲವಿ, ಜಂಟಿ ಆಯುಕ್ತ ಮೊಹಮ್ಮದ್ ನಯೀಮ್ ಮೊಮಿನ್, ಉಪ ಆಯುಕ್ತರಾದ ಸೋಮಶೇಖರ್, ಅಮರೇಗೌಡ ಮಾಲಿಪಾಟೀಲ್, ಮಂಗಳಗೌರಿ, ಮುಖ್ಯ ಅಭಿಯಂತರರು, ಬೆಂಗಳೂರು ಜಲಮಂಡಳಿ, ಸಂಚಾರ ಪೊಲೀಸ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಎಲ್‌ಪಿಎಲ್ 2026ಕ್ಕೆ ಭಾರತದ ಪಿಯೂಷ್ ಚಾವ್ಲಾ, ವಿಜಯ್ ಶಂಕರ್ ಎಂಟ್ರಿ

ಬೆಂಗಳೂರು

ಭಾರತದ ಅನುಭವಿ ಕ್ರಿಕೆಟಿಗರಾದ ವಿಜಯ್ ಶಂಕರ್ ಮತ್ತು ಪಿಯೂಷ್ ಚಾವ್ಲಾ ಮುಂಬರುವ ಲಂಕಾ ಪ್ರೀಮಿಯರ್ ಲೀಗ್ (ಎಲ್‌ಪಿಎಲ್) 2026ರ ಪಂದ್ಯಾವಳಿಯಲ್ಲಿ ಕಣಕ್ಕಿಳಿಯಲಿದ್ದಾರೆ. ಭಾರತೀಯ ಆಟಗಾರರ ಸೇರ್ಪಡೆಯೊಂದಿಗೆ ಶ್ರೀಲಂಕಾದ ಪ್ರಮುಖ ಟಿ20 ಟೂರ್ನಿಗೆ ಮತ್ತಷ್ಟು ಅಂತರರಾಷ್ಟ್ರೀಯ ಮೆರುಗು ಸಿಕ್ಕಿದ್ದು, ಭಾರತದಲ್ಲಿಯೂ ಪಂದ್ಯಾವಳಿಯ ಮೇಲಿನ ಆಸಕ್ತಿ ಹೆಚ್ಚಾಗುವ ನಿರೀಕ್ಷೆ ಮೂಡಿದೆ.

ಬಹುಮುಖ ಆಲ್‌ರೌಂಡರ್ ವಿಜಯ್ ಶಂಕರ್ ಕ್ಯಾಂಡಿ ರಾಯಲ್ಸ್ ತಂಡವನ್ನು ಪ್ರತಿನಿಧಿಸಲಿದ್ದರೆ, ಅನುಭವಿ ಲೆಗ್ ಸ್ಪಿನ್ನರ್ ಪಿಯೂಷ್ ಚಾವ್ಲಾ ಜಾಫ್ನಾ ಕಿಂಗ್ಸ್ ತಂಡದ ಪರ ಆಡಲಿದ್ದಾರೆ. ಐಪಿಎಲ್ ಸೇರಿದಂತೆ ಉನ್ನತ ಮಟ್ಟದ ಕ್ರಿಕೆಟ್‌ನಲ್ಲಿ ಸುದೀರ್ಘ ಅನುಭವ ಹೊಂದಿರುವ ಇಬ್ಬರು ಆಟಗಾರರ ಸೇರ್ಪಡೆ ಆಯಾ ಫ್ರಾಂಚೈಸಿಗಳಿಗೆ ಹೆಚ್ಚಿನ ಬಲ ನೀಡಲಿದೆ.

ದಕ್ಷಿಣ ಏಷ್ಯಾದ ಫ್ರಾಂಚೈಸಿ ಕ್ರಿಕೆಟ್‌ನಲ್ಲಿ ಎಲ್‌ಪಿಎಲ್ ತನ್ನದೇ ಆದ ಸ್ಥಾನವನ್ನು ನಿರ್ಮಿಸಿಕೊಳ್ಳುತ್ತಿದೆ. ವಿವಿಧ ದೇಶಗಳ ಅನುಭವಿ ಆಟಗಾರರು ಲಂಕಾ ಪ್ರೀಮಿಯರ್ ಲೀಗ್‌ನತ್ತ ಮುಖ ಮಾಡುತ್ತಿರುವುದು ಟೂರ್ನಿಯ ಜನಪ್ರಿಯತೆ ಮತ್ತು ಸ್ಪರ್ಧಾತ್ಮಕತೆಯನ್ನು ಮತ್ತಷ್ಟು ಹೆಚ್ಚಿಸಿದೆ. ಇದೀಗ ಭಾರತೀಯ ಆಟಗಾರರ ಸೇರ್ಪಡೆಯಿಂದ ಲೀಗ್‌ಗೆ ಮತ್ತಷ್ಟು ಜಾಗತಿಕ ಗಮನ ಸೆಳೆಯುವ ನಿರೀಕ್ಷೆಯಿದೆ.

ವಿಜಯ್ ಶಂಕರ್ ಮತ್ತು ಪಿಯೂಷ್ ಚಾವ್ಲಾ ಅವರ ಅನುಭವವು ಮೈದಾನದ ಪ್ರದರ್ಶನಕ್ಕೆ ಮಾತ್ರ ಸೀಮಿತವಾಗದೆ, ಶ್ರೀಲಂಕಾದ ಯುವ ಹಾಗೂ ಉದಯೋನ್ಮುಖ ಕ್ರಿಕೆಟಿಗರಿಗೆ ಅಮೂಲ್ಯ ಕಲಿಕೆಯ ಅವಕಾಶವಾಗಲಿದೆ. ಹೈ–ಪ್ರೆಷರ್ ಟಿ20 ಪಂದ್ಯಗಳ ಅನುಭವ ಹೊಂದಿರುವ ಈ ಆಟಗಾರರೊಂದಿಗೆ ತರಬೇತಿ ಪಡೆಯುವುದು, ಪೈಪೋಟಿ ನಡೆಸುವುದು ಮತ್ತು ಡ್ರೆಸ್ಸಿಂಗ್ ರೂಮ್ ಹಂಚಿಕೊಳ್ಳುವುದು ಶ್ರೀಲಂಕಾದ ಆಟಗಾರರಿಗೆ ತಾಂತ್ರಿಕ ಜ್ಞಾನ, ಪಂದ್ಯದ ಸಿದ್ಧತೆ ಹಾಗೂ ಒತ್ತಡದ ಸಂದರ್ಭಗಳನ್ನು ನಿಭಾಯಿಸುವ ಸಾಮರ್ಥ್ಯವನ್ನು ಬೆಳೆಸಿಕೊಳ್ಳಲು ನೆರವಾಗಲಿದೆ.

# ಗ್ರಾಮೀಣ ಶಾಲೆಗಳ ಎಸ್‌ಎಸ್‌ಎಲ್‌ಸಿ ಫಲಿತಾಂಶ ಭಾರಿ ಏರಿಕೆ

ಚಿತ್ರದುರ್ಗ

ವೇದಾಂತ ಐರನ್ ಅಂಡ್ ಸ್ಟೀಲ್ ಐರನ್ ಓರ್ ಕರ್ನಾಟಕ (ವಿಐಎಸ್‌ಎಲ್–ಐಒಕೆ) ಸಂಸ್ಥೆಯ ಶೈಕ್ಷಣಿಕ ಮಾರ್ಗದರ್ಶನ ಹಾಗೂ ಬೆಂಬಲದಿಂದ ಗ್ರಾಮೀಣ ಚಿತ್ರದುರ್ಗ ಜಿಲ್ಲೆಯ ಶಾಲಾ ಶಿಕ್ಷಣ ಕ್ಷೇತ್ರದಲ್ಲಿ ಗಮನಾರ್ಹ ಬದಲಾವಣೆ ಕಂಡುಬಂದಿದೆ. ಸಂಸ್ಥೆಯ ಬೆಂಬಲಿತ ಶಾಲೆಗಳು 2026ರ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.97ರಷ್ಟು ಉತ್ತೀರ್ಣತೆ ದಾಖಲಿಸುವ ಮೂಲಕ ಐತಿಹಾಸಿಕ ಸಾಧನೆ ಮಾಡಿವೆ. 2025ರಲ್ಲಿ ಇದೇ ಶಾಲೆಗಳ ಉತ್ತೀರ್ಣ ಪ್ರಮಾಣ ಶೇ.78ರಷ್ಟಿತ್ತು.

ವೇದಾಂತ ಐಒಕೆ ಸಂಸ್ಥೆಯ ಪ್ರಮುಖ ಸಿಎಸ್‌ಆರ್ ಯೋಜನೆಯಾದ 'ಪ್ರಾಜೆಕ್ಟ್ ವೃದ್ಧಿ' ಅಡಿಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಯನ್ನು ಹೆಚ್ಚಿಸುವ ಉದ್ದೇಶದಿಂದ 'ಮಾಸ್ಟರ್ ಕ್ಲಾಸ್' ಎಂಬ ವಿಶೇಷ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.




ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಪರೀಕ್ಷೆಯ ನಿರ್ಣಾಯಕ ಹಂತದಲ್ಲಿ ನಿರಂತರ ಮಾರ್ಗದರ್ಶನ, ವಾರಾಂತ್ಯದ ವಿಶೇಷ ತರಬೇತಿ, ಮಾದರಿ ಪರೀಕ್ಷೆಗಳು ಹಾಗೂ ಆತ್ಮವಿಶ್ವಾಸ ಹೆಚ್ಚಿಸುವ ಸಮಾಲೋಚನಾ ಅಧಿವೇಶನಗಳನ್ನು ನಡೆಸಲಾಯಿತು. ಇದರ ಪರಿಣಾಮವಾಗಿ ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ಪರೀಕ್ಷೆ ಎದುರಿಸಿ ಉತ್ತಮ ಅಂಕಗಳನ್ನು ಗಳಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಯೋಜನೆಯ ವ್ಯಾಪ್ತಿಗೆ ಒಳಪಟ್ಟ ನಾಲ್ಕು ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಂದ ಒಟ್ಟು 167 ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಹಾಜರಾಗಿದ್ದರು. ಈ ಪೈಕಿ 162 ವಿದ್ಯಾರ್ಥಿಗಳು ಯಶಸ್ವಿಯಾಗಿ ಉತ್ತೀರ್ಣರಾಗಿದ್ದು, ಶೇ.97ರಷ್ಟು ಫಲಿತಾಂಶ ದಾಖಲಾಗಿದೆ.

ಹಿಂದಿನ ವರ್ಷದ ಶೇ.78ರ ಫಲಿತಾಂಶಕ್ಕೆ ಹೋಲಿಸಿದರೆ ಇದು ಗಮನಾರ್ಹ ಪ್ರಗತಿಯಾಗಿದೆ.

ಈ ಶೈಕ್ಷಣಿಕ ಸಾಧನೆಯು ಗ್ರಾಮೀಣ ಪ್ರದೇಶದ ಬಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಮತ್ತು ವೃತ್ತಿಪರ ಕೋರ್ಸ್‌ಗಳತ್ತ ಹೆಜ್ಜೆ ಇಡಲು ಹೊಸ ಅವಕಾಶಗಳನ್ನು ತೆರೆದಿದೆ. ವೇದಾಂತ ಐಒಕೆ ಸಂಸ್ಥೆಯ ಶೈಕ್ಷಣಿಕ ಬೆಂಬಲ ಮತ್ತು ಮಾರ್ಗದರ್ಶನವು ಗ್ರಾಮೀಣ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯ ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸಿದೆ.

# ರೈಲು ಸಂಚಾರ ನಿಯಂತ್ರಣ

ಹುಬ್ಬಳ್ಳಿ

ಹುಬ್ಬಳ್ಳಿ ವಿಭಾಗದ ಚಿಕ್ಕೋಡಿ ರೋಡ್ ಮತ್ತು ಘಟಪ್ರಭಾ ನಿಲ್ದಾಣಗಳ ನಡುವಿನ ರೈಲು ಹಳಿ ನಿರ್ವಹಣೆ ಕಾಮಗಾರಿ ಹಿನ್ನೆಲೆಯಲ್ಲಿ ನಿರ್ದಿಷ್ಟ ದಿನಗಳಲ್ಲಿ ರೈಲು ಸಂಚಾರವನ್ನು ನಿಯಂತ್ರಿಸಲಾಗುವುದು.

2026ರ ಜುಲೈ 25, 26, 27, 29, 30, 31 ಹಾಗೂ ಆಗಸ್ಟ್ 1, 2, 3, 5, 6, 7, 8, 9, 10, 12, 13 ಮತ್ತು 14ರಂದು ಮೀರಜ್‌ನಿಂದ ಹೊರಡುವ ರೈಲು ಸಂಖ್ಯೆ 17333 ಮೀರಜ್ ಟಿಕ್ಯಾಸಲ್ ರಾಕ್ ದೈನಂದಿನ ಎಕ್ಸ್‌ಪ್ರೆಸ್ ರೈಲಿನ ಸಂಚಾರವನ್ನು ಮಾರ್ಗಮಧ್ಯದಲ್ಲಿ 50 ನಿಮಿಷಗಳ ಕಾಲ ನಿಯಂತ್ರಿಸಲಾಗುವುದು ಎಂದು ರೈಲ್ವೆ ಇಲಾಖೆ ತಿಳಿಸಿದೆ. ಹಳಿ ನಿರ್ವಹಣೆ ಕಾಮಗಾರಿ ಪೂರ್ಣಗೊಳಿಸುವ ಉದ್ದೇಶದಿಂದ ಈ ತಾತ್ಕಾಲಿಕ ಸಂಚಾರ ನಿಯಂತ್ರಣ ಕ್ರಮ ಕೈಗೊಳ್ಳಲಾಗಿದ್ದು, ಪ್ರಯಾಣಿಕರು ತಮ್ಮ ಪ್ರಯಾಣವನ್ನು ಯೋಜಿಸುವಾಗ ರೈಲಿನ ಸಂಚಾರ ಸಮಯದಲ್ಲಿ ಉಂಟಾಗಬಹುದಾದ ವಿಳಂಬವನ್ನು ಗಮನದಲ್ಲಿಟ್ಟುಕೊಳ್ಳುವಂತೆ ರೈಲ್ವೆ ಇಲಾಖೆ ಮನವಿ ಮಾಡಿದೆ.

ಹಳಿ ನಿರ್ವಹಣೆ ಕಾಮಗಾರಿ ಪೂರ್ಣಗೊಳಿಸುವ ಉದ್ದೇಶದಿಂದ ಈ ತಾತ್ಕಾಲಿಕ ಸಂಚಾರ ನಿಯಂತ್ರಣ ಕ್ರಮ ಕೈಗೊಳ್ಳಲಾಗಿದ್ದು, ಪ್ರಯಾಣಿಕರು ತಮ್ಮ ಪ್ರಯಾಣವನ್ನು ಯೋಜಿಸುವಾಗ ರೈಲಿನ ಸಂಚಾರ ಸಮಯದಲ್ಲಿ ಉಂಟಾಗಬಹುದಾದ ವಿಳಂಬವನ್ನು ಗಮನದಲ್ಲಿಟ್ಟುಕೊಳ್ಳುವಂತೆ ರೈಲ್ವೆ ಇಲಾಖೆ ಮನವಿ ಮಾಡಿದೆ.

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಭಾರತ ಸಾರಥಿ
BHARATHA SARATHI KANNADA DAILY NEWS PAPER
26/07/2026



# ಬಿಎಸ್ಸಿ ಪರೀಕ್ಷೆಯಲ್ಲಿ ಸಾಧನೆ




ಬಂಗಾರಪೇಟೆ

ಇಲ್ಲಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿನಿಯರು ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ 2025–26ನೇ ಸಾಲಿನ ಬಿ.ಎಸ್ಸಿ 6ನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ಅಭೂತಪೂರ್ವ ಸಾಧನೆ ಮಾಡುವ ಮೂಲಕ ತಾಲೂಕಿಗೆ ಹೆಮ್ಮೆ ತಂದಿದ್ದಾರೆ.

ಗುರುವಾರ ಪ್ರಕಟಣೆಯಾಗಿರುವ ಫಲಿತಾಂಶದಲ್ಲಿ ಕಾಲೇಜಿನ ವಿದ್ಯಾರ್ಥಿನಿ ಅಖಿಲ ಎಸ್. ಅವರು 700ಕ್ಕೆ 700 ಅಂಕ ಗಳಿಸಿ ಶೇ 100ರಷ್ಟು ಸಾಧನೆ ಮಾಡಿದ್ದರೆ, ಕಾವ್ಯ ಆರ್. ಅವರು 700ಕ್ಕೆ 696 ಅಂಕಗಳನ್ನು ಪಡೆದು ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ ಎಂದು ಪ್ರಾಂಶುಪಾಲರಾದ ಶಕುಂತಲಾ ತಿಳಿಸಿದ್ದಾರೆ. ಸಾಧಕ ವಿದ್ಯಾರ್ಥಿನಿಯರ ಈ ಹೆಮ್ಮೆಯ ಸಾಧನೆಗೆ ಕಾಲೇಜಿನ ಪ್ರಾಂಶುಪಾಲರು ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿ, ಅಭಿನಂದನೆ ಸಲ್ಲಿಸಿದ್ದಾರೆ.

# ಶಿವಶಂಕರ ಸಿ.ಎನ್‌ಗೆ

## ಬೆಂಗಳೂರು ವಿವಿ ಪಿಎಚ್.ಡಿ ಪ್ರದಾನ



ಕೋಲಾರ

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪತ್ರಿಕೋದ್ಯಮ ವಿಭಾಗದ ಅತಿಥಿ ಉಪನ್ಯಾಸಕರಾದ ಶಿವಶಂಕರ ಸಿ.ಎನ್ ಅವರು ಬೆಂಗಳೂರು ವಿವಿ ವಿದ್ಯುನ್ಮಾನ ಮಾಧ್ಯಮ ವಿಭಾಗದ ಪ್ರಾಧ್ಯಾಪಕರಾದ ಡಾ. ಟಿ ಶ್ರೀಪತಿ ಅವರ ಮಾರ್ಗದರ್ಶನದಲ್ಲಿ ಮಂಡಿಸಿದ "ಕನ್ನಡ ಚಲನಚಿತ್ರ ಗೀತೆಗಳಲ್ಲಿ ಜನಪದ ಕಲೆಯ ನಿರೂಪಣೆ: 21ನೇ ಶತಮಾನದ ಚಲನಚಿತ್ರ ಗೀತೆಗಳ ಸಾಹಿತ್ಯ, ಸಂಗೀತ, ನೃತ್ಯ ಮತ್ತು ವೇಷ ಭೂಷಣಗಳ ವಿವರಣಾತ್ಮಕ ಅಧ್ಯಯನ" ಪ್ರೌಢಪ್ರಬಂಧಕ್ಕೆ ಬೆಂಗಳೂರು ವಿಶ್ವವಿದ್ಯಾಲಯ ಪಿಎಚ್.ಡಿ ಪ್ರಕಟಿಸಿದೆ.

# ನೀರು ಸರಬರಾಜು ವ್ಯತ್ಯಯ

ಕೋಲಾರ

ಕೋಲಾರ ನಗರಸಭೆಯ ವ್ಯಾಪ್ತಿಯಲ್ಲಿ ಯರಗೋಳ ನೀರು ಸರಬರಾಜಿಗೆ ಸಂಬಂಧಪಟ್ಟ ಯರಗೋಳ ಡ್ಯಾಂನ ಜಾಕ್‌ವೆಲ್‌ನಲ್ಲಿ ವಿದ್ಯುತ್ ಏರು–ಪೇರಿನಿಂದ ವಿದ್ಯುತ್ ಟ್ರಾನ್ಸ್‌ಫಾರ್ಮ್ ಮತ್ತು ಮೋಟಾರ್ ಪಂಪ್‌ಗಳು ಸುಟ್ಟು ಹೋಗಿದೆ.

ಈ ದುರಸ್ಥಿ ಕೆಲಸಗಳನ್ನು ಪೂರ್ಣಗೊಳಿಸಲು ಜುಲೈ 24 ರಿಂದ 31ರ ವರೆಗೆ ಒಟ್ಟು 7ದಿನಗಳ ಕಾಲ ಕೋಲಾರ ನಗರದಲ್ಲಿ ನೀರು ಸರಬರಾಜು ವ್ಯತ್ಯಯವಾಗಲಿದೆ. ಕೊಳವೆಬಾವಿಗಳಿಂದ ಸರಬರಾಜು ಆಗುವ ನೀರನ್ನು ಮಿತವಾಗಿ ಬಳಸಲು ಹಾಗೂ ಈ ನೀರಿನ ವ್ಯತ್ಯಯಕ್ಕಾಗಿ ಸಾರ್ವಜನಿಕರು ಸಹಕರಿಸಬೇಕೆಂದು ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸೇತುವೆ ನಿರ್ಮಾಣ

## ಕಾಮಗಾರಿ: ಮಾರ್ಗ ಬದಲಾವಣೆ

ತುಮಕೂರು

ತಾಲ್ಲೂಕು ದಾಸಲುಕುಂಟೆ ಕೆರೆ ಕೋಡಿಹಳ್ಳಕ್ಕೆ ಸೇತುವೆ ನಿರ್ಮಾಣ ಕಾಮಗಾರಿ ಕೈಗೊಂಡಿರುವ ಹಿನ್ನೆಲೆಯಲ್ಲಿ ವಾಹನ ಸಂಚಾರ ಮಾರ್ಗವನ್ನು ಬದಲಾಯಿಸಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ.ವಿ. ಆದೇಶ ಹೊರಡಿಸಿದ್ದಾರೆ.

ಆದೇಶದನ್ವಯ ಸೇತುವೆ ಕಾಮಗಾರಿ ಪೂರ್ಣಗೊಳ್ಳುವವರೆಗೂ ಅರಕೆರೆ–ಜೋನಿಗರಹಳ್ಳಿ ಮಾರ್ಗದ ಸರಪಳಿ 16.90 ಕಿ.ಮೀ. ರಸ್ತೆಯಲ್ಲಿ ವಾಹನ ಸಂಚಾರವನ್ನು ನಿರ್ಬಂಧಿಸಿ ತುಮಕೂರು ಕಡೆಯಿಂದ ತೋವಿನಕೆರೆ ಕಡೆಗೆ ಸಂಚರಿಸುವ ವಾಹನಗಳು ದಾಸಲುಕುಂಟೆ ಗ್ರಾಮದ ಸರ್ಕಲ್ ಬಳಿ ಬಲಕ್ಕೆ ತಿರುಗಿ ಮಣುವಿನಕುರಿಕೆ ಗ್ರಾಮದ ಒಳಭಾಗದಿಂದ–ಬಂಡೆಹಳ್ಳಿ ಗೇಟ್ ಮುಖಾಂತರ ಜೋನಿಗರಹಳ್ಳಿ ಕ್ರಾಸ್ ತಲುಪಿ ತೋವಿನಕೆರೆ ಕಡೆಗೆ ಮತ್ತು ಕೊರಟಗೆರೆ ಕಡೆಗೆ ಸಂಚರಿಸಬೇಕು.

ತುಮಕೂರು ಕಡೆಗೆ ಸಂಚರಿಸುವ ವಾಹನಗಳು ಜೋನಿಗರಹಳ್ಳಿ ಕ್ರಾಸ್‌ನಿಂದ–ಬಂಡೇಹಳ್ಳಿ ಗೇಟ್–ಮಣುವಿನಕುರಿಕೆ ಗ್ರಾಮದ ಒಳಭಾಗದ ಮೂಲಕ ದಾಸಲುಕುಂಟೆ ಸರ್ಕಲ್ ಬಳಿ ಎಡಕ್ಕೆ ತಿರುಗಿ ತುಮಕೂರು ಕಡೆಗೆ ಸಂಚರಿಸುವಂತೆ ಆದೇಶಿಸಿದ್ದಾರೆ.

ಸಾರ್ವಜನಿಕರು ಹಾಗೂ ವಾಹನಚಾಲಕರು ಈ ಆದೇಶವನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಲು ಸೂಚಿಸಿದೆ. ತಪ್ಪಿದಲ್ಲಿ ಅಂತಹವರ ವಿರುದ್ಧ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದ್ದಾರೆ.

# ಡ್ರಗ್ಸ್ ವಿರೋಧಿ ಬೃಹತ್ ಅಭಿಯಾನ




ಚಿಂತಾಮಣಿ

ನಗರದ ವಿಕ್ರಂ ಕಾಲೇಜಿನಲ್ಲಿ ಡ್ರಗ್ಸ್ ಬೃಹತ್ ವಿರೋಧಿ ಅಭಿಯಾನದ ಹಿನ್ನೆಲೆಯಲ್ಲಿ ಮಾದಕ ವಸ್ತುಗಳ ನಿಗ್ರಹದ ಅಂಗವಾಗಿ ವಿದ್ಯಾರ್ಥಿಗಳಿಗೆ ಡ್ರಾಯಿಂಗ್ ಕಾಂಪಿಟೇಶನ್ ಹಮ್ಮಿಕೊಳ್ಳಲಾಗಿತ್ತು.

ಈ ವೇಳೆ ವಿದ್ಯಾರ್ಥಿಗಳು ವಿವಿಧ ಬರವಣಿಗೆ ಹಾಗೂ ಚಿತ್ರಗಳನ್ನು ಬಿಡಿಸಿ ಮಾದಕ ವಸ್ತುಗಳ ಬಳಕೆಯಿಂದ ಆಗಬಹುದಾದ ಅನಾಹುತಗಳ ಕುರಿತು ಜಾಗೃತಿ ಮೂಡಿಸುವಲ್ಲಿ ನಿರತರಾಗಿ ನಂತರ ಅವುಗಳ ಪ್ರದರ್ಶನ ಮಾಡಿದರು.

ಈ ವೇಳೆ ನಗರ ಪೊಲೀಸ್ ಠಾಣೆ ಸರ್ಕಲ್ ಇನ್ಸ್‌ಪೆಕ್ಟರ್ ವಿಜಿಕುಮಾರ್ ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ರಮೇಶ್, ಪ್ರಕಾಶ್, ಸಂಜೀವ್, ಸಿಬ್ಬಂದಿ ಹೆಲ್ಮೆಟ್ ರೆಡ್ಡಿ, ಸತೀಶ್, ವಿಜಯ್, ಅಂಜನ್ ರೆಡ್ಡಿ ಸೇರಿದಂತೆ ವಿಕ್ರಂ ಕಾಲೇಜಿನ ವಿದ್ಯಾರ್ಥಿಗಳು, ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

# ಜೆರಾಕ್ಸ್ ಪ್ರತಿಗಳೊಂದಿಗೆ ನೇರ ಸಂದರ್ಶನ

ಕೋಲಾರ

ಕೋಲಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿಯ ಅಧೀನದಲ್ಲಿನ ಸಾರ್ವಜನಿಕ ಆಸ್ಪತ್ರೆ/ ಸಮುದಾಯ ಆರೋಗ್ಯ ಕೇಂದ್ರ/ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ, ಫಾರ್ಮಾಸಿ ಅಧಿಕಾರಿಗಳು ಮತ್ತು ಶುಶ್ರೂಷಣಾ ಅಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ರೋಸ್ಟರ್ ಕಂ ಮೆರಿಟ್ ನಿಯಮಗಳನ್ನು ಅನುಸರಿಸಿ ನೇಮಿಸಿಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ, ಫಾರ್ಮಾಸಿ ಅಧಿಕಾರಿಗಳು ಮತ್ತು ಶುಶ್ರೂಷಣಾ ಅಧಿಕಾರಿಗಳು ಇದೇ 31 ರಂದು ಬೆಳಗ್ಗೆ 11 ರಿಂದ 01 ಗಂಟೆಯೊಳಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿಯಲ್ಲಿ ಅರ್ಹ ನೋಂದಾಯಿತ ಅಭ್ಯರ್ಥಿಗಳನ್ನು ಗುತ್ತಿಗೆ ಆಧಾರಿತ ನೇಮಕಾತಿಗೆ ನೇರ ಸಂದರ್ಶನಕ್ಕೆ ಹಾಜರಾಗಲು ತಮ್ಮ ಬಯೋಡೆಟಾ ಮತ್ತು ಮೂಲ ದಾಖಲಾತಿಗಳು ಮತ್ತು ಇತರೆ ಎಲ್ಲಾ ಶೈಕ್ಷಣಿಕ ದಾಖಲೆಗಳ ಜೆರಾಕ್ಸ್ ಪ್ರತಿಗಳೊಂದಿಗೆ ನೇರ ಸಂದರ್ಶನಕ್ಕೆ ಹಾಜರಾಗಬಹುದೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಡಿವ ನೀರಿನ ಘಟಕ ದುರಸ್ತಿ



ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ–2026 ರಲ್ಲಿ ಕೊರಟಗೆರೆ ವಿಧಾನ ಸಭಾ ಕ್ಷೇತ್ರದಲ್ಲಿ 2,09,495 ಮಂದಿ ಮತದಾರರಿಗೆ ಗಣತಿ ಫಾರಂಗಳನ್ನು ವಿತರಿಸಿ ಶೇ.100 ರಷ್ಟು ಪ್ರಗತಿ ಸಾದಿಸಿದ್ದು ಈಗಾಗಲೇ 1.68,482 ಫಾರಂಗಳನ್ನು ಡಿಜಿಟಲೈಸಿಂಗ್ ಮಾಡುವ ಮೂಲಕ ಶೇ.80.25 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಮತದಾರರ ನೋಂದಣಾಧಿಕಾರಿ ಸೋಮಪ್ಪ ಕಡಕೋಳ ತಿಳಿಸಿದರು. ಪಟ್ಟಣದ ತಾಲೂಕು ಕಛೇರಿ ಸಬಾಗಂಣದಲ್ಲಿ ಏರ್ಪಡಿಸಿದ್ದ ವಿಶೇಷ ಸಮಗ್ರ ಪರಿಷ್ಕರಣೆಯ–2026 ಮಾಹಿತಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕೊರಟಗೆರೆ ವಿಧಾನ ಸಭಾ ಕ್ಷೇತ್ರದ ಗ್ರಾಮೀಣ ಮತ್ತು ಪಟ್ಟಣದಲ್ಲಿ ವೇಗವಾಗಿ ಮತದಾರರ ಪರಿಷ್ಕರಣೆ ಕಾರ್ಯ ನಡೆಯುತ್ತಿದ್ದು, ನಿದಾನ ಮತ್ತು ಗೊಂದಲವಿರುವ ಕಡೆ ಮತ್ತೊರ್ವ ಹೆಚ್ಚುವರಿ ಬಿಎಲ್‌ಓ, ಸಿಬ್ಬಂದಿಗಳನ್ನು ನೇಮಿಸಲಾಗಿದೆ ಮುಂದಿನ 8 ದಿನಗಳೊಳಗೆ ಮತದಾರರ ಡಿಜಿಟಲ್ ಕಾರ್ಯ ಶೇ 100 ರಷ್ಟು ಪ್ರಗತಿ ಸಾಧಿಸುವುದಾಗಿ ತಿಳಿಸಿದರು.

ತಹಶೀಲ್ದಾರ್ ಮಂಜುನಾಥ್ ಮಾತನಾಡಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ಕೆ ಜನಪ್ರತಿನಿಧಿಗಳ ಸಹಕಾರ ಅತಿಮುಖ್ಯವಾಗಿದ್ದು ಮನೆ ಮನೆಗೆ ಬೇಟಿ ನಿಡುವ ಅಧಿಕಾರಿಗಳಿಗೆ ಮತದಾರರು ಸ್ಥಳಾಂತರ ಹೊಂದಿರುವವರ, ಸಾವಾಗಿರುವವರ ಹಾಗೂ ನಕಲಿ, ಗೈರಿನ ಬಗ್ಗೆ ಮಾಹಿತಿಯನ್ನು ಆಧಿಕಾರಿಗಳಿಗೆ ನೀಡಬೇಕಿದೆ, ಇದರ ಬಗ್ಗೆ ಗೊಂದಲ ಇದ್ದಲ್ಲಿ ಸಹಾಯವಾಣಿಗೆ ಸಂರ್ಕಿಸಲು ಮನವಿ ಮಾಡಿದರು.

# ಮುಲ್ಲಾಗಳಿಗೂ, ನೀಟ್ ಪರೀಕ್ಷೆಗೂ ಏನು ಸಂಬಂಧ?': ಸಿಟಿ ರವಿ



ಬೆಂಗಳೂರು

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ವಿರುದ್ಧ ನಡೆಯುತ್ತಿರುವ ಪ್ರತಿಭಟನೆಯಲ್ಲಿ ಕೆಲವು ಸಂಘಟನೆಗಳು ಹಾಗೂ ವ್ಯಕ್ತಿಗಳು ಭಾಗವಹಿಸಿರುವುದನ್ನು ಪ್ರಶ್ನಿಸಿರುವ ವಿಧಾನ ಪರಿಷತ್ ಬಿಜೆಪಿ ಸದಸ್ಯ ಸಿ.ಟಿ. ರವಿ, "ಮುಲ್ಲಾಗಳಿಗೂ ನೀಟ್ ಪರೀಕ್ಷೆಗೂ ಏನು ಸಂಬಂಧ?" ಎಂದು ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ನಿವಾಸದ ಎದುರು ಕಾಂಗ್ರೆಸ್ ನಡೆಸುತ್ತಿರುವ ಪ್ರತಿಭಟನೆಯನ್ನು ಖಂಡಿಸಿ ಚಿಕ್ಕಮಗಳೂರಿನಲ್ಲಿ ಬಿಜೆಪಿ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ವಿರುದ್ಧ ನಡೆಯುತ್ತಿರುವ ಹೋರಾಟದಲ್ಲಿ ಕೆಲವರು ಧರ್ಮ ಮತ್ತು ರಾಜಕೀಯ ವಿಚಾರಗಳನ್ನು ಬೆರೆಸುತ್ತಿದ್ದಾರೆ ಎಂದು ಆರೋಪಿಸಿದರು.

ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಕೆಲವರು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ಆಗ್ರಹಿಸುತ್ತಿದ್ದಾರೆ. ಆದರೆ ಪೌರತ್ವ ತಿದ್ದುಪಡಿ ಕಾಯ್ದೆ, ರಾಷ್ಟ್ರೀಯ ನಾಗರಿಕರ ನೋಂದಣಿ ಹಾಗೂ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿಚಾರಗಳಿಗೆ ಪರಸ್ಪರ ಏನು ಸಂಬಂಧ ಎಂದು ಅವರು ಪ್ರಶ್ನಿಸಿದರು.

ಈ ಬೆಳವಣಿಗೆಗಳನ್ನು ಗಮನಿಸಿದರೆ ಕೇಂದ್ರ ಸರ್ಕಾರ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರ ಮೇಲೆ ವಿದ್ಯಾರ್ಥಿಗಳಿಗೆ ನಂಬಿಕೆ ಇದೆ ಎಂಬುದು ಸ್ಪಷ್ಟವಾಗುತ್ತದೆ ಎಂದು ಸಿ.ಟಿ. ರವಿ ಹೇಳಿದರು.

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿರುದ್ಧದ ಪ್ರತಿಭಟನೆಯಲ್ಲಿ ಕೆಲವು ಸಂಘಟನೆಗಳು ಭಾಗವಹಿಸಿರುವುದನ್ನು ಮತ್ತೊಮ್ಮೆ ಪ್ರಶ್ನಿಸಿದ ಅವರು, ಪ್ರತಿಭಟನೆಯಲ್ಲಿ ಭಾಗವಹಿಸುವವರ ಹಿನ್ನೆಲೆ ಮತ್ತು ಅವರ ಉದ್ದೇಶಗಳ ಬಗ್ಗೆ ಜನರು ಗಮನಹರಿಸಬೇಕು. ನೀಟ್ ಪರೀಕ್ಷೆಗೂ ಪ್ರತಿಭಟನೆಯಲ್ಲಿ ಭಾಗವಹಿಸುವ ಕೆಲವು ಗುಂಪುಗಳಿಗೂ ಏನು ಸಂಬಂಧ ಎಂಬುದನ್ನು ಜನರೇ ಅರ್ಥಮಾಡಿಕೊಳ್ಳಬೇಕು ಎಂದು ಹೇಳಿದರು.

# ಮಳೆಗಾಗಿ ವರುಣದೇವನಿಗೆ ವಿಶೇಷ ಪ್ರಾರ್ಥನೆ



ಬೂದಿಕೋಟೆ

ಮಳೆ ಕೈಕೊಟ್ಟಿರುವ ಹಿನ್ನೆಲೆಯಲ್ಲಿ ಬೂದಿಕೋಟೆಯಲ್ಲಿ ರೈತರ ಪೇಟೆಯ ಯುವಕರು ಮಳೆರಾಯನನ್ನು ಒಲಿಸಿಕೊಳ್ಳುವ ಉದ್ದೇಶದಿಂದ ವಿಶೇಷ ಮೆರವಣಿಗೆ ನಡೆಸಿ ವರುಣದೇವನಿಗೆ ಪ್ರಾರ್ಥನೆ ಸಲ್ಲಿಸಿದರು.

ಯುವಕರಾದ ಬಿ.ಮಾರುತಿ, ಬಿ.ಆರ್.ಅಶೋಕ್, ಶಂಕರ್ ಸೇರಿದಂತೆ ಹಲವರು ಮಳೆರಾಯನ ಮೆರವಣಿಗೆಯಲ್ಲಿ ಪಾಲ್ಗೊಂಡು, ಉತ್ತಮ ಮಳೆಯಾಗಿ ಬೆಳೆಗಳು ಉಳಿಯಲಿ ಹಾಗೂ ಜೀವಸಂಕುಲಕ್ಕೆ ನೆಮ್ಮದಿ ದೊರೆಯಲಿ ಎಂದು ಭಕ್ತಿಭಾವದಿಂದ ಪ್ರಾರ್ಥಿಸಿದರು.

ವಾಡಿಕೆಯಂತೆ ಸುರಿಯಬೇಕಿದ್ದ ಮುಂಗಾರು ಮಳೆ ವಿಳಂಬವಾಗಿರುವುದರಿಂದ ರೈತ ಸಮುದಾಯದಲ್ಲಿ ಆತಂಕ ಮನೆಮಾಡಿದೆ. ಬಿತ್ತನೆ ಮಾಡಿದ ಬೆಳೆಗಳು ಒಣಗಲಾರಂಭಿಸಿದ್ದು, ಕೃಷಿ ಚಟುವಟಿಕೆಗಳು ಸಂಪೂರ್ಣವಾಗಿ ಮಳೆಯನ್ನೇ ಅವಲಂಬಿಸಿವೆ. ಬಿಸಿಲಿನ ತಾಪ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಹೊಲಗಳಲ್ಲಿ ತೇವಾಂಶ ಕ್ಷೀಣಿಸುತ್ತಿರುವುದು ರೈತರ ಚಿಂತೆಗೆ ಕಾರಣವಾಗಿದೆ.

ಮಳೆಯ ಅಭಾವದಿಂದ ರಾಜ್ಯದ ಹಲವೆಡೆ ದೇವಸ್ಥಾನಗಳಲ್ಲಿ ವಿಶೇಷ ಪೂಜೆ, ಹೋಮ–ಹವನ, ಕಪ್ಪೆ ಮದುವೆ ಸೇರಿದಂತೆ ವಿವಿಧ ಸಂಪ್ರದಾಯಬದ್ಧ ಆಚರಣೆಗಳು ನಡೆಯುತ್ತಿವೆ. ವರುಣದೇವ ಕೃಪೆ ತೋರಿ ಧರೆಗೆ ಮಳೆಯ ಕೃಪೆ ಸುರಿಸಲಿ, ಬೆಳೆಗಳನ್ನೂ ಜೀವಸಂಕುಲವನ್ನೂ ರಕ್ಷಿಸಲಿ ಎಂದು ಗ್ರಾಮಸ್ಥರು ಪ್ರಾರ್ಥಿಸುತ್ತಿದ್ದಾರೆ.

ಭೂಮಿ ತಾಯಿಯ ಒಡಲು ಬಿಸಿಲಿನಿಂದ ಕಾದಿದ್ದು, ತಕ್ಷಣ ಮಳೆಯಾಗದಿದ್ದರೆ ಬಿತ್ತಿದ ಬೆಳೆಗಳು ಸಂಪೂರ್ಣ ನಾಶವಾಗುವ ಭೀತಿ ಎದುರಾಗಿದೆ ಎಂದು ರೈತರು ಅಳಲು ತೋಡಿಕೊಳ್ಳುತ್ತಿದ್ದಾರೆ. ಮತ್ತೊಂದೆಡೆ, ಕಳೆದ ಕೆಲವು ದಿನಗಳಿಂದ ಸಂಜೆಯ ವೇಳೆಗೆ ಮೋಡ ಕವಿಯುತ್ತಿರುವುದು ಕೃಷಿಕರಲ್ಲಿ ಹೊಸ ಆಶಾಭಾವನೆ ಮೂಡಿಸಿದೆ. ಶೀಘ್ರದಲ್ಲೇ ಉತ್ತಮ ಮಳೆಯಾಗಿ ಧರೆಗೆ ತಂಪು ನೀಡಲಿದೆ ಎಂಬ ನಿರೀಕ್ಷೆಯಲ್ಲಿ ರೈತರು ಕಾಯುತ್ತಿದ್ದಾರೆ. ಗ್ರಾಮೀಣ ಪ್ರದೇಶಗಳಲ್ಲಿ ಮಳೆರಾಯ ಬಾರೋ ಮಳೆಯ ತಂಪು ತಾರೋ ಎಂಬ ಹಾಡುಗಳೊಂದಿಗೆ ಮೆರವಣಿಗೆಗಳು ನಡೆಯುತ್ತಿದ್ದು, ಮಳೆಗಾಗಿ ಸಾಮೂಹಿಕ ಪ್ರಾರ್ಥನೆಗಳು ಹೆಚ್ಚಾಗಿವೆ. ದನ–ಕರುಗಳಿಗೆ ಕುಡಿಯುವ ನೀರು ಮತ್ತು ಮೇವಿನ ಕೊರತೆಯೂ ದಿನೇದಿನೇ ತೀವ್ರಗೊಳ್ಳುತ್ತಿರುವುದರಿಂದ ಗ್ರಾಮೀಣ ಜೀವನ ಸಂಕಷ್ಟಕ್ಕೆ ಸಿಲುಕಿದೆ.

ಪರಿಸ್ಥಿತಿಯ ಗಂಭೀರತೆಯನ್ನು ಮನಗಂಡು ಸರ್ಕಾರ ಕೂಡಲೇ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಬೆಳೆ ನಷ್ಟದ ಸಮೀಕ್ಷೆ ಕೈಗೊಂಡು ಸೂಕ್ತ ಪರಿಹಾರ ಘೋಷಿಸಬೇಕು, ಕೃಷಿ ಸಾಲ ಮನ್ನಾ ಸೇರಿದಂತೆ ರೈತರಿಗೆ ಅಗತ್ಯ ನೆರವು ನೀಡಬೇಕು ಹಾಗೂ ಅಗತ್ಯವಿದ್ದಲ್ಲಿ ಬರಪೀಡಿತ ತಾಲ್ಲೂಕುಗಳನ್ನು ಶೀಘ್ರ ಘೋಷಿಸಬೇಕೆಂದು ರೈತರು ಆಗ್ರಹಿಸಿವೆ.

# ಸಿವಿವಿ ಕ್ಯಾಂಪಾಸ್‌ನಲ್ಲಿ ಸ್ವಯಂ ಪ್ರೇರಿತ ಬೃಹತ್ ರಕ್ತದಾನ ಶಿಬಿರ



ಚಿಕ್ಕಬಳ್ಳಾಪುರ

ಕೆವಿ. & ಶಿಕ್ಷಣ ದತ್ತಿಯ 30ನೇ ದತ್ತಿ ದಿನಾಚರಣೆ ಹಾಗೂ ಕೆವಿ ದತ್ತಿಗಳ ಸಂಸ್ಥಾಪಕ ಅಧ್ಯಕ್ಷ ದಿವಂಗತ ಸಿ.ವಿ.ವೆಂಕಟರಾಯಪ್ಪರವರ 111ನೇ ಜಯಂತಿ ಪ್ರಯುಕ್ತ ಸಿವಿವಿ ಕ್ಯಾಂಪಾಸ್ ನಲ್ಲಿ ಏರ್ಪಡಿಸಿದ್ದ ಸ್ವಯಂ ಪ್ರೇರಿತ ಬೃಹತ್ ರಕ್ತದಾನ ಶಿಬಿರದಲ್ಲಿ 4500 ಕ್ಕೂ ಅಧಿಕ ಯುನಿಟ್ ರಕ್ತದಾನ ಮಾಡುವ ಮೂಲಕ ದಾಖಲೆ ಬರೆದು ಶಿಬಿರ ಆಯೋಜನೆ ಮಾಡಿದ ಕೆವಿ ನವೀನ್ ಕಿರಣ್ ಅವರು "ಭಾರತೀಯ ಬುಕ್ ಆಫ್ ರೆಕಾರ್ಡ್" "ಕರ್ನಾಟಕ ಬುಕ್ ಆಫ್ ರೆಕಾರ್ಡ್ ಅವಾರ್ಡ್"ಗೆ ಭಾಜನರಾದರು.

ಇದಕ್ಕೂ ಮುನ್ನಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ನ್ಯಾ.ಟಿ.ಪಿ.ರಾಮಲಿಂಗೇಗೌಡ, ಕೆ.ವಿ.ಟ್ರಸ್ಟ್ ಮತ್ತು ಪಂಚಗಿರಿ ಶಿಕ್ಷಣ ದತ್ತಿಗಳ ಅಧ್ಯಕ್ಷ ಕೆ .ವಿ. ನವೀನ್ ಕಿರಣ್ ಮಾತನಾಡಿ, ಆರೋಗ್ಯ ಕ್ಷೇತ್ರದಲ್ಲಿ ಅಗಾಧವಾದ ಬದಲಾವಣೆಗಳಾಗಿದ್ದರೂ ಸಾಕಷ್ಟು ಮಂದಿಯಲ್ಲಿ ರಕ್ತದಾನ ಕುರಿತು ಇನ್ನೂ ಸಹ ಮೂಡನಂಬಿಕೆ, ತಪ್ಪು ಕಲ್ಪನೆಗಳಿರುವುದು ಸೋಜಿಗ ಪ್ರತಿ ಆರೋಗ್ಯವಂತರು ವರ್ಷದಲ್ಲಿ ಕನಿಷ್ಟ ಮೂರು ಬಾರಿ ರಕ್ತದಾನ ಮಾಡಬಹುದು. ರಕ್ತದಾನ ಮಾಡುವುದರಿಂದ ಹಲವಾರು ಪ್ರಯೋಜನಗಳಿವೆ. ದೇಹದಲ್ಲಿ ಅನಗತ್ಯ ಶೇಖರಣೆಯಾಗುವ ಕೊಬ್ಬಿನಾಂಶ ಕಡಿಮೆಯಾಗಿ ಆರೋಗ್ಯವಂತರಾಗಿರುತ್ತಾರೆ. ರಕ್ತದಾನದಿಂದ ಮತ್ತೊಬ್ಬರ ಜೀವ ಉಳಿಸಿದ ಪುಣ್ಯ ರಕ್ತದಾನಿಗೆ ಸಿಗುತ್ತದೆ ಎಂದರು.

ಕೆ.ವಿ.ದತ್ತಿ ಮತ್ತು ಪಂಚಗಿರಿ ಶಿಕ್ಷಣ ದತ್ತಿಗಳ ಸಿಬ್ಬಂದಿ ವರ್ಗ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರು ಚಿಕ್ಕಬಳ್ಳಾಪುರದ ವಿವಿಧ ರಾಜಕೀಯ ಪಕ್ಷಗಳ ಮುಖಂಡರುಗಳು ಸಂಘ ಸಂಸ್ಥೆಗಳ ಪದಾಧಿಕಾರಿಗಳು ಜಿಲ್ಲಾ ಕೇಂದ್ರದ ಪತ್ರಕರ್ತರು, ಕೆ.ವಿ. ನವೀನ್ ಕಿರಣ್ ರವರ ಅಭಿಮಾನಿ ವೃಂದ ರಕ್ತದಾನ ಶಿಬಿರದಲ್ಲಿ ಸ್ವಯಂ ಪ್ರೇರಿತರಾಗಿ ರಕ್ತದಾನ ಶಿಬಿರದಲ್ಲಿ ಭಾಗವಹಿಸಿದ್ದರು. ರಕ್ತ ನೀಡಿದ ಎಲ್ಲರಿಗೂ ರೆಡ್‌ಕ್ರಾಸ್ ಸೊಸೈಟಿಯಿಂದ ಅಭಿನಂದನಾ ಪತ್ರ ವಿತರಿಸಲಾಯಿತು. ರಕ್ತದಾನಿಗಳಿಗೆ ಸಂಘಟಕರು ಹಣ್ಣು, ತಂಪು ಪಾನೀಯ ನೀಡಿ ಉಪಚರಿಸಿದರು.

ಕಾರ್ಯಕ್ರಮದಲ್ಲಿ ವಕೀಲರ ಸಂಘದ ಜಿಲ್ಲಾಧ್ಯಕ್ಷ ಕೆ.ವಿ.ಅಭಿಲಾಷ್, ಟ್ರಸ್ಟಿಗಳಾದ ಬಿ.ಮುನಿಯಪ್ಪ, ಸಿ.ವಿ.ನಿರ್ಮಲಾ ಪ್ರಭು, ದತ್ತಿ ಆಡಳಿತಾಧಿಕಾರಿ ಡಾ. ಸಾಯಿಪ್ರಭು, ದತ್ತಿ ವ್ಯವಸ್ಥಾಪಕ ಲಕ್ಷ್ಮಣ ಸ್ವಾಮಿ. ದತ್ತಿ ಹಿತೈಷಿಗಳಾದ ಮಹೇಶ್, ವಿಜಯಲಕ್ಷ್ಮೀ, ಇಮ್ರಾನ್ ಖಾನ್, ಮರಳಕುಂಟೆ ಕೃಷ್ಣಮೂರ್ತಿ, ಗಿರೀಶ್ ಗರಿಗಿರೆಡ್ಡಿ, ರಕ್ತಾದಾನ ಶಿಬಿರದ ನಿರ್ವಹಣೆ ಮುಖ್ಯಸ್ಥ ಹಾಗೂ ಕೆ ವಿ ದೈಹಿಕ ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಆರ್. ವೆಂಕಟೇಶ್. ರೆಡ್ ಕ್ರಾಸ್ ನ ಎಂ.ಜಯರಾಂ, ಕೋಡಿರಂಗಪ್ಪ, ಬಿ.ಎನ್.ರವಿಕುಮಾರ್,ದತ್ತಿಗಳ ಕಾರ್ಯನಿರ್ವಹಿಸಲ್ಪಡುವ ಎಲ್ಲಾ ವಿದ್ಯಾ ಸಂಸ್ಥೆಗಳ ಮುಖ್ಯಸ್ಥರುಗಳು ವಿವಿಧ ವಿಭಾಗಗಳ ಮುಖ್ಯಸ್ಥರು, ಅಧ್ಯಾಪಕರು, ಭೋಧಕೇತರ ವರ್ಗ, ವಿದ್ಯಾರ್ಥಿಗಳು,ಲಯನ್ಸ್ ಕ್ಲಬ್, ರೆಡ್‌ಕ್ರಾಸ್ ಸೊಸೈಟಿ ವೈದ್ಯರ ತಂಡ ಇದ್ದರು.

# ಶೇ.100 ರಷ್ಟು ಫಾರಂ ವಿತರಣೆ

ಕೊರಟಗೆರೆ

ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ–2026 ರಲ್ಲಿ ಕೊರಟಗೆರೆ ವಿಧಾನ ಸಭಾ ಕ್ಷೇತ್ರದಲ್ಲಿ 2,09,495 ಮಂದಿ ಮತದಾರರಿಗೆ ಗಣತಿ ಫಾರಂಗಳನ್ನು ವಿತರಿಸಿ ಶೇ.100 ರಷ್ಟು ಪ್ರಗತಿ ಸಾದಿಸಿದ್ದು ಈಗಾಗಲೇ 1.68,482 ಫಾರಂಗಳನ್ನು ಡಿಜಿಟಲೈಸಿಂಗ್ ಮಾಡುವ ಮೂಲಕ ಶೇ.80.25 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಮತದಾರರ ನೋಂದಣಾಧಿಕಾರಿ ಸೋಮಪ್ಪ ಕಡಕೋಳ ತಿಳಿಸಿದರು.

ಪಟ್ಟಣದ ತಾಲೂಕು ಕಛೇರಿ ಸಬಾಗಂಣದಲ್ಲಿ ಏರ್ಪಡಿಸಿದ್ದ ವಿಶೇಷ ಸಮಗ್ರ ಪರಿಷ್ಕರಣೆಯ–2026 ಮಾಹಿತಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕೊರಟಗೆರೆ ವಿಧಾನ ಸಭಾ ಕ್ಷೇತ್ರದ ಗ್ರಾಮೀಣ ಮತ್ತು ಪಟ್ಟಣದಲ್ಲಿ ವೇಗವಾಗಿ ಮತದಾರರ ಪರಿಷ್ಕರಣೆ ಕಾರ್ಯ ನಡೆಯುತ್ತಿದ್ದು, ನಿದಾನ ಮತ್ತು ಗೊಂದಲವಿರುವ ಕಡೆ ಮತ್ತೊರ್ವ ಹೆಚ್ಚುವರಿ ಬಿಎಲ್‌ಓ, ಸಿಬ್ಬಂದಿಗಳನ್ನು ನೇಮಿಸಲಾಗಿದೆ ಮುಂದಿನ 8 ದಿನಗಳೊಳಗೆ ಮತದಾರರ ಡಿಜಿಟಲ್ ಕಾರ್ಯ ಶೇ 100 ರಷ್ಟು ಪ್ರಗತಿ ಸಾಧಿಸುವುದಾಗಿ ತಿಳಿಸಿದರು.

ತಹಶೀಲ್ದಾರ್ ಮಂಜುನಾಥ್ ಮಾತನಾಡಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ಕೆ ಜನಪ್ರತಿನಿಧಿಗಳ ಸಹಕಾರ ಅತಿಮುಖ್ಯವಾಗಿದ್ದು ಮನೆ ಮನೆಗೆ ಬೇಟಿ ನಿಡುವ ಅಧಿಕಾರಿಗಳಿಗೆ ಮತದಾರರು ಸ್ಥಳಾಂತರ ಹೊಂದಿರುವವರ, ಸಾವಾಗಿರುವವರ ಹಾಗೂ ನಕಲಿ, ಗೈರಿನ ಬಗ್ಗೆ ಮಾಹಿತಿಯನ್ನು ಆಧಿಕಾರಿಗಳಿಗೆ ನೀಡಬೇಕಿದೆ, ಇದರ ಬಗ್ಗೆ ಗೊಂದಲ ಇದ್ದಲ್ಲಿ ಸಹಾಯವಾಣಿಗೆ ಸಂರ್ಕಿಸಲು ಮನವಿ ಮಾಡಿದರು. ಸಹಾಯವಾಣಿ ಕೊರಟಗೆರೆ ಗ್ರಾಮಿಣ ಭಾಗದ ದೂರವಾಣಿ ಸಂಖ್ಯೆ–08138–232153, ಕೊರಟಗೆರೆ ಪಟ್ಟಣಕ್ಕೆ ದೂರವಾಣಿ ಸಂಖ್ಯೆ 08138–295546 ಗೆ ಕರೆಮಾಡಿ ಮತದಾರರ ಸಮಸ್ಯೆ ಏನೇ ಇದ್ದರೂ ಪತ್ರಿ ನಿತ್ಯ ಬೆಳಿಗ್ಗ 10 ಗಮಟೆಯಿಂದ ಸಂಜೆ 6 ರವರತೆರ ಕರೆಮಾಡಿ ಮಾಹಿತಿ ಪಡೆಯುವಂತರೆ ಮನವಿಮಾಡಿದರು.

ಈ ಸಂದರ್ಭಧಲ್ಲಿ ಪುರಸಭೆಯ ಮುಖ್ಯಾಧಿಕಾರಿ ಉಮೇಶ್, ಚುನಾವಣಾ ಶಿರಸ್ಥೇದಾರ್ ಮಂಜುನಾಥ್, ಬಸವರಾಜು ನಕುಲ್, ಅರಣ್, ಅರವಿಂದ್, ಲಕ್ಷ್ಮಣ್, ಚಿಕ್ಕರಂಗಯ್ಯ, ರಂಗಣ್ಣ, ಬಿಜೆಪಿ ಪಕ್ಷದ ಮಾರುತಿ ಸೇರಿದಂತೆ ಇನ್ನಿತರರು ಹಾಜರಿದ್ದರು.

# 26ರಂದು ವಿದ್ಯುತ್ ವ್ಯತ್ಯಯ

ಚಿಕ್ಕಬಳ್ಳಾಪುರ

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ (ಕವಿಪ್ರನಿನಿ) ವತಿಯಿಂದ ಮಿಟ್ಟೇಮರಿ 220/66/11 ಕೆ.ವಿ. ವಿದ್ಯುತ್ ಸ್ವೀಕರಣಾ ಕೇಂದ್ರದಲ್ಲಿ ನಿರ್ವಹಣಾ ಕಾಮಗಾರಿ ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ, ಇದೇ 26ರಂದು ಬೆಳ್ಳಿಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ.

ಮಿಟ್ಟೇಮರಿ ವಿದ್ಯುತ್ ಸ್ವೀಕರಣಾ ಕೇಂದ್ರದಿಂದ ವಿದ್ಯುತ್ ಸರಬರಾಜು ಪಡೆಯುವ ಪೆರೇಸಂದ್ರ, ಮಂಡಿಕಲ್, ಸೋಮೇನಹಳ್ಳಿ, ಬಾಗೇಪಲ್ಲಿ, ಸಾದಲಿ, ಮಿಟ್ಟೇಮರಿ, ತಿಮ್ಮಂಪಲ್ಲಿ, ಸೋಮನಾಥಪುರ, ಚೇಳೂರು, ಪಾತಪಾಳ್ಯ, ಚಾಕವೇಲು, ಗೂಳೂರು ಹಾಗೂ ಜೂಲಪಾಳ್ಯ 66/11 ಕೆ.ವಿ. ಉಪ ವಿದ್ಯುತ್ ಕೇಂದ್ರಗಳಿಂದ ವಿದ್ಯುತ್ ಸರಬರಾಜಾಗುವ ಸುತ್ತಮುತ್ತಲಿನ ಗ್ರಾಮೀಣ ಪ್ರದೇಶಗಳಲ್ಲಿ ಈ ಅವಧಿಯಲ್ಲಿ ವಿದ್ಯುತ್ ಸರಬರಾಜು ಸ್ಥಗಿತಗೊಳ್ಳಲಿದೆ.

ಆದ್ದರಿಂದ ಸಂಬಂಧಿತ ಪ್ರದೇಶಗಳ ವಿದ್ಯುತ್ ಗ್ರಾಹಕರು ಹಾಗೂ ಸಾರ್ವಜನಿಕರು ಸಹಕರಿಸುವಂತೆ ಚಿಕ್ಕಬಳ್ಳಾಪುರ ಬೆಸ್ಕಾಂನ ಕಾರ್ಯನಿರ್ವಾಹಕ ಇಂಜಿನಿಯರ್ ಪಿ.ಜಿ. ರಮೇಶ್ ಕುಮಾರ್ ಅವರು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ಅರಣ್ಯ ಭೂಮಿ ಒತ್ತುವರಿ ತೆರವು ಕುರಿತು ಸ್ಪಷ್ಟನೆ

ಕೋಲಾರ

ಕೋಲಾರ ಅರಣ್ಯ ವಿಭಾಗದ ಕೋಲಾರ ವಲಯದ ಅಬ್ಬಣಿ ಅರಣ್ಯ ಪ್ರದೇಶವು ಒಟ್ಟು 619.01 ಎಕರೆ ಅರಣ್ಯ ಪ್ರದೇಶವಾಗಿರುತ್ತದೆ. ಹರಳಕುಂಟೆ ರಾಜ್ಯ ಅರಣ್ಯ ಒಟ್ಟು 409 ಎಕರೆ 35 ಗುಂಟೆ ಜಮೀನನ್ನು ಹೊಂದಿರುತ್ತದೆ.

ಭೂದಾಖಲೆಗಳ ಮೋಜಣಿದಾರರು ಹಾಗೂ ಅರಣ್ಯ ಇಲಾಖೆ ಸಿಬ್ಬಂದಿಯವರು ಜಂಟಿಯಾಗಿ ದಿನಾಂಕ:02–02–2024 ರಿಂದ 03–02–2024 ರವರೆಗೆ ಭೌತಿಕವಾಗಿ ಅಬ್ಬಣಿ ಕಿರು ಅರಣ್ಯ ಪ್ರದೇಶವನ್ನು ಜಂಟಿ ಅಳತೆ ಮಾಡಿರುತ್ತಾರೆ. ಸದರಿ ಅರಣ್ಯ ಪ್ರದೇಶದಲ್ಲಿ ಹರಳಕುಂಟೆ ಅರಣ್ಯ ಪ್ರದೇಶದ 220 ಎಕರೆ 05 ಗುಂಟೆ ಪ್ರದೇಶವು ಅಬ್ಬಣಿ ಕಿರು ಅರಣ್ಯ ಪ್ರದೇಶದ ಒಳಗೆ ಅತಿವ್ಯಾಪ್ತಿ (Overlap) ಆಗಿರುವುದು ಗೊಂದಲಕ್ಕೆ ಕಾರಣವಾಗಿರುತ್ತದೆ. ಉಳಿದಂತೆ 398 ಎಕರೆ 36 ಗುಂಟೆ ಜಮೀನು ಅಬ್ಬಣಿ ಕಿರು ಅರಣ್ಯವಾಗಿಯೇ ಮುಂದುವರೆಯುತ್ತಿದ್ದು, ಅತಿವ್ಯಾಪ್ತಿ (Overlap) ಆಗುತ್ತಿರುವ ಪ್ರದೇಶ 220 ಎಕರೆ 05 ಗುಂಟೆ ಹಾಗೂ ಹರಳಕುಂಟೆ ರಾಜ್ಯ ಅರಣ್ಯದಲ್ಲಿ ಉಳಿಯುವ 189 ಎಕರೆ 30 ಗುಂಟೆ ಪ್ರದೇಶ ಸೇರಿ ಒಟ್ಟು 409 ಎಕರೆ 35 ಗುಂಟೆ ಹರಳಕುಂಟೆ ರಾಜ್ಯ ಅರಣ್ಯ ಪ್ರದೇಶವಾಗಿರುತ್ತದೆ.ಅಬ್ಬಣಿ ಕಿರು ಅರಣ್ಯ ಪ್ರದೇಶವನ್ನು ಸರ್ಕಾರವು ಇದುವರೆವಿಗೂ ರದ್ದು (De-Notification) ಗೊಳಿಸಿರುವುದಿಲ್ಲ ಹಾಗೂ 1931 ರಿಂದ 1943 ರ ವರೆಗಿನ ರಾಜ್ಯದ ಆಡಳಿತಾತ್ಮಕ ವರದಿಯಲ್ಲಿಯು ಸಹ ಅಬ್ಬಣಿ ಕಿರು ಅರಣ್ಯ ಪ್ರದೇಶದ ವಿಸ್ತೀರ್ಣವು ಹಾಗೆಯೇ ಮುಂದುವರೆದಿರುತ್ತದೆ. ಒತ್ತುವರಿ ಮಾಡಿರುವವರ ವಿರುದ್ಧ ವಲಯ ಅರಣ್ಯಾಧಿಕಾರಿ, ಕೋಲಾರ ವಲಯ ಇವರು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಕೋಲಾರ ಉಪ ವಿಭಾಗ ರವರಿಗೆ ಒತ್ತುವರಿದಾರರ ವಿರುದ್ಧ ಕ್ರಮವಹಿಸಬೇಕು. ಮಾನ್ಯ ಸರ್ವೋಚ್ಚ ಹಾಗೂ ಉಚ್ಚ ನ್ಯಾಯಾಲಯದ ವಿವಿಧ ಪ್ರಕರಣಗಳಲ್ಲಿ ಈ ಮೊದಲು "ಅರಣ್ಯ" ಎಂದು ಘೋಷಿಸಿರುವ ಪ್ರದೇಶಗಳನ್ನು "ಅರಣ್ಯ" ವೆಂದೇ ಪರಿಗಣಿಸುವಂತೆ ಆದೇಶಿಸಿರುತ್ತದೆ. ಅರಣ್ಯ ಪ್ರದೇಶಗಳಲ್ಲಿ ಕಂದಾಯ ಇಲಾಖೆಯಿಂದ ಮಂಜೂರಾತಿಗಳಾಗಿದ್ದಲ್ಲಿ ಅವುಗಳು ಅಸಿಂಧು ಎಂದು ಪರಿಗಣಿಸತಕ್ಕದ್ದು, ಪಹಣಿ ಪತ್ರಗಳಲ್ಲಿ ದಾಖಲಿಸುವ ಯಾವುದೇ ದಾಖಲಾತಿಗಳು ಜಾಗಕ್ಕೆ ಸಂಬಂಧಿಸಿದ ಹಕ್ಕನ್ನು ದೃಡಪಡಿಸುವುದಿಲ್ಲ. ಪ್ರದೇಶಗಳಲ್ಲಿ ಗಡಿ ವಿವರಣೆಯೊಂದಿಗೆ ಗಡಿಗಳನ್ನು ಗುರ್ತಿಸುತ್ತಿದ್ದು, ಅಧಿಸೂಚನೆಯಲ್ಲಿ ತೋರಿಸಿದ ವಿಸ್ತೀರ್ಣ ಏನೇ ಇದ್ದರು, ಗಡಿ ವಿವರಣೆಯಲ್ಲಿ ಬರುವ ವಿಸ್ತೀರ್ಣವೇ ಅಂತಿಮವಾಗಿರುತ್ತದೆ ಎಂದು ನ್ಯಾಯಾಲಯಗಳು ತೀರ್ಪು ನೀಡಿ ಆದೇಶಿಸಿರುತ್ತದೆ ಎಂದು ಅರಣ್ಯ ಇಲಾಖೆ ಸ್ಪಟನೆನೀಡಿದೆ,

# ರೈಲ್ವೆ ಅಂಡರ್‌ಪಾಸ್ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಿ: ವೆಂಕಟೇಶ್ ಆಗ್ರಹ



ಬಂಗಾರಪೇಟೆ

ಗಂಗಮ್ಮನಪಾಳ್ಯ ಹಾಗೂ ಖಾದರ್ ಲೇಔಟ್ ನಿವಾಸಿಗಳು ರೈಲ್ವೆ ಅಂಡರ್‌ಪಾಸ್ ಸಮಸ್ಯೆಯಿಂದ ನಿತ್ಯ ಸಂಕಷ್ಟ ಅನುಭವಿಸುತ್ತಿದ್ದು, ಸಾರ್ವಜನಿಕರ ಸುರಕ್ಷತೆ ಹಾಗೂ ಅನುಕೂಲಕ್ಕಾಗಿ ಕೂಡಲೇ ರೈಲ್ವೆ ಮೇಲ್ಸೇತುವೆ ನಿರ್ಮಿಸಬೇಕು. ಅದು ಸಾಧ್ಯವಾಗದಿದ್ದರೆ. ಹಿಂದಿನಂತೆ ರೈಲ್ವೆ ಗೇಟ್ ಅಳವಡಿಸಿ ಜನರ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಕರ್ನಾಟಕ ದಲಿತ ರೈತಸೇನೆ ರಾಜ್ಯಾಧ್ಯಕ್ಷ ಹುಣಸಿನಹಳ್ಳಿ ವೆಂಕಟೇಶ್ ಒತ್ತಾಯಿಸಿದರು.

ಬಂಗಾರಪೇಟೆ ರೈಲ್ವೆ ನಿಲ್ದಾಣದ ಮುಂಭಾಗ ಕರ್ನಾಟಕ ದಲಿತ ರೈತಸೇನೆ ವತಿಯಿಂದ ಆಯೋಜಿಸಿದ್ದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ನಗರಸಭೆ ವ್ಯಾಪ್ತಿಯ ಗಂಗಮ್ಮನಪಾಳ್ಯ ಹಾಗೂ ಖಾದರ್ ಲೇಔಟ್ ಪ್ರದೇಶಗಳಲ್ಲಿ ದಲಿತರು, ಅಲ್ಪಸಂಖ್ಯಾತರು ಹಾಗೂ ಬಡ ಕುಟುಂಬಗಳು ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿದ್ದು, ಬಂಗಾರಪೇಟೆ–ಕೋಲಾರ ರೈಲು ಮಾರ್ಗದ ಹಳಿಯಿಂದ ಸಾರ್ವಜನಿಕರಿಗೆ ಸಂಚಾರಕ್ಕೆ ತೀವ್ರ ತೊಂದರೆ ಉಂಟಾಗಿದೆ ಎಂದು ಹೇಳಿದರು

ಈ ಹಿಂದೆ ಈ ಸ್ಥಳದಲ್ಲಿ ರೈಲ್ವೆ ಗೇಟ್ ಇದ್ದು, ಅಂಡರ್‌ಪಾಸ್ ನಿರ್ಮಾಣದ ನಂತರ ಅದನ್ನು ತೆರವುಗೊಳಿಸಲಾಗಿದೆ. ಆದರೆ ಮಳೆಗಾಲದಲ್ಲಿ ಅಂಡರ್‌ಪಾಸ್‌ನಲ್ಲಿ ನೀರು ತುಂಬಿಕೊಳ್ಳುವುದರಿಂದ ಜನರು, ವಿದ್ಯಾರ್ಥಿಗಳು, ವೃದ್ಧರು ಹಾಗೂ ಶಾಲಾ ವಾಹನಗಳು ಸಂಚರಿಸಲು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ ಎಂದರು.

ಅಂಡರ್‌ಪಾಸ್‌ನಲ್ಲಿ ಸಮರ್ಪಕ ವಿದ್ಯುತ್ ದೀಪಗಳ ವ್ಯವಸ್ಥೆ ಇಲ್ಲದ ಕಾರಣ ರಾತ್ರಿ ವೇಳೆ ಕತ್ತಲು ಆವರಿಸುತ್ತಿದ್ದು, ಮಹಿಳೆಯರು ಹಾಗೂ ವಿದ್ಯಾರ್ಥಿನಿಯರು ಭಯಭೀತರಾಗಿ ಓಡಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಸಾರ್ವಜನಿಕರ ಜೀವ ಭದ್ರತೆಗೆ ಧಕ್ಕೆಯಾಗುತ್ತಿರುವುದಾಗಿ ಅವರು ಆತಂಕ ವ್ಯಕ್ತಪಡಿಸಿದರು.

ಆದ್ದರಿಂದ ರೈಲ್ವೆ ಇಲಾಖೆ ಸಾರ್ವಜನಿಕರ ಹಿತ ದೃಷ್ಟಿಯಿಂದ ಅಂಡರ್‌ಪಾಸ್ ಸಮಸ್ಯೆಗೆ ಶಾಶ್ವತ ಪರಿಹಾರವಾಗಿ ಮೇಲ್ಸೇತುವೆ ನಿರ್ಮಿಸಬೇಕು. ಅದು ಸಾಧ್ಯವಾಗದಿದ್ದರೆ ಹಿಂದಿನಂತೆ ರೈಲ್ವೆ ಗೇಟ್ ಅಳವಡಿಸಿ ಸುರಕ್ಷಿತ ಸಂಚಾರಕ್ಕೆ ಅವಕಾಶ ಕಲ್ಪಿಸಬೇಕು. ಇಲ್ಲವಾದಲ್ಲಿ ಸಾರ್ವಜನಿಕರೊಂದಿಗೆ ಉಗ್ರ ಹೋರಾಟ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಹುಣಸಿನಹಳ್ಳಿ ವೆಂಕಟೇಶ್ ಎಚ್ಚರಿಸಿದರು.

ಈ ಸಂಬಂಧ ನೈರುತ್ಯ ರೈಲ್ವೆಯ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಿಗೆ ಮನವಿ ಪತ್ರ ಸಲ್ಲಿಸಿದರು.

ರೈಲ್ವೆ ನಿಲ್ದಾಣದ ಮುಂಭಾಗ ಪ್ರತಿಭಟನೆ ನಡೆಸಿದ ಬಳಿಕ ಕರ್ನಾಟಕ ದಲಿತ ರೈತಸೇನೆ ರಾಜ್ಯಾಧ್ಯಕ್ಷ ಹುಣಸಿನಹಳ್ಳಿ ವೆಂಕಟೇಶ್ ನೇತೃತ್ವದಲ್ಲಿ ನೈರುತ್ಯ ರೈಲ್ವೆಯ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಿಗೆ ಸಾರ್ವಜನಿಕರ ಸಮಸ್ಯೆ ಪರಿಹರಿಸುವಂತೆ ಒತ್ತಾಯಿಸಿ ಮನವಿ ಪತ್ರ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ದಲಿತ ರೈತಸೇನೆ ಪದಾಧಿಕಾರಿ ರೆಡ್ಡಿಹಳ್ಳಿ ಸುರೇಶ್, ವೇಣುಗೋಪಾಲ್, ರಾಜುಕೋಟೆ, ಕಾರಮಾನಹಳ್ಳಿ ಅಶೋಕ್, ಕೊಂಡೇನಹಳ್ಳಿ ರವಿಕುಮಾರ್, ಯಲವಹಳ್ಳಿ ತಿಮ್ಮರಾಜು, ಗಂಗಮ್ಮನಪಾಳ್ಯ ದಿನಕರ್ ಇದ್ದರು.

# ಹೋಮ-ಹವನಗಳ ಸಂಭ್ರಮದಲ್ಲಿ ಕನ್ನಿಕಾಪರಮೇಶ್ವರಿ ದೇವಾಲಯದ ವಾರ್ಷಿಕೋತ್ಸವ



ಬೂದಿಕೋಟೆ

ಗ್ರಾಮದ ಶ್ರೀಕನ್ನಿಕಾ ಪರಮೇಶ್ವರಿ ದೇವಾಲಯದಲ್ಲಿ ವಿನಾಯಕ ಸಮೇತ ಶ್ರೀವಾಸವಿ ಕನ್ನಿಕಾಪರಮೇಶ್ವರಿ ದೇವಿ, ನವಗ್ರಹ ಹಾಗೂ ನಾಗದೇವತೆಗಳ ಪುನರ್ ಪ್ರತಿಷ್ಠಾಪನೆಯ 16ನೇ ವರ್ಷದ ವಾರ್ಷಿಕೋತ್ಸವವು ಶುಕ್ರವಾರ ಧಾರ್ಮಿಕ ಶ್ರದ್ಧಾಭಕ್ತಿಯ ವಾತಾವರಣದಲ್ಲಿ ವಿಜೃಂಭಣೆಯಿಂದ ನಡೆಯಿತು.

ವಾರ್ಷಿಕೋತ್ಸವದ ಅಂಗವಾಗಿ ಮುಂಜಾನೆಯಿಂದಲೇ ವೇದ ಘೋಷಗಳ ನಡುವೆ ಗಣಪತಿ ಪ್ರಾರ್ಥನೆ, ಪುಣ್ಯಾಹವಾಚನ, ಋತ್ವಿಕ್ ವರಣ, ಪಂಚಾಮೃತ ಅಭಿಷೇಕ ಸೇರಿದಂತೆ ವಿಶೇಷ ಪೂಜಾ ವಿಧಿಗಳು ನೆರವೇರಿದವು. ಬಳಿಕ ಗಣೇಶ ಹೋಮ, ನವಗ್ರಹ ಹೋಮ, ದುರ್ಗಾ ಹೋಮ, ಮೃತ್ಯುಂಜಯ ಹೋಮ ಹಾಗೂ ಶ್ರೀ ವಾಸವಿ ಕನ್ನಿಕಾಪರಮೇಶ್ವರಿ ಹೋಮ ಸೇರಿದಂತೆ ವಿವಿಧ ಹೋಮ-ಹವನಗಳನ್ನು ಆಗಮ ಶಾಸ್ತ್ರಾನುಸಾರ ಭಕ್ತಿಭಾವದಿಂದ ನಡೆಸಿದರು.

ಈ ಸಂದರ್ಭದಲ್ಲಿ ದೇವಾಲಯವನ್ನು ವಿಶೇಷವಾಗಿ ಅಲಂಕರಿಸಲಾಗಿದ್ದು, ಬೂದಿಕೋಟೆ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಂದ ಆಗಮಿಸಿದ್ದ ನೂರಾರು ಭಕ್ತರು ದೇವಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿ ಕುಟುಂಬದ ಸುಖ-ಶಾಂತಿ ಹಾಗೂ ಸಮೃದ್ಧಿಗಾಗಿ ಪ್ರಾರ್ಥಿಸಿದರು. ಪೂಜೆಯ ನಂತರ ಭಕ್ತಾದಿಗಳಿಗೆ ತೀರ್ಥ-ಪ್ರಸಾದ ವಿತರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ದೇವಾಲಯದ ಟ್ರಸ್ಟ್ ವತಿಯಿಂದ ಆಗಮಿಸಿದ್ದ ಎಲ್ಲ ಭಕ್ತರಿಗೆ ಅನ್ನಸಂತರ್ಪಣೆಯ ವ್ಯವಸ್ಥೆ ಮಾಡಲಾಗಿತ್ತು.

# ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸಲು ಒತ್ತಾಯ

ತುಮಕೂರು

ನೀಟ್ ಹಗರಣದ ಹೊಣೆ ಹೊತ್ತು ಕೇಂದ್ರದ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ರಾಜೀನಾಮೆಗೆ ಆಗ್ರಹಿಸಿ ಯುವಜನತೆ ದೆಹಲಿಯ ಜಂತರ್ ಮಂಥರ್‌ನಲ್ಲಿ ನಡೆಸುತ್ತಿರುವ



ಹೋರಾಟ ಸರಿಯಾಗಿದ್ದು, ಪ್ರಧಾನಿ ಹಾಗೂ ರಾಷ್ಟ್ರಪತಿಗಳು ಕೂಡಲೇ ಅವರ ರಾಜೀನಾಮೆ ಪಡೆಯುವ ಮೂಲಕ ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸಬೇಕೆಂದು ಮಾಜಿ ಶಾಸಕ ಡಾ. ಎಸ್. ರಫೀಕ್ ಅಹ್ಮದ್ ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ನೀಟ್ ಹಗರಣ ಕುರಿತಂತೆ ಯುವಜನರು ಶಾಂತಿಯುತ ಪ್ರತಿಭಟನೆ ನಡೆಸುತ್ತಿದ್ದು, ಅವರ ಮೇಲೆ ದೆಹಲಿ ಪೊಲೀಸರು ನಡೆಸಿರುವ ಹಲ್ಲೆ ಖಂಡನೀಯ. ಕಳೆದ 10 ವರ್ಷಗಳಲ್ಲಿ ಹತ್ತಾರು ಬಾರಿ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿದೆ. ಹಲವಾರು ಜನರು ತಮ್ಮ ಹತ್ತಾರು ವರ್ಷಗಳ ಕನಸು, ಹಲವು ವರ್ಷಗಳ ಶ್ರಮ ವ್ಯರ್ಥವಾಗಿದ್ದರಿಂದ ಮನನೊಂದು ಆತ್ಮಹತ್ಯೆಗೆ ಶರಣಾಗಿದ್ದಾರೆ. 2026ರ ನೀಟ್ ಪರೀಕ್ಷೆ ರದ್ದಾಗಿ, ಮರು ಪರೀಕ್ಷೆ ನಡೆದ ಪರಿಣಾಮ ಸುಮಾರು 22 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಅವರ ಕುಟುಂಬದವರಿಗೆ ಸರಕಾರ ಸೂಕ್ತ ಪರಿಹಾರ ಒದಗಿಸ ಬೇಕೆಂದು ಡಾ. ರಫೀಕ್ ಅಹ್ಮದ್ ಆಗ್ರಹಿಸಿದ್ದಾರೆ.

ದೆಹಲಿಯ ಜಂತರ್ ಮಂತರನಲ್ಲಿ ಪ್ರತಿಭಟನೆ ನಡೆಸುತ್ತಿರುವ ಯುವಜನರು ಯಾವ ಪಕ್ಷದ ಕಾರ್ಯಕರ್ತರು ಅಲ್ಲ. ಹಲವಾರು ವರ್ಷಗಳಿಂದ ಶಿಕ್ಷಣ ವ್ಯವಸ್ಥೆಯ ಮೇಲಾಗುತ್ತಿರುವ ಗಧಾ ಪ್ರಹಾರ ಹಾಗೂ ಅವ್ಯವಸ್ಥೆಯನ್ನು ಖಂಡಿಸಿ, ಒಂದು ಸ್ಪಷ್ಟ ಉದ್ದೇಶದಿಂದ ಬೀದಿಗಿಳಿದು ಸರಕಾರದ ವಿರುದ್ಧ ಹೋರಾಟ ನಡೆಸುತ್ತಿದ್ದಾರೆ.

ಹಾಗಾಗಿ ಕೇಂದ್ರ ಸರಕಾರ ಪ್ರತಿಭಟನಾ ನಿರತ ವಿದ್ಯಾರ್ಥಿಗಳನ್ನು ಸರಕಾರದ ವಿರೋಧಿಗಳೆಂದು ಭಾವಿಸದೆ, ಅವರ ವಿರುದ್ಧ ಹಾಕಿರುವ ಎಲ್ಲಾ ಕೇಸುಗಳನ್ನು ವಾಪಸ್ ಪಡೆಯಬೇಕು. ಹಾಗಾಗಿ ಸರಕಾರ ಕೂಡಲೇ ಪ್ರತಿಭಟನಾ ನಿರತರ ಮೇಲೆ ಹಾಕಿರುವ ಕೇಸುಗಳನ್ನು ವಾಪಸ್ ಪಡೆಯಬೇಕೆಂದು ಮಾಜಿ ಶಾಸಕರಾದ ಡಾ.ರಫೀಕ್ ಅಹ್ಮದ್ ಒತ್ತಾಯಿಸಿದ್ದಾರೆ.

# ಕ್ರೀಡಾ ಸ್ಪರ್ಧೆ ಉದ್ಘಾಟನೆ

ಕನಕಪುರ

ದೈಹಿಕ ಮತ್ತು ಮಾನಸಿಕ ಧನಾತ್ಮಕ ಬೆಳವಣಿಗೆಯಲ್ಲಿ ಕ್ರೀಡಾ ಚಟುವಟಿಕೆಗಳು ಪ್ರಮುಖ ಪಾತ್ರವನ್ನು ವಹಿಸುತ್ತದೆ ಎಂದು ಬೆಂಗಳೂರು ದಕ್ಷಿಣ ಜಿಲ್ಲೆಯ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಎಂ. ಮರಿಸ್ವಾಮಿ ತಿಳಿಸಿದರು.

ಚಿಕ್ಕಮುದುವಾಡಿ ಮತ್ತು ದೊಡ್ಡ ಆಲಹಳ್ಳಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಯುಕ್ತ ಆಶ್ರಯದಲ್ಲಿ ತಾಲ್ಲೂಕು ಕ್ರೀಡಾಂಗಣದಲ್ಲಿ 2026-27ನೇ ಶೈಕ್ಷಣಿಕ ವರ್ಷದ ಕನಕಪುರ ತಾಲೂಕು ಮಟ್ಟದ ಕ್ರೀಡಾ ಸ್ಪರ್ಧೆ ಉದ್ಘಾಟಿಸಿ ಮಾತನಾಡಿದ ಅವರು ವಿದ್ಯಾರ್ಥಿಗಳು ಶೈಕ್ಷಣಿಕ ಚಟುವಟಿಕೆಯೊಂದಿಗೆ ಕ್ರೀಡೆ ಸ್ಪರ್ಧೆಗಳಲ್ಲಿಯೂ ಸಕ್ರಿಯವಾಗಿ ಪಾಲ್ಗೊಳ್ಳಬೇಕೆಂದು ಕರೆ ನೀಡಿದರು.

ತಾಲೂಕಿನ 9 ಕಾಲೇಜುಗಳು ಪಾಲ್ಗೊಂಡಿದ್ದು ಹೆಚ್ಚಿನ ಕ್ರೀಡಾಪಟುಗಳು ಬೇರೆ ಬೇರೆ ಕ್ರೀಡಾ ಸ್ಪರ್ಧೆಗಳಲ್ಲಿ ಭಾಗ ವಹಿಸಿದ್ದರು.

ಉದ್ಘಾಟನಾ ಸಮಾರಂಭದಲ್ಲಿ ಚಿಕ್ಕ ಮುದುವಾಡಿ ಕಾಲೇಜಿನ ಪ್ರಾಂಶುಪಾಲರಾದ ಕೆ ತಮ್ಮಣ್ಣ, ದೊಡ್ಡ ಆಲಹಳ್ಳಿ ಕರ್ನಾಟಕ ಪಬ್ಲಿಕ್ ಶಾಲೆಯ ಪ್ರಾಂಶುಪಾಲ ಡಾ. ಕುಮಾರ್, ಕನಕಪುರದ ಎಕ್ಸ್ ಮುನಿಸಿಪಾಲ್ ಕಾಲೇಜಿನ ಪ್ರಾಂಶುಪಾಲ ದೊಡ್ಡಬೋರಯ್ಯ ನಿವೃತ್ತ ಪ್ರಾಂಶುಪಾಲರಾದ ಕೊತ್ತಿಪುರದ ಶಿವಣ್ಣ, ಜಿಲ್ಲಾ ಪ್ರಾಂಶುಪಾಲರ ಸಂಘದ ಅಧ್ಯಕ್ಷ ಪ್ರದೀಪ್ ಹಾಗೂ ತಾಲೂಕಿನ ಎಲ್ಲಾ ಕಾಲೇಜಿನ ಕ್ರೀಡಾ ಉಸ್ತುವಾರಿ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಪಾಲ್ಗೊಂಡಿದ್ದರು.

# ಶಾಸಕ ಎಸ್.ಎನ್. ನಾರಾಯಣಸ್ವಾಮಿಗೆ ಸಚಿವ ಸ್ಥಾನ ನೀಡಲು ಆಗ್ರಹ

ಕೋಲಾರ

ಜಿಲ್ಲೆಯಲ್ಲಿಯೇ ಹಿರಿಯ ಹಾಗೂ ಬಲಗೈ ಸಮುದಾಯದಿಂದ ಮೂರು ಬಾರಿ ಶಾಸಕರಾಗಿ ಸತತವಾಗಿ ಆಯ್ಕೆಯಾಗಿರುವ ಬಂಗಾರಪೇಟೆ ಕ್ಷೇತ್ರದ ಶಾಸಕ ಎಸ್.ಎನ್. ನಾರಾಯಣಸ್ವಾಮಿಗೆ ಮುಂಬರುವ ಸಚಿವ ಸಂಪುಟ ವಿಸ್ತರಣೆಯಲ್ಲಿ ಸಚಿವ ಸ್ಥಾನ ನೀಡಬೇಕೆಂದು ಕಾಂಗ್ರೆಸ್ ಪಕ್ಷದ ಸಂಶೋಧನೆ ಹಾಗೂ ತರಬೇತಿ ವಿಭಾಗದ ಜಿಲ್ಲಾ ಅಧ್ಯಕ್ಷ ಮಾರ್ಜೇನಹಳ್ಳಿ ಬಾಬು ಕಾಂಗ್ರೆಸ್ ಹೈಕಮಾಂಡ್ ಅವರನ್ನು ಒತ್ತಾಯಿಸಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆಯಲ್ಲಿ ಒತ್ತಾಯಿಸಿದ ಅವರು ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಬಲಗೈ ಸಮುದಾಯದ ಏಕೈಕ ಕಾಂಗ್ರೆಸ್ ಶಾಸಕರಾಗಿರುವ ನಾರಾಯಣಸ್ವಾಮಿಗೆ ಅವಕಾಶ ನೀಡುವುದು ಸಾಮಾಜಿಕವಾಗಿ ನ್ಯಾಯಸಮ್ಮತವಾಗಿದೆ ದಿವಂಗತ ಟಿ. ಚನ್ನಯ್ಯ ಅವರ ನಂತರ ಜಿಲ್ಲೆಯ ಎಸ್ಸಿ ಬಲಗೈ ಸಮುದಾಯಕ್ಕೆ ಸಚಿವ ಸಂಪುಟದಲ್ಲಿ ಸಮರ್ಪಕವಾದ ಪ್ರಾತಿನಿಧ್ಯ ಸಿಕ್ಕಿಲ್ಲ. ಈ ಬಾರಿ ಆ ಸಮುದಾಯಕ್ಕೆ ಅವಕಾಶ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಲೋಕಸಭೆ ಚುನಾವಣೆಯ ವೇಳೆ ಬಲಗೈ ಸಮುದಾಯಕ್ಕೆ ಅವಕಾಶ ನೀಡುವುದಾಗಿ ಪಕ್ಷದ ನಾಯಕರು ನೀಡಿದ್ದ ಭರವಸೆಯನ್ನು ಈಡೇರಿಸಬೇಕು. ನಾರಾಯಣಸ್ವಾಮಿ ಬಂಗಾರಪೇಟೆ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷವನ್ನು ಬಲಿಷ್ಠವಾಗಿ ಸಂಘಟಿಸಿದ್ದಾರೆ ಸಚಿವ ಸ್ಥಾನ ನೀಡದಿದ್ದರೆ ಮುಂಬರುವ ಎಲ್ಲಾ ಚುನಾವಣೆಯಲ್ಲಿ ಎಸ್ಸಿ ಸಮುದಾಯದ ಅಸಮಾಧಾನ ಪಕ್ಷಕ್ಕೆ ಹಿನ್ನಡೆಯಾಗುವ ಸಾಧ್ಯತೆ ಇದೆ ಎಂದು ಕಾಂಗ್ರೆಸ್ ಹೈಕಮಾಂಡ್ ಅವರಿಗೆ ಮಾರ್ಜೇನಹಳ್ಳಿ ಬಾಬು ಎಚ್ಚರಿಸಿದರು.

# 12.95 ಲಕ್ಷ ಮತದಾರರಿಗೆ 100% ಎಣಿಕೆ ನಮೂನೆ ವಿತರಣೆ

ಕೋಲಾರ

ಜಿಲ್ಲಾದ್ಯಂತ ಮತದಾರರ ಪಟ್ಟಿಯ ನವೀಕರಣ ಹಾಗೂ ಮನೆ-ಮನೆ ಪರಿಶೀಲನಾ ಕಾರ್ಯವು ಅತ್ಯಂತ ಚುರುಕಿನಿಂದ ಸಾಗುತ್ತಿದೆ. ಜಿಲ್ಲಾ ಚುನಾವಣಾಧಿಕಾರಿಗಳು ಮತ್ತು ಕೋಲಾರ ಜಿಲ್ಲಾಧಿಕಾರಿಗಳ ಕಚೇರಿಯಿಂದ ದೊರೆತ ಅಧಿಕೃತ ಮಾಹಿತಿಯಂತೆ, ದಿನಾಂಕ 24-07-2026 ರ ಸಂಜೆ 04:00 ಗಂಟೆಯ ವೇಳೆಗೆ ಜಿಲ್ಲೆಯ ಎಲ್ಲಾ 6 ವಿಧಾನಸಭಾ ಕ್ಷೇತ್ರಗಳಲ್ಲಿ ಶೇ. 100 ರಷ್ಟು ಎಣಿಕೆ ನಮೂನೆಗಳನ್ನು (Enumeration Forms - EFs) ವಿತರಿಸಲಾಗಿದೆ. ಜಿಲ್ಲೆಯಲ್ಲಿರುವ ಒಟ್ಟು 12,95,265 ನೋಂದಾಯಿತ ಮತದಾರರ ಪೈಕಿ 10,28,276 ನಮೂನೆಗಳ ಡಿಜಿಟಲೀಕರಣ ಪ್ರಕ್ರಿಯೆ ಈಗಾಗಲೇ ಪೂರ್ಣಗೊಂಡಿದ್ದು, ಶೇ. 79.39 ರಷ್ಟು ಪ್ರಗತಿ ಸಾಧಿಸಲಾಗಿದೆ. ಇದಲ್ಲದೆ, 6,016 ಮತದಾರರು (ಶೇ.0.46) ನೇರವಾಗಿ ಆನ್‌ಲೈನ್ ಮೂಲಕ ತಮ್ಮ ನಮೂನೆಗಳನ್ನು ಸಲ್ಲಿಸಿದ್ದಾರೆ. ಪರಿಶೀಲನೆಯ ವೇಳೆಯಲ್ಲಿ ಮೃತಪಟ್ಟವರು, ಖಾಯಂ ಆಗಿ ಸ್ಥಳಾಂತರಗೊಂಡವರು ಹಾಗೂ ಗೈರುಹಾಜರಾದ ಮತದಾರರನ್ನು ಪ್ರತ್ಯೇಕಿಸಿ 'ASDDO' ವರ್ಗದಲ್ಲಿ ಗುರುತಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟು 77,473 ಮತದಾರರು ಈ ವರ್ಗಕ್ಕೆ ಸೇರಿದ್ದಾರೆ. ಇದರಲ್ಲಿ ಖಾಯಂ ಸ್ಥಳಾಂತರಗೊಂಡವರು 38,284, ಮೃತಪಟ್ಟ ಮತದಾರರು 21,971, ಈಗಾಗಲೇ ನೋಂದಾಯಿತ/ದ್ವಿಪ್ರತಿ ಮತದಾರರು 9,246, ಸಿಗದ ಅಥವಾ ಗೈರುಹಾಜರಾದ ಮತದಾರರು 7,069 ಹಾಗೂ ಇತರರು 903 ಸಂಖ್ಯೆಯಲ್ಲಿದ್ದಾರೆ.

ಕ್ಷೇತ್ರವಾರು ವಿವರಗಳನ್ನು ನೋಡುವುದಾದರೆ, ಕೋಲಾರ ವಿಧಾನಸಭಾ ಕ್ಷೇತ್ರವು 1,92,565 ನಮೂನೆಗಳನ್ನು ಡಿಜಿಟಲೀಕರಿಸುವ ಮೂಲಕ ಜಿಲ್ಲೆಯಲ್ಲೇ ಅಗ್ರಸ್ಥಾನದಲ್ಲಿದೆ. ಮುಳಬಾಗಿಲು ಕ್ಷೇತ್ರದಲ್ಲಿ ಅತಿ ಹೆಚ್ಚು ಅಂದರೆ 10,157 ಮತದಾರರು ಖಾಯಂ ಆಗಿ ಸ್ಥಳಾಂತರಗೊಂಡಿರುವುದು ಪತ್ತೆಯಾಗಿದೆ. ಮಾಲೂರು ಕ್ಷೇತ್ರದಲ್ಲಿ ಗರಿಷ್ಠ 4,899 ಮತದಾರರು ಗೈರುಹಾಜರಿ ಅಥವಾ ಸಿಗದ ಮತದಾರರ ಪಟ್ಟಿಯಲ್ಲಿದ್ದಾರೆ. ಉಳಿದಂತೆ ಶ್ರೀನಿವಾಸಪುರ (9,739 ಂಖಆಆಔ), ಕೆ.ಜಿ.ಎಫ್ (15,292 ASDDO), ಮತ್ತು ಬಂಗಾರಪೇಟೆ (14,210 ASDDO) ಕ್ಷೇತ್ರಗಳಲ್ಲೂ ಮತದಾರರ ಪಟ್ಟಿ ಶುದ್ಧೀಕರಣ ಕಾರ್ಯವು ಭರದಿಂದ ಸಾಗುತ್ತಿದೆ. ಸಾರ್ವಜನಿಕರು ಹಾಗೂ ಮತದಾರರು ಆನ್‌ಲೈನ್ ಸೌಲಭ್ಯವನ್ನು ಹೆಚ್ಚು ಬಳಸಿಕೊಳ್ಳುವಂತೆ ಜಿಲ್ಲಾ ಚುನಾವಣಾಧಿಕಾರಿಗಳು ಈ ಸಂದರ್ಭದಲ್ಲಿ ಕೋರಿದ್ದಾರೆ.

# ಕುರುಬರಪೇಟೆ ಸರ್ಕಾರಿ ಶಾಲೆಯಲ್ಲಿ ರಾಷ್ಟ್ರಧ್ವಜ ದಿನಾಚರಣೆ

ಕೋಲಾರ

ಕುರುಬರಪೇಟೆಯಲ್ಲಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 80ನೇ ರಾಷ್ಟ್ರಧ್ವಜ ದಿನಾಚರಣೆಯನ್ನು ಆಚರಿಸಲಾಯಿತು.

ಗೌರಿಪೇಟೆಯ ಕೆ.ಎನ್.ರವೀಂದ್ರನಾಥ್ ಮಾತನಾಡಿ, ಭಾರತಕ್ಕೆ ಸ್ವಾತಂತ್ರ್ಯಬರುವುದಕ್ಕಿಂತ ಮುಂಚಿತವಾಗಿಯೇ 22 ಜುಲೈ 1947 ರಲ್ಲಿ ತ್ರಿವರ್ಣ ಧ್ವಜವನ್ನು ಭಾರತದ ರಾಷ್ಟ್ರಧ್ವಜವನ್ನಾಗಿ ಅಂಗೀಕರಿಸಿದ ದಿನವಾಗಿದೆ. ಈ ಧ್ವಜವನ್ನು ಆಂಧ್ರಪ್ರದೇಶದ ಮಚಲಿ ಪಟ್ಟಣಂ ಬಳಿಯ ಭಟ್ಲ ಪೆನ್ನು ಮಾರ್ರು ಗ್ರಾಮದಲ್ಲಿ ಮೂರನೇ ಆಗಸ್ಟ್ 1876 ರಲ್ಲಿ ಜನಿಸಿದ ಪಿಂಗಾಳಿ ವೆಂಕಯ್ಯನವರು ವಿನ್ಯಾಸಗೊಳಿಸಿರುತ್ತಾರೆ. 1921 ರಲ್ಲಿ ಬೆಜವಾಡ ಈಗಿನ ವಿಜಯವಾಡದಲ್ಲಿ ನಡೆದ ಎಐಸಿಸಿ ಅಧಿವೇಶನದ ಸಂದರ್ಭದಲ್ಲಿ ಮಹಾತ್ಮ ಗಾಂಧೀಜಿಯವರು ಪಿಂಗಾಳಿ ವೆಂಕಯ್ಯನವರಿಗೆ ಧ್ವಜದ ವಿನ್ಯಾಸವನ್ನು ಸಲ್ಲಿಸಲು ಕೇಳುತ್ತಾರೆ. ಆಗ ವೆಂಕಯ್ಯನವರು ಕೆಂಪು ಮತ್ತು ಹಸಿರು ಬಣ್ಣದ ಧ್ವಜವನ್ನು ತೋರಿಸಿ ಕೆಂಪು ಬಣ್ಣವು ಹಿಂದುಗಳನ್ನು ಮತ್ತು ಹಸಿರು ಬಣ್ಣವು ಮುಸ್ಲಿಮರನ್ನು ಪ್ರತಿನಿಧಿಸುವುದಾಗಿ ತಿಳಿಸುತ್ತಾರೆ. ಆಗ ಗಾಂಧೀಜಿಯವರ ಸಲಹೆಯಂತೆ ಇದಕ್ಕೆ ದೇಶದ ಎಲ್ಲಾ ಇತರ ಪಂಗಡಗಳು ಮತ್ತು ಧರ್ಮಗಳನ್ನು ಪ್ರತಿನಿಧಿಸುವ ಬಿಳಿ ಪಟ್ಟಿಯನ್ನು ಸೇರಿಸಲಾಯಿತು. ನಂತರ ಕೆಂಪು ಬಣ್ಣವನ್ನು ಕಿತ್ತಲೆ ಬಣ್ಣಕ್ಕೆ ಬದಲಾಯಿಸಲಾಯಿತು ಮತ್ತು ಮಧ್ಯದಲ್ಲಿ ಅಶೋಕ ಚಕ್ರವನ್ನು ಸೇರಿಸಲಾಯಿತು. ಅಂದಿನಿಂದ ಇಂದಿನವರೆಗೆ ಪ್ರತಿ ವರ್ಷ ಜುಲೈ ತಿಂಗಳು 22ನೇ ತಾರೀಕಿನಂದು ರಾಷ್ಟ್ರಧ್ವಜದ ದಿನಚರಣೆಯನ್ನಾಗಿ ಆಚರಿಸಲಾಗುತ್ತಿದೆ ಎಂದರು.



ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷ ಪಿ. ನಾರಾಯಣಪ್ಪ, ಕುರುಬರಪೇಟೆಯ ಕೆ.ವಿ.ಶ್ರೀರಾಮ್, ಮುಖ್ಯೋಪಾಧ್ಯಾಯಿನಿ ಸುಜಾತ ಮಾತನಾಡಿ, ರಾಷ್ಟ್ರಧ್ವಜವನ್ನು ಖಾದಿ ಬಟ್ಟೆಯಲ್ಲಿ ತಯಾರು ಮಾಡಬೇಕು, ಧ್ವಜದ ಮಧ್ಯದಲ್ಲಿ ಅಶೋಕ ಚಕ್ರವನ್ನು ಮಹಾತ್ಮ ಹಂಸರಾಜ್ ರವರ ಸಲಹೆಯಂತೆ ಸೇರಿಸಲಾಯಿತು. ಇಡೀ ಭಾರತ ದೇಶಕ್ಕೆ ಹೆಚ್ಚು ಖಾದಿ ರಾಷ್ಟ್ರಧ್ವಜಗಳನ್ನು ಪೂರೈಸಿರುವ ರಾಜ್ಯ ಕರ್ನಾಟಕ ರಾಜ್ಯ ವಾಗಿರುತ್ತದೆ ಎಂದರು.

ಶಿಕ್ಷಕಿ ಕೆ.ಎಸ್.ಪದ್ಮಾವತಮ್ಮ ಸ್ವಾತಂತ್ರ್ಯ ಬರುವುದಕ್ಕಿಂತ ಮೊದಲು ಭಾರತೀಯರು ಬ್ರಿಟನ್ ರಾಷ್ಟ್ರಧ್ವಜವಾದ ಜ್ಯಾಕ್‌ಗೆ ನಮಸ್ಕರಿಸಬೇಕಾಗಿತ್ತು. ಆಗ ಇದರಿಂದ ಕಸಿವಿಸಿಕೊಂಡಿರುತರೆ ಪಿಂಗಾಳಿ ವೆಂಕಯ್ಯನವರು ಭಾರತೀಯರಿಗಾಗಿ ಪ್ರತ್ಯೇಕ ರಾಷ್ಟ್ರಧ್ವಜವನ್ನು ವಿನ್ಯಾಸಗೊಳಿಸುವ ಅಗತ್ಯವನ್ನು ಅರಿತುಕೊಂಡು, ಪ್ರೇರಿತವಾಗಿ ಇಂದಿನ ತ್ರಿವರ್ಣ ಧ್ವಜದ ನಿರ್ಮಾಣವನ್ನು ಮಾಡಿದರು ಎಂದರು.

ರೋಟರಿ ಸೆಂಟ್ರಲ್ ಅಧ್ಯಕ್ಷರಾದ ಶ್ರೀನಾಥ್ ವೆಂಕಟಾದ್ರಿ ರವರು ವಿದ್ಯಾರ್ಥಿಗಳಿಗೆ ನೋಟ್‌ಬುಕ್ ಮತ್ತು ಪೆನ್ನುಗಳನ್ನು ನೀಡಿದರು.

ಈ ಸಂದರ್ಭದಲ್ಲಿ ನಿವೃತ ಎ.ಎಸ್.ಐ. ಮುನಿಕೃಷ್ಣಯ್ಯ, ಎಂ. ನಾರಾಯಣ್, ಸಾಹಿತಿ ಡಾ.ಶರಣಪ್ಪ ಗಬ್ಬೂರ್, ಕೆ.ಹೆಚ್.ನಾಗರಾಜ್, ಕೆ.ಎನ್.ಎನ್. ಪ್ರಕಾಶ್, ಕೆ.ಎಸ್.ಸುಧಾಕರ್, ಪದಾಧಿಕಾರಿ ಆರ್.ಕೆ.ಸುಂದರ್ ಪ್ರಕಾಶ್, ಹೆಚ್. ರಾಜಕುಮಾರ್, ಹೆಚ್.ಎಂ.ಮಂಜುನಾಥ್, ರಮೇಶ್, ಮುನಿಕೃಷ್ಣ, ಶಿಕ್ಷಕಿ ಶೋಭಾವತಿ, ಪದ್ಮವತಿ ಹಾಜರಿದ್ದರು.

# ಶ್ರೀಮಲ್ಲೇಶಸ್ವಾಮಿ ದೇವಸ್ಥಾನದಲ್ಲಿ ಉದ್ಭವ ಲಿಂಗಕ್ಕೆ ಕುಂಭಾಬಿಷೇಕ

ಮಧುಗಿರಿ

ತಾಲ್ಲೂಕು ಬರ ಪರಿಸ್ಥಿತಿ ಎದುರಾಗುವ ಸಂಭವವಿದ್ದು, ಸೂಕ್ತ ಮಳೆಗಾಗಿ ಪ್ರಾರ್ಥಿಸಿ ಪಟ್ಟಣದಲ್ಲಿರುವ ಐತಿಹಾಸಿಕ ಶ್ರೀಪ್ರಸನ್ನ ಪಾರ್ವತಿ ಸಮೇತ ಮಲ್ಲೇಶ ಸ್ವಾಮಿ ದೇವಸ್ಥಾನದಲ್ಲಿರುವ ಉದ್ಭವ ಲಿಂಗಕ್ಕೆ ಕುಂಭಾಬಿಷೇಕ ಧಾರ್ಮಿಕ ಕಾರ್ಯವನ್ನು ನಡೆಸಿಕೊಡುವಂತೆ ಉಪವಿಭಾಧಿಕಾರಿ ಗೋಟೂರು ಶಿವಪ್ಪ ಮತ್ತು ತಹಶಿಲ್ದಾರ್ ನಂದಿನಿ ರವರಿಗೆ ಸರ್ವ ಭಕ್ತರ ಪರವಾಗಿ ಮನವಿ ಪತ್ರವನ್ನು ಸಲ್ಲಿಸಲಾಯಿತು.

ಈ ವೇಳೆ ಪುರಸಭೆ ಮಾಜಿ ಅಧ್ಯಕ್ಷ ಎಂ.ವಿ.ಗೋವಿಂದರಾಜು ಮಾತಾನಾಡಿ, ಮಧುಗಿರಿ ತಾಲೂಕಿನಲ್ಲಿ ಯಾವುದೇ ನೀರಾವರಿ ಆಶ್ರಯವಿಲ್ಲದೆ, ಮಳೆಯಾಶ್ರಿತ ಪ್ರದೇಶವಾಗಿದ್ದು. ಈ ವರ್ಷ ಸೂಕ್ತ ಸಮಯದಲ್ಲಿ ಮಳೆ ಯಾಗದ ಕಾರಣ ರೈತರು ಕಂಗಾಲಾಗಿದ್ದಾರೆ. ಇದರ ಜೊತೆಗೆ ಕುಡಿಯುವ ನೀರಿಗೂ ಹಾಗೂ ದನ-ಕರುಗಳಿಗೂ ಮೇವಿನ ಕೊರತೆಯಾಗುವ ಸಾಧ್ಯತೆಯಿದ್ದು, ಇಂತಹ ಸಂದಿಗ್ದ ಕಷ್ಟಕರ ಸಂದರ್ಭದಲ್ಲಿ ಗುರು- ಹಿರಿಯರ ದೇವರಿಗೆ ಮೊರೆ ಹೋಗುವುದು ಹಿಂದಿನಿಂದಲೂ ನಡೆದುಕೊಂಡು ಬಂದಿದೆ.

ಮಧುಗಿರಿ ಪಟ್ಟಣದಲ್ಲಿರುವ ಐತಿಹಾಸಿಕ ಶ್ರೀಪ್ರಸನ್ನ ಪಾರ್ವತಿ ಸಮೇತ ಮಲ್ಲೇಶ್ವರ ಸ್ವಾಮಿ ದೇವಸ್ಥಾನದಲ್ಲಿರುವ ಉದ್ಭವ ಲಿಂಗಕ್ಕೆ ಇಂತಹ ಸಂಕಷ್ಟ ಪರಿಸ್ಥಿತಿಯನ್ನು ಕುಂಭಾಭಿಷೇಕ ಮತ್ತಿತರ ಧಾರ್ಮಿಕ ಚಟುವಟಿಕೆಗಳು ಸರ್ವ ಭಕ್ತರ ಸಹಕಾರದೊಂದಿಗೆ



ನಡೆಸಿಕೊಂಡು ಬರಲಾಗುತ್ತಿತ್ತು .ಈ ದೇವಸ್ಥಾನವು ಮುಜರಾಯಿ ಇಲಾಖೆಗೆ ಒಳಪಡುವ ಕಾರಣ ದಯಮಾಡಿ ಈ ದೇವತಾ ಕಾರ್ಯಗಳಿಗೆ ಪ್ರಧಾನ ಅರ್ಚಕರ ಮೂಲಕ ಮಾಡಿಸಿ, ಭಕ್ತಾದಿಗಳಿಗೆ ಅನ್ನ ಸಂತರ್ಪಣೆ ನಡೆಯುವ ವೇಳೆಗೆ ಮಳೆ ಬಂದಿರುವುದು ಸಾಕಷ್ಟು ನಿದರ್ಶನಗಳಿವೆ. ಕೆರೆಕಟ್ಟೆಗಳೆಲ್ಲ ತುಂಬುವ ಸಾಕ್ಷಿಯೂ ಇದೆ. ಆದ್ದರಿಂದ ಈ ದೇವತಾ ಕಾರ್ಯಕ್ರಮವನ್ನು ನಡೆಸಲು ಉಪವಿಭಾಗಾಧಿಕಾರಿಗಳು ಹಾಗೂ ತಹಶಿಲ್ದಾರರ ರವರ ನೇತೃತ್ವದಲ್ಲಿ ಬರ ಪರಿಹಾರಕ್ಕಾಗಿ ಸರ್ವಭಕ್ತರ ಸಹಕಾರದೊಂದಿಗೆ ನಡೆಸಿಕೊಳ್ಳುವಂತೆ ಈ ಮೂಲಕ ಮಧುಗಿರಿ ಭಕ್ತರ ಪರವಾಗಿ ಮನವಿ ಮಾಡಿದರು.

ಈ ವೇಳೆ ಭಕ್ತ ಮಂಡಳಿಯ ಜೋಡಿದಾರ್ ಮುರಳಿ ಸ್ವಾಮಿಗಳು, ಪುರಸಭೆ ಮಾಜಿ ಸದಸ್ಯ ಅಲ್ತಾಫ್, ಜಿ. ಆರ್ ದನ್ ಪಾಲ್, ದೋಲಿ ಬಾಬು, ಕಿಶೋರ್ ಶೆಟ್ಟಿ, ಎಮ್. ವೆಂಕಟರಾಮು, ಜಿ. ನಾರಾಯಣರಾಜು, ರಾಘವೇಂದ್ರ, ಶಿವಕುಮಾರ್ ರೆಡ್ಡಿ,ಹೋಟೆಲ್ ಬಸವರಾಜು ಮತ್ತಿತ್ತರರು ಇದ್ದರು.

# 'ಮೌಲ್ಯಾಧಾರಿತ ಶಿಕ್ಷಣದಿಂದ ಮಾನವೀಯ ಸಮಾಜ ನಿರ್ಮಾಣ ಸಾಧ್ಯ'

ಚಿಕ್ಕಬಳ್ಳಾಪುರ

ಮೌಲ್ಯಾಧಾರಿತ ಶಿಕ್ಷಣದಿಂದ ಮಾನವೀಯ ಸಮಾಜ ನಿರ್ಮಾಣ ಸಾಧ್ಯ ಎಂದು 'ಒನ್ ವರ್ಲ್ಡ್ ಒನ್ ಫ್ಯಾಮಿಲಿ' ಅಭಿಯಾನದ ಸಂಸ್ಥಾಪಕ ಮುದ್ದೇನಹಳ್ಳಿ ಸತ್ಯಸಾಯಿ ಗ್ರಾಮದ ಸದ್ಗುರು ಶ್ರೀಮಧುಸೂದನ ಸಾಯಿ ಅವರು ಹೇಳಿದರು.

ತಾಲೂಕಿನ ಮುದ್ದೇನಹಳ್ಳಿಯ ಸತ್ಯ ಗ್ರಾಮದಲ್ಲಿ ಎರಡು ದಿನಗಳ ಅಂತಾರಾಷ್ಟ್ರೀಯ ಮೌಲ್ಯಾಧಾರಿತ ಶಿಕ್ಷಣ ಸಮ್ಮೇಳನಕ್ಕೆ ಚಾಲನೆ ನೀಡಿ ಮಾತನಾಡಿ, ಮೌಲ್ಯಾಧಾರಿತ ಶಿಕ್ಷಣದ ಮೂಲಕ ಕೇವಲ ದೇಶವನ್ನಷ್ಟೇ ಅಲ್ಲ, ಇಡೀ ಜಗತ್ತನ್ನೇ ಉತ್ತಮ ಸಮಾಜವಾಗಿ ರೂಪಿಸುವ ಸಂಕಲ್ಪದೊಂದಿಗೆ ಹೊಸ ಶಿಕ್ಷಣ ಮಾದರಿಯನ್ನು ರೂಪಿಸ ಲಾಗುತ್ತಿದೆ 'ಒನ್ ವರ್ಲ್ಡ್ ಒನ್ ಫ್ಯಾಮಿಲಿ' ಮಿಷನ್, ಶ್ರೀಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯ ಹಾಗೂ ಅಂತಾರಾಷ್ಟ್ರೀಯ ಮೌಲ್ಯಾಧಾರಿತ ಶಿಕ್ಷಣ ಸಂಸ್ಥೆಯ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿರುವ ಈ ಸಮ್ಮೇಳನದಲ್ಲಿ 19 ವಿಶ್ವವಿದ್ಯಾಲಯಗಳ ಪ್ರತಿನಿಧಿಗಳು ಭಾಗವಹಿಸಿದ್ದು "ಮಾನವರು ಮಾನವರಾಗಬೇಕು" ಎಂಬ ಧ್ಯೇಯವಾಕ್ಯದಡಿ ಶಿಕ್ಷಣ ತಜ್ಞರು, ಸಂಶೋಧಕರು ಹಾಗೂ ವಿವಿಧ ದೇಶಗಳ ಪ್ರತಿನಿಧಿಗಳು ಮೌಲ್ಯಾಧಾರಿತ ಶಿಕ್ಷಣದ ಅಗತ್ಯತೆ ಕುರಿತು ವಿಚಾರ ವಿನಿಮಯ ನಡೆಸಿ ಮೌಲ್ಯಾಧಾರಿತ ಶಿಕ್ಷಣಕ್ಕೆ ಎದುರಾಗಿರುವ ಸವಾಲುಗಳನ್ನು ಗುರುತಿಸಿ, ಅವುಗಳಿಗೆ ಕಾರ್ಯಸಾಧ್ಯ ಪರಿಹಾರಗಳನ್ನು



ಕಂಡುಕೊಳ್ಳುವ ಉದ್ದೇಶದಿಂದ ಈ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಲಾಗಿದೆ ಎಂದರು.

ಇಂದು ಅನೇಕ ಶಿಕ್ಷಣ ಸಂಸ್ಥೆಗಳು ಮೌಲ್ಯಗಳ ಕೊರತೆಯಿಂದ ತಮ್ಮ ಮೂಲ ಉದ್ದೇಶದಿಂದ ದೂರ ಸರಿಯುತ್ತಿವೆ. ಮತ್ತೊಂದೆಡೆ ಜೈಲುಗಳು ಅಪರಾಧಿಗಳಿಂದ ತುಂಬುತ್ತಿವೆ. ಒಡೆದ ಕುಟುಂಬಗಳು, ನೈತಿಕ ಮೌಲ್ಯಗಳ ಕುಸಿತ ಮತ್ತು ಸಾಮಾಜಿಕ ಅಸ್ಥಿರತೆ ಹೆಚ್ಚುತ್ತಿರುವ ಈ ಸಂದರ್ಭದಲ್ಲಿ ಜೈಲುಗಳನ್ನು ಸುಧಾರಿಸುವುದಕ್ಕಿಂತ ಶಾಲೆಗಳು ಹಾಗೂ ಶಿಕ್ಷಣ ವ್ಯವಸ್ಥೆಯನ್ನು ಬಲಪಡಿಸುವುದು ಶಾಶ್ವತ ಪರಿಹಾರ. ಉತ್ತಮ ಸಮಾಜ ನಿರ್ಮಾಣವಾಗಬೇಕಾದರೆ ಮೊದಲು ಉತ್ತಮ ಮನುಷ್ಯರನ್ನು ರೂಪಿಸಬೇಕಾಗಿದೆ ಎಂದು ಒತ್ತಿ ಹೇಳಿದ ಅವರು ಕೃತಕ ಬುದ್ಧಿಮತ್ತೆ ಎಐ ಜ್ಞಾನವನ್ನು ನೀಡಬಲ್ಲದು. ಆದರೆ ವ್ಯಕ್ತಿತ್ವ, ಮೌಲ್ಯಗಳು ಮತ್ತು ಸಂಸ್ಕಾರಗಳನ್ನು ಬೆಳೆಸುವುದು ಶಿಕ್ಷಕರಿಂದ ಮಾತ್ರ ಸಾಧ್ಯ. ಈ ಪರಿವರ್ತನೆ ಒಂದೇ ದಿನದಲ್ಲಿ ಸಾಧ್ಯವಾಗುವುದಿಲ್ಲ. ನಿರಂತರ ಪರಿಶ್ರಮ ಮತ್ತು ಬದ್ಧತೆಯ ಅಗತ್ಯವಿದೆ. ಪ್ರತಿಯೊಬ್ಬ ಮಗುವಿಗೂ ಮೌಲ್ಯಾಧಾರಿತ ಶಿಕ್ಷಣ ದೊರೆಯುವುದು ಅದರ ಹಕ್ಕು ಆಗಿದೆ ಎಂದರು.

ಉನ್ನತ ಶಿಕ್ಷಣ ಮಾಜಿ ಸಚಿವ ಹಾಗೂ ಶಾಸಕ ಡಾ ಸಿ.ಎನ್. ಅಶ್ವತ್ಥನಾರಾಯಣ ಮಾತನಾಡಿ, ಸದ್ಗುರು ಶ್ರೀ ಮಧುಸೂದನ ಸಾಯಿ ಅವರು ಉಚಿತ ಶಿಕ್ಷಣ, ಆರೋಗ್ಯ ಸೇವೆ ಮತ್ತು ಪೌಷ್ಟಿಕ ಆಹಾರದ ಮೂಲಕ ಲಕ್ಷಾಂತರ ಜನರ ಬದುಕಿನಲ್ಲಿ ಆಶಾಕಿರಣ ಮೂಡಿಸಿದ್ದಾರೆ

"ಮಕ್ಕಳಿಗೆ ಶಿಕ್ಷಣ ನೀಡುವುದಷ್ಟೇ ಸಾಕಾಗುವುದಿಲ್ಲ. ಉತ್ತಮ ವ್ಯಕ್ತಿತ್ವ, ಮಾನವೀಯ ಮೌಲ್ಯಗಳು ಮತ್ತು ಉಜ್ವಲ ಭವಿಷ್ಯವನ್ನು ರೂಪಿಸುವ ಶಿಕ್ಷಣ ಅಗತ್ಯ. ರಾಜ್ಯದ ಪ್ರತಿಯೊಂದು ಜಿಲ್ಲೆ ಹಾಗೂ ತಾಲೂಕು ಮಟ್ಟಕ್ಕೂ ಮೌಲ್ಯಾಧಾರಿತ ಶಿಕ್ಷಣ ವಿಸ್ತರಿಸಬೇಕಿದೆ," ಎಂದರು.

ವಿದ್ಯಾರ್ಥಿಗಳಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸುವುದೇ ಉತ್ತಮ ಸಮಾಜ ನಿರ್ಮಾಣದ ಮೊದಲ ಹೆಜ್ಜೆ. ಸೃಜನಶೀಲತೆ, ನಾವೀನ್ಯತೆ ಮತ್ತು ಸಾಮಾಜಿಕ ಕಾಳಜಿಯನ್ನು ಬೆಳೆಸುವ ಶಿಕ್ಷಣವೇ ಜವಾಬ್ದಾರಿಯುತ ನಾಗರಿಕರನ್ನು ರೂಪಿಸುತ್ತದೆ. ಜ್ಞಾನವಿದ್ದರೂ ಚಾರಿತ್ರ್ಯವಿಲ್ಲದ ವ್ಯಕ್ತಿ ಸಮಾಜಕ್ಕೆ ಅಪಾಯಕಾರಿಯಾಗಬಹುದು. ಆದ್ದರಿಂದ ಮೌಲ್ಯಾಧಾರಿತ ಶಿಕ್ಷಣದ ಮೂಲಕವೇ ಪ್ರೀತಿ, ಶಾಂತಿ ಮತ್ತು ಜವಾಬ್ದಾರಿಯಿಂದ ಕೂಡಿದ ಸಮಾಜ ನಿರ್ಮಾಣ ಸಾಧ್ಯ ಎಂದರು ಇದೆ ವೇಳೆ

ಮುದ್ದೇನಹಳ್ಳಿ ಸತ್ಯ ಸಾಯಿ ಗ್ರಾಮದ ಸದ್ಗುರು ಶ್ರೀಮಧುಸೂದನ ಸಾಯಿ ಅವರು "ಮಾನವ ಸೂಚ್ಯಂಕ" ಕೃತಿಯನ್ನು ಬಿಡುಗಡೆ ಮಾಡಿದರು.

ಕಾರ್ಯಕ್ರಮದಲ್ಲಿ ಪ್ರಶಾಂತಿ ಬಾಲಮಂದಿರ ಟ್ರಸ್ಟ್ ಅಧ್ಯಕ್ಷ ಬಿ.ಎನ್. ನರಸಿಂಹಮೂರ್ತಿ, ಶ್ರೀ ಸತ್ಯಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ ಕೆ. ಶ್ರೀಕಂಠಮೂರ್ತಿ, ಪ್ರೊ ಟಿ. ವೇಣುಗೋಪಾಲ್, ಡಾ ಆರ್. ಸಾಯಿಕೃಷ್ಣ ಸೇರಿದಂತೆ ವಿವಿಧ ವಿಶ್ವವಿದ್ಯಾಲಯಗಳ ಪ್ರತಿನಿಧಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

# 26 ರಂದು ವಿದ್ಯುತ್ ವ್ಯತ್ಯಯ

ತುಮಕೂರು

ಬೆಸ್ಕಾಂ ವಾಣಿಜ್ಯ, ಕಾರ್ಯ ಮತ್ತು ಪಾಲನಾ ವಿಭಾಗ ವ್ಯಾಪ್ತಿಯಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಂಡಿರುವುದರಿಂದ ಜುಲೈ 26ರಂದು ಬೆಳಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಅಂತರಸನಹಳ್ಳಿ, ಬೆಳ್ಳಾವಿ, ಹೆಗ್ಗೆರೆ, ಮಲ್ಲಸಂದ್ರ, ದೊಡ್ಡಸಾರಂಗಿ, ಬೆಳಧರ, ಊರ್ಡಿಗೆರೆ, ಸಿ.ಟಿ.ಕೆರೆ, ತುಮಕೂರು, ಚೇಳೂರು, ಹೊಸಕೆರೆ, ಹಾಗಲವಾಡಿ, ಮೆಳೆಕೋಟೆ, ನಂದಿಹಳ್ಳಿ, ಬಡ್ಡಿಹಳ್ಳಿ, ಕೋರಾ, ವಿಪ್ರೋಲೈನ್ ಉಪಸ್ಥಾವರಗಳಿಂದ ಹೊರಹೊಮ್ಮುವ ಎಲ್ಲಾ 11 ಕೆ.ವಿ. ಪೂರಕಗಳಿಗೆ ಒಳಪಡುವ ಗ್ರಾಮಗಳು/ಕೈಗಾರಿಕಾ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಕಾರ್ಯನಿರ್ವಾಹಕ ಇಂಜಿನಿಯರ್ ಮನವಿ ಮಾಡಿದ್ದಾರೆ.

# 26 ರಿಂದ ವಿದ್ಯುತ್ ವ್ಯತ್ಯಯ

ತುಮಕೂರು

ಬೆಸ್ಕಾಂ ವಾಣಿಜ್ಯ, ಕಾರ್ಯ ಮತ್ತು ಪಾಲನಾ ವಿಭಾಗ ವ್ಯಾಪ್ತಿಯಲ್ಲಿ ವಿದ್ಯುತ್ ಮಾರ್ಗ ಸ್ಥಳಾಂತರ ಕಾಮಗಾರಿ ಕೈಗೊಂಡಿರುವುದರಿಂದ ಜುಲೈ 26, 28, 30 ಆಗಸ್ಟ್ 1, 4, 6, 8, 11, 13, 16ರಂದು ಬೆಳಗ್ಗೆ 11 ರಿಂದ ಸಂಜೆ 4 ಗಂಟೆಯವರೆಗೆ ಗೋಪಾಲಪುರ, ಜಿ.ಹೊಸಹಳ್ಳಿ, ಸಿಂಗೋನಹಳ್ಳಿ, ಕೊಡಿಗೇನಹಳ್ಳಿ, ತೊಂಗನಹಳ್ಳಿ ಹಾಗೂ ಬೆಸ್ಕಾಂ ಗುಬ್ಬಿ ಉಪವಿಭಾಗ ಪೂರಕಗಳ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಕಾರ್ಯನಿರ್ವಾಹಕ ಇಂಜಿನಿಯರ್ ಮನವಿ

# ಬಿಜೆಪಿ ಶಾಸಕರ ಮೇಲೆ ಮೊಟ್ಟೆ ಎಸೆತ ಖಂಡನೀಯ, ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಒತ್ತಾಯ

ವಿಜಯಪುರ



ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆಯುತ್ತಿರುವ ವಿದ್ಯಾರ್ಥಿಗಳ ಹೋರಾಟವನ್ನು ರಾಜಕೀಯವಾಗಿ ದುರ್ಬಳಕೆ ಮಾಡಿಕೊಳ್ಳಲು ಪ್ರಧಾನಿ ನರೇಂದ್ರಮೋದಿ ಅವರ ನಿವಾಸದ ಎದುರು ಪ್ರತಿಭಟನೆ ನಡೆಸಿರುವ ಕಾಂಗ್ರೆಸ್ ನಾಯಕರ ನಡೆ ಖಂಡನೀಯವೆಂದು ಬಿಜೆಪಿ ಟೌನ್ ಅಧ್ಯಕ್ಷ ವೆಂಕಟೇಶ್ ಪ್ರಭು ಹೇಳಿದರು.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ನಾಯಕರಿಗೆ ವಿದ್ಯಾರ್ಥಿಗಳ ಬಗ್ಗೆ ಕಾಳಜಿ ಇದ್ದಿದ್ದರೆ, ಪ್ರಶ್ನೆಪತ್ರಿಕೆ ಸೋರಿಕೆಯಾದಾಗ ಹೋರಾಟ ಮಾಡಬೇಕಾಗಿತ್ತು. ಆದರೆ, ವಿದ್ಯಾರ್ಥಿಗಳು ಹೋರಾಟ ನಡೆಸುತ್ತಿರುವ ಸಮಯದಲ್ಲಿ, ದೇಶದ ಗಮನ ಸೆಳೆಯುವುದಕ್ಕಾಗಿ, ರಾಜಕೀಯವಾಗಿ ಉಪಯೋಗ ಪಡೆದುಕೊಳ್ಳುವುದಕ್ಕಾಗಿ, ಗುಪ್ತವಾಗಿ ಸಭೆ ನಡೆಸಿ, ಏಕಾಏಕಿ ಪ್ರಧಾನಿಯವರ ನಿವಾಸದೆದುರು ಪ್ರತಿಭಟನೆ ನಡೆಸಿದ್ದಾರೆ. ಇದಕ್ಕೆ ರಾಜ್ಯ ಸರಕಾರದ ಕುಮ್ಮಕ್ಕು ಇಲ್ಲದೇ ಮೊಟ್ಟೆ ಹೊಡೆಯಲು, ಹಲ್ಲೆ ನಡೆಸಲು ಹೇಗೆ ಸಾಧ್ಯ? ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ನಡೆ, ಕ್ಷಮಿಸಲಾರದಂತಹದ್ದು. ಬಿಜೆಪಿ ಶಾಸಕರಿಗೇ ರಕ್ಷಣೆ ನೀಡಲು ವಿಫಲವಾಗಿರುವ ರಾಜ್ಯ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು.ಹೋರಾಟ ಮಾಡಲು ಸಂವಿಧಾನದಲ್ಲಿ ಹಕ್ಕಿದೆ. ಆದರೆ, ಇಷ್ಟ ಬಂದಹಾಗೆ ಹೋರಾಟದ ರೂಪದಲ್ಲಿ, ರಾಜಕೀಯ ಬೇಳೆ ಬೇಯಿಸಿಕೊಳ್ಳಲು ಹೊರಟಿರುವ ಕಾಂಗ್ರೆಸ್ ಪಕ್ಷದ ನಾಯಕರಿಗೆ ಮುಂದಿನ ದಿನಗಳಲ್ಲಿ ಜನರೇ ಉತ್ತರ ನೀಡುತ್ತಾರೆ ಎಂದರು.

# 26ರಂದು ವಿದ್ಯುತ್ ವ್ಯತ್ಯಯ

ರಾಮನಗರ

220/66/11 ಕೆವಿ ಬಿಡದಿ ಸ್ವೀಕರಣ ಕೇಂದ್ರದ ಮಾರ್ಗದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿದೆ. ಆದ ಕಾರಣ ಶಾನುಮಂಗಲ, ಗೊಲ್ಲರಪಾಳ್ಯ, ಕೊಡಿಯಾಲ ಕರೇನಹಳ್ಳಿ, ತಾಳಗುಪ್ಪೆ, ಚಿನ್ನೇಗೌಡನದೊಡ್ಡಿ, ಚಿಕ್ಕಕುಂಟನಹಳ್ಳಿ, ಅಂಚಿಪುರ, ಅಬ್ಬನಕುಪ್ಪೆ, ವೃಷಭಾವತಿಪುರ, ತಿಮ್ಮೇಗೌಡನದೊಡ್ಡಿ, ಅಬ್ಬನಕುಪ್ಪೆ ಕಾಲೋನಿ, ಬಾನಂದೂರು, ಇಟ್ಟಮಡು, ಈಗಲ್‌ಟನ್, ಕೋಕಕೋಲ, ಜೋಗರದೊಡ್ಡಿ, ಛತ್ರ, ಬಿಡದಿ ಕೈಗಾರಿಕಾ ಪ್ರದೇಶ ಸೆಕ್ಟರ್-1 ಮತ್ತು ಸೆಕ್ಟರ್-2, ಬಿಡದಿ ಟೌನ್, ಮೇಡನಹಳ್ಳಿ, ಭೈರಮಂಗಲ, ಕೆಂಚುಗಾರನಹಳ್ಳಿ, ಚೌಕಳ್ಳಿ, ಕೆಂಪಯ್ಯನಪಾಳ್ಯ, ಹೊಸೂರು, ಬನ್ನಿಗಿರಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಗೆ ಜು. 26ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 4 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ರಾಮನಗರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 28ರಂದು ವಿದ್ಯುತ್ ವ್ಯತ್ಯಯ

ರಾಮನಗರ

ಚಿಕ್ಕೇನಹಳ್ಳಿ ಲೈನ್ ಮತ್ತು 66/11ಕೆವಿ ಹಳ್ಳಿಮಾರನಹಳ್ಳಿ, ಚಿಕ್ಕೇನಹಳ್ಳಿ ಉಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿದೆ. ಆದ ಕಾರಣ ಅಳ್ಳಿಮಾರನಹಳ್ಳಿ, ದೊಡ್ಡಮುದುವಾಡಿ, ಚಿಕ್ಕಮುದುವಾಡಿ, ದೊಡ್ಡಕಲ್ಬಾಳು, ಕೊಟ್ಟಗಾಳು ಪಂಚಾಯಿತಿ ವ್ಯಾಪ್ತಿ ಮತ್ತು ಹಳೆಹೊನ್ನಿಗನಹಳ್ಳಿ, ಹೊಸಕೋಟೆ, ತಾಮಸಂದ್ರ ಗ್ರಾಮಗಳಿಗೆ ಜು. 28ರಂದು ಬೆಳಗ್ಗೆ 10 ರಿಂದ ಸಂಜೆ 4.30ರ ವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ಕನಕಪುರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಾಲಿಕೆ ವ್ಯಾಪ್ತಿಯಲ್ಲಿ 6.10 ಕಿ.ಮೀ. ಪಾದಚಾರಿ ಮಾರ್ಗ ಅತಿಕ್ರಮಣ ಮುಕ್ತ



ಬೆಂಗಳೂರು

ಸಾರ್ವಜನಿಕರ ಸುರಕ್ಷಿತ ಹಾಗೂ ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರ ನಿರ್ದೇಶನದಂತೆ ಹಾಗೂ ಬೆಂಗಳೂರು ದಕ್ಷಿಣ ನಗರ ಪಾಲಿಕೆ ಆಯುಕ್ತ ಕೆ.ಎನ್. ರಮೇಶ್ ಅವರ ಮಾರ್ಗದರ್ಶನದಲ್ಲಿ ಪಾಲಿಕೆ ವ್ಯಾಪ್ತಿಯಲ್ಲಿ ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ ಮುಂದುವರಿದಿದೆ. ಕಾರ್ಯಾಚರಣೆಯ ಭಾಗವಾಗಿ ಇಂದು ಒಟ್ಟು 6.10 ಕಿ.ಮೀ. ಉದ್ದದ ಪಾದಚಾರಿ ಮಾರ್ಗವನ್ನು ಅತಿಕ್ರಮಣ ಮುಕ್ತಗೊಳಿಸಲಾಗಿದೆ.

ಪಾಲಿಕೆ ವ್ಯಾಪ್ತಿಯ ವಿವಿಧ ಪ್ರಮುಖ ಹಾಗೂ ಉಪ ರಸ್ತೆಗಳ ಪಾದಚಾರಿ ಮಾರ್ಗಗಳಲ್ಲಿ ನಿರ್ಮಿಸಲಾಗಿದ್ದ ಅನಧಿಕೃತ ಒತ್ತುವರಿಗಳನ್ನು ಸಂಚಾರ ಪೊಲೀಸರು, ಕಾನೂನು ಸುವ್ಯವಸ್ಥೆ ವಿಭಾಗದ ಅಧಿಕಾರಿಗಳು ಹಾಗೂ ಸಂಬಂಧಪಟ್ಟ ಇತರೆ ಇಲಾಖೆಗಳ ಸಹಕಾರದೊಂದಿಗೆ ತೆರವುಗೊಳಿಸಲಾಗಿದೆ. ಬೊಮ್ಮನಹಳ್ಳಿ ಮತ್ತು ಆನೇಕಲ್ ಭಾಗದ ಎಚ್‌ಎಸ್‌ಆರ್ ಲೇಔಟ್ ಉಪವಿಭಾಗದ 24ನೇ ಮುಖ್ಯ ರಸ್ತೆಯಲ್ಲಿ 0.80 ಕಿ.ಮೀ. ಪಾದಚಾರಿ ಮಾರ್ಗವನ್ನು ಒತ್ತುವರಿ ಮುಕ್ತಗೊಳಿಸಲಾಗಿದ್ದು, 7 ಅಂಗಡಿ ಹಾಗೂ ಪೆಟ್ಟಿಗೆ ಅಂಗಡಿಗಳು, 10 ಕೈಗಾಡಿಗಳು, 4 ಮೇಲ್ಛಾವಣಿ ಹಾಗೂ ತಾತ್ಕಾಲಿಕ ಛಾವಣಿಗಳು, 5 ಮೆಟ್ಟಿಲು ಮತ್ತು ಇಳಿಜಾರು ಮಾರ್ಗಗಳು ಹಾಗೂ 7 ಜಾಹೀರಾತು ಫಲಕಗಳನ್ನು ತೆರವುಗೊಳಿಸಲಾಗಿದೆ.

ಬಿಟಿಎಂ ಲೇಔಟ್ ವಿಭಾಗದ ಡಾ. ಮರಿಗೌಡ ರಸ್ತೆ, 29ನೇ ಮುಖ್ಯ ರಸ್ತೆ, ಬಿಟಿಎಂ 2ನೇ ಹಂತ ಮತ್ತು 57ನೇ ಕ್ರಾಸ್ ರಸ್ತೆಯಲ್ಲಿ 3.80 ಕಿ.ಮೀ. ಪಾದಚಾರಿ ಮಾರ್ಗವನ್ನು ಅತಿಕ್ರಮಣ ಮುಕ್ತಗೊಳಿಸಲಾಗಿದೆ. ಈ ವೇಳೆ 9 ಅಂಗಡಿ ಹಾಗೂ ಪೆಟ್ಟಿಗೆ ಅಂಗಡಿಗಳು, 2 ಕೈಗಾಡಿಗಳು ಮತ್ತು 16 ತಾತ್ಕಾಲಿಕ ಛಾವಣಿಗಳನ್ನು ತೆರವುಗೊಳಿಸಲಾಗಿದೆ.

ಇದೇ ವೇಳೆ ಎಚ್‌ಎಸ್‌ಆರ್ ಲೇಔಟ್ ವಿಭಾಗದ 19ನೇ ಮತ್ತು 24ನೇ ಮುಖ್ಯ ರಸ್ತೆಯಲ್ಲಿ 1.50 ಕಿ.ಮೀ. ಪಾದಚಾರಿ ಮಾರ್ಗವನ್ನು ತೆರವುಗೊಳಿಸಲಾಗಿದ್ದು, 4 ಅಂಗಡಿ ಹಾಗೂ ಪೆಟ್ಟಿಗೆ ಅಂಗಡಿಗಳು, 4 ಕೈಗಾಡಿಗಳು, 8 ಮೇಲ್ಛಾವಣಿ ಹಾಗೂ ತಾತ್ಕಾಲಿಕ ಛಾವಣಿಗಳು, 8 ಮೆಟ್ಟಿಲು ಮತ್ತು ಇಳಿಜಾರು ಮಾರ್ಗಗಳು, 11 ಜಾಹೀರಾತು ಫಲಕಗಳು ಹಾಗೂ 3 ತಾತ್ಕಾಲಿಕ ಛಾವಣಿಗಳನ್ನು ತೆರವುಗೊಳಿಸಲಾಗಿದೆ.

ಒಟ್ಟಾರೆ ಕಾರ್ಯಾಚರಣೆಯಲ್ಲಿ 20 ಅಂಗಡಿ ಹಾಗೂ ಪೆಟ್ಟಿಗೆ ಅಂಗಡಿಗಳು, 16 ಕೈಗಾಡಿಗಳು, 12 ಮೇಲ್ಛಾವಣಿ ಹಾಗೂ ತಾತ್ಕಾಲಿಕ ಛಾವಣಿಗಳು, 13 ಮೆಟ್ಟಿಲು ಮತ್ತು ಇಳಿಜಾರು ಮಾರ್ಗಗಳು, 18 ಜಾಹೀರಾತು ಫಲಕಗಳು ಹಾಗೂ 19 ತಾತ್ಕಾಲಿಕ ಅಥವಾ ಶಾಶ್ವತ ಛಾವಣಿಗಳನ್ನು ತೆರವುಗೊಳಿಸಲಾಗಿದೆ. ಸಾರ್ವಜನಿಕರ ಸಂಚಾರಕ್ಕೆ ಅಡಚಣೆ ಉಂಟುಮಾಡುವ ಅನಧಿಕೃತ ಒತ್ತುವರಿಗಳ ವಿರುದ್ಧ ಮುಂದಿನ ದಿನಗಳಲ್ಲಿಯೂ ಕಾರ್ಯಾಚರಣೆ ಮುಂದುವರಿಯಲಿದೆ ಎಂದು ಪಾಲಿಕೆ ಅಧಿಕಾರಿಗಳು ತಿಳಿಸಿದ್ದಾರೆ.

# ಉದ್ಧಟತನ ಬಿಡಿ-ಸೂಕ್ತ ವ್ಯಕ್ತಿಗೆ ಸೂಕ್ತ ಸ್ಥಾನ ಕೊಡಿ: ಆಗ್ರಹ

ಬೆಂಗಳೂರು

ಸೂಕ್ತ ವ್ಯಕ್ತಿಗೆ ಸೂಕ್ತ ಸ್ಥಾನ ಕೊಡುವುದು ಸರಕಾರದ ಬದ್ಧತೆಯಾಗಿರಬೇಕು ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ತಿಳಿಸಿದ್ದಾರೆ.

ಅವರು ಇಂದು ಜಿ.ಕೆ.ವಿ.ಕೆ. ಯಲ್ಲಿ ನಡೆಯುವ ಕೃಷಿ ವಿದ್ಯಾರ್ಥಿಗಳ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದರು. ಇಲ್ಲಿವರೆಗೆ ವೈದ್ಯಕೀಯ, ಎಂಜಿನಿಯರಿಂಗ್ ಸೀಟುಗಳು ಮಾರಾಟವಾಗುತ್ತಿದ್ದವು. ಈಗ ರೈತ ಮಕ್ಕಳ ಸೀಟುಗಳೂ ಮಾರಾಟವಾಗುತ್ತಿವೆ ಎಂದು ಕಳವಳ ವ್ಯಕ್ತಪಡಿಸಿದರು. ಸರಕಾರವು ನಿಮಗೆ ದ್ರೋಹ ಮಾಡುವುದನ್ನು ಯಾರಿಂದಲೂ ಸಹಿಸಲಸಾಧ್ಯ ಎಂದು ತಿಳಿಸಿದರು.

ಸರಕಾರ ಅತಿ ಶೀಘ್ರವಾಗಿ ಧಾವಿಸಿ ಬಂದು ನಿಮ್ಮ ಸಮಸ್ಯೆಯನ್ನು ಬಗೆಹರಿಸಬೇಕು ಎಂದು ಆಗ್ರಹಿಸಿದರು. ಸರಕಾರ ಬೆಂಗಳೂರಲ್ಲಿ ಇಲ್ಲದಿರುವುದು ವಿಪರ್ಯಾಸ ಎಂದು ಟೀಕಿಸಿದರು. ದೆಹಲಿಗೆ ಹೋದ ಸರಕಾರ ಯಾವತ್ತು ಬರುತ್ತದೋ ಗೊತ್ತಿಲ್ಲ ಎಂದು ವ್ಯಂಗ್ಯವಾಡಿದರು.

ರಾಜ್ಯದ ಮುಖ್ಯ ಕಾರ್ಯದರ್ಶಿಗೆ ನಿಮ್ಮ ಬೇಡಿಕೆಗಳ ಕುರಿತು ಪತ್ರದ ಮೂಲಕ ಗಮನ ಸೆಳೆಯುವೆ ಎಂದ ಅವರು, ಕೃಷಿ ಇಲಾಖೆ ಕಮೀಷನ್‌ಗೂ ಮಾತನಾಡುವೆ ಎಂದು ತಿಳಿಸಿದರು. ನೀವು ಬೀದಿಯಲ್ಲಿ ಕುಳಿತುಕೊಳ್ಳುವುದನ್ನು ಸರಕಾರ ಹಗುರವಾಗಿ ಹಾಗೂ ಲಘುವಾಗಿ ತೆಗೆದುಕೊಳ್ಳಬಾರದು ಎಂದು ಹೇಳಿದರು.

ನೀಟ್ ಪರೀಕ್ಷೆ ಪ್ರಶ್ನೆಪತ್ರಿಕೆ ಸೋರಿಕೆ ಸಂಬಂಧ ಜಂತರ್ ಮಂಥರ್‌ನಲ್ಲಿ ಕುಳಿತಿದ್ದಾರಲ್ಲವೇ? ಎಂದು ಕೇಳಿದರಲ್ಲದೇ, ಈ ಸಮಸ್ಯೆ ಪರಿಹಾರಕ್ಕೆ ಕೇಂದ್ರ ಸರಕಾರ ಕ್ರಮ ಕೈಗೊಂಡಿದೆ ಎಂದು ಗಮನ ಸೆಳೆದರು. ಸಮಸ್ಯೆ ಪರಿಹಾರಗೊಂಡರೂ ಕಾಕ್ರೋಚ್‌ಗಳು ಅಲ್ಲೇ ಕುಳಿತಿವೆ. ಕಾಕ್ರೋಚ್‌ಗಳಿಗೆ ನಿಮ್ಮ ಸಮಸ್ಯೆ ಯಾಕೆ ಅರ್ಥವಾಗಿಲ್ಲ ಎಂದು ಪ್ರಶ್ನಿಸಿದರು. ಹೊಟ್ಟೆಪಾಡು ಮಾತ್ರ ನೋಡುವ ಕಾಕ್ರೋಚ್‌ಗಳಿಂದ ಯಾರಿಗಾದರೂ ಒಳ್ಳೇದಾದುದು ನೋಡಿದ್ದೀರಾ ಎಂದು ಕೇಳಿದರು.

ಸರಕಾರ ಉದ್ಧಟತನ ಮುಂದುವರೆಸಿದರೆ ಮತ್ತೆ ಬರುವೆ ಎಂದು ಎಚ್ಚರಿಸಿದರು. ಒಗ್ಗಟ್ಟು ಎಂಬುದೇ ಶಕ್ತಿ. ಆ ಶಕ್ತಿ ಪ್ರದರ್ಶನ ಇಲ್ಲಿ ನಡೆದಿದೆ ಎಂದು ಹೇಳಿದರು

# ದೇವಾಲಯಗಳ ಹುಂಡಿ ಭದ್ರತೆಗೆ ಸಿಸಿಟಿವಿ ಕಣ್ಗಾವಲು: ಜಿಲ್ಲಾಧಿಕಾರಿ

ಬೆಂ.ಗ್ರಾ.ಜಿಲ್ಲೆ



ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಗೆ ಒಳಪಡುವ ಪ್ರವರ್ಗ ಎ ಮತ್ತು ಬಿ ದೇವಾಲಯಗಳ ಹುಂಡಿ ಭದ್ರತೆ ಸೇರಿದಂತೆ ಎಣಿಕೆ ಕಾರ್ಯ, ನಗದು ವಹಿವಾಟುಗಳ ಪಾರದರ್ಶಕತೆ ಕಾಪಾಡಲು ಸಿಸಿಟಿವಿ ವೆಬ್ ಕ್ಯಾಮರಾ ಅಳವಡಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ. ಕೆ.ಎನ್ ಅನುರಾಧ ತಿಳಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ನ್ಯಾಯಾಲಯ ಸಭಾಂಗಣದಲ್ಲಿ ಶುಕ್ರವಾರ ನಡೆದ ದೇವಾಲಯಗಳ ಹುಂಡಿಗಳ ಭದ್ರತೆ ಕುರಿತ ಸಭೆಯಲ್ಲಿ ಅವರು ಮಾತನಾಡಿದರು.

ದೇವಾಲಯಗಳಲ್ಲಿ ಹುಂಡಿ ಎಣಿಕೆ/ಲೆಕ್ಕಪತ್ರ ನಿರ್ವಹಣೆ ಸಂದರ್ಭದಲ್ಲಿ ಕಳ್ಳತನ ಮತ್ತು ಚಿನ್ನಾಭರಣ, ನಗದು ಇತ್ಯಾದಿಗಳ ದುರುಪಯೋಗವಾಗುವುದನ್ನು ತಡೆಯಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲು ಸರ್ಕಾರ ಮಾರ್ಗಸೂಚಿ ಬಿಡುಗಡೆಗೊಳಿಸಿದ್ದು ಅಗತ್ಯ ಕ್ರಮ ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚಿಸಿದರು.

ದೇವಾಲಯದಲ್ಲಿ ಅಳವಡಿಸುವ ಹುಂಡಿಗಳಿಗಳು ನಾಲ್ಕು ದಿಕ್ಕಿನಿಂದ ಕಾಣುವಂತೆ ಅಗತ್ಯವಾದ ಸಿಸಿ ಟಿವಿ ಫುಜಟ ಕ್ಯಾಮರಾಗಳನ್ನು ಕಡ್ಡಾಯವಾಗಿ ಅಳವಡಿಸಿ ಧಾರ್ಮಿಕ ದತ್ತಿ ಇಲಾಖೆ ಮೇಲ್ವಿಚಾರಣೆ ನಡೆಸುವುದು. ಜೊತೆಗೆ ವೆಬ್ ಕ್ಯಾಮರಾ ಭದ್ರತೆ ದೃಷ್ಟಿಯಿಂದ ಜಿಲ್ಲಾಧಿಕಾರಿ, ಪೊಲೀಸ್ ಅಧೀಕ್ಷಕರು, ಪೊಲೀಸ್ ಠಾಣೆ ಕಚೇರಿಗಳಿಗೆ ದೇವಾಲಯಗಳ ವೆಬ್ ಕ್ಯಾಮರಾ ಸಂಪರ್ಕ ಕಲ್ಪಿಸಿ ವೀಕ್ಷಣೆ ಮಾಡುವುದು.

ನಗದು ಕಳ್ಳತನ ತಪ್ಪಿಸಲಕ ಡಿಜಿಟಲ್ ಪಾವತಿಗೆ ಹೆಚ್ಚಿನ ಉತ್ತೇಜನ ನೀಡಲು ಕ್ಯೂ ಆರ್ ಕೋಡ್ ಅಳವಡಿಸಿ ಜೊತೆಗೆ ಅದರ ಅಡಿಯಲ್ಲಿ ಸಂಬಂಧಪಟ್ಟ ಬ್ಯಾಂಕ್ ವಿವರಗಳನ್ನು ಅಳವಡಿಸಬೇಕು.

**ಹುಂಡಿ ಎಣಿಕೆಗೆ ಸಾರ್ವಜನಿಕರಿಗೆ ಅವಕಾಶವಿಲ್ಲ:**

ಹುಂಡಿ ಎಣಿಕೆಗೆ ಸಾರ್ವಜನಿಕರ ಸೇವೆಯನ್ನು ಪಡೆಯುವುದರ ಬದಲಿಗೆ ಕಡ್ಡಾಯವಾಗಿ ಗೃಹ ರಕ್ಷಕದಳ ಸಿಬ್ಬಂದಿ, ಬ್ಯಾಂಕ್ ಸಿಬ್ಬಂದಿ, ಸರ್ಕಾರಿ ನೌಕರರ ಸೇವೆಯನ್ನು ಪಡೆಯುವುದು. ಖಾಸಗಿ ಅಥವಾ ಸಾರ್ವಜನಿಕರ ಸೇವೆಯನ್ನು ಹುಂಡಿ ಎಣಿಕೆಗೆ ಪಡೆಯಲು ಅವಕಾಶವಿಲ್ಲ.

ಹುಂಡಿ ಎಣಿಕೆಯನ್ನು ಸಂಬಂಧಪಟ್ಟ ತಹಶೀಲ್ದಾರ್ ಮೇಲ್ವಿಚಾರಣೆ ನಡೆಸುವುದು. ಹುಂಡಿ ಎಣಿಕೆ ಸಂದರ್ಭದಲ್ಲಿ ಸ್ವೀಕೃತವಾಗುವ ಚಿನ್ನ, ಬೆಳ್ಳಿ ಇತರೆ ಬೆಲೆ ಬಾಳುವ ವಸ್ತುಗಳು ಸ್ವೀಕೃತವಾದಾಗ ಅಂತಹ ವಸ್ತುಗಳನ್ನು ಎಣಿಕೆ ದಿನದಂದೇ ಕಡ್ಡಾಯವಾಗಿ ಮೌಲ್ಯಮಾಪನ ಮಾಡಿಸಿ ಅಂದೇ ಸಂಬಂಧಪಟ್ಟ ಜಿಲ್ಲಾ ಉಪ/ಉಪ ಖಜಾನೆಯಲ್ಲಿ ಜಮಾ ಮಾಡಬೇಕು. ಎಣಿಕೆಗೆ ಹಾಜರಿರುವ ಸಿಬ್ಬಂದಿ ಮತ್ತು ಅಧಿಕಾರಿಗಳನ್ನು ಖಚಿತ ಪಡಿಸಿಕೊಳ್ಳಲು Face Recognition ಅನ್ನು ಅಳವಡಿಸುವುದು ಮತ್ತು ಸಿಬ್ಬಂದಿ ಮತ್ತು ಅಧಿಕಾರಿಗಳು ಎಣಿಕೆಗೆ ಪ್ರವೇಶಿಸುವ ಸಂದರ್ಭದಲ್ಲಿ Cash in handನ್ನು ಘೋಷಿಸುವುದು.

ಹುಂಡಿ ತೆರೆಯುವುದರಿಂದ, ಹುಂಡಿ ಎಣಿಕೆ ಮಾಡಿ ಬ್ಯಾಂಕಿನವರಿಗೆ ಹಸ್ತಾಂತರಿಸುವವರೆಗೆ ಸಂಪೂರ್ಣವಾಗಿ ವಿಡಿಯೋ ಚಿತ್ರೀಕರಣವನ್ನು ದಿನಾಂಕ ಮತ್ತು ಸಮಯ ದಾಖಲೆಯಾಗುವಂತೆ ಕಡ್ಡಾಯವಾಗಿ ಚಿತ್ರೀಕರಿಸಬೇಕು.

ಕಂದಾಯ, ಪೊಲೀಸ್, ಧಾರ್ಮಿಕ ದತ್ತಿ,, ಸ್ಥಳೀಯ ಪ್ರಾಧಿಕಾರ ಮತ್ತು ಇತರೆ ಸಂಬಂಧಪಟ್ಟ ಅಧಿಕಾರಿಗಳು ಕನಿಷ್ಠ 15 ದಿನಗಳಿಗೊಮ್ಮೆ ದೇವಾಲಯಗಳಿಗೆ ಜಂಟಿಯಾಗಿ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿ ವ್ಯವಸ್ಥೆಗಳು ಸುವ್ಯವಸ್ಥಿತ ರೀತಿಯಲ್ಲಿ ಇರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು ಹಾಗೂ ನ್ಯೂನತೆಗಳಿದ್ದಲ್ಲಿ ಕೂಡಲೇ ಸರಿಪಡಿಸತಕ್ಕದ್ದು.

**ಪ್ರವರ್ಗ 'ಎ' ದೇವಾಲಯಗಳು**

1. ಶ್ರೀಘಾಟಿ ಸುಬ್ರಹ್ಮಣ್ಯ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ದೊಡ್ಡಬಳ್ಳಾಪುರ ತಾಲ್ಲೂಕು.
2. ಶ್ರೀಗಂಗಾಧರೇಶ್ವರಸ್ವಾಮಿ ಮತ್ತು ಶ್ರೀ ಹೊನ್ನಾದೇವಿ ದೇವಾಲಯ ಶಿವಗಂಗೆ ನೆಲಮಂಗಲ ತಾಲ್ಲೂಕು.
3. ಶ್ರೀಬೈಲಾಂಜನೇಯಸ್ವಾಮಿ ದೇವಾಲಯ ಬೈರಶೆಟ್ಟಿಹಳ್ಳಿ ನೆಲಮಂಗಲ ತಾಲ್ಲೂಕು.


**ಪ್ರವರ್ಗ 'ಬಿ' ದೇವಾಲಯಗಳು**

1. ಶ್ರೀವೀರಭದ್ರಸ್ವಾಮಿ ದೇವಾಲಯ ದೇವರಹೊಸ ಹಳ್ಳಿ ನೆಲಮಂಗಲ ತಾಲ್ಲೂಕು.
2. ಶ್ರೀವೆಂಕಟರಮಣಸ್ವಾಮಿ ದೇವಾಲಯ ಮಹಿಮಾ ಪುರ ನೆಲಮಂಗಲ ತಾಲ್ಲೂಕು.
3. ಶ್ರೀಕರಿತಿಮ್ಮ ರಾಯಸ್ವಾಮಿ ದೇವಾಲಯ ಟಿ. ಬೇಗೂರು ನೆಲಮಂಗಲ ತಾಲ್ಲೂಕು.
4. ಶ್ರೀಪ್ರಸನ್ನ ವೆಂಕಟರಮಣಸ್ವಾಮಿ ದೇವಾಲಯ ತೇರಿನಬೀದಿ ದೊಡ್ಡಬಳ್ಳಾಪುರ ಟೌನ್.
5. ಶ್ರೀಕತ್ತಿಮಾರಮ್ಮ ದೇವಾಲಯ ಕೋಡಗುರ್ಕಿ ದೇವನಹಳ್ಳಿ ತಾಲ್ಲೂಕು.

ಸಭೆಯಲ್ಲಿ ಎಸ್ಪಿ ಚಂದ್ರಕಾಂತ್ ಎಂ.ವಿ, ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ, ಧಾರ್ಮಿಕ ದತ್ತಿ ಇಲಾಖೆ ಸಹಾಯಕ ಆಯುಕ್ತರು ನಾಮದೇವ, ಪಿ.ದಿನೇಶ್, ದೊಡ್ಡಬಳ್ಳಾಪುರ ತಹಶೀಲ್ದಾರ್ ಮಲ್ಲಪ್ಪ, ಮಲ್ಲೇಶ್, ಶೀತಲ್, ಮುಜರಾಯಿ ತಹಶೀಲ್ದಾರ್ ಹೇಮಾವತಿ, ಉಪಸ್ಥಿತರಿದ್ದರು.

# 50 ವರ್ಷಕ್ಕಿಂತ ಕಡಿಮೆ ವಯಸ್ಸಿನವರಿಗೆ ಶೇ.50ರಷ್ಟು ಅವಕಾಶ

ಬೆಂಗಳೂರು



ಕಾಂಗ್ರೆಸ್ ಪಕ್ಷದ ಸಂಘಟನೆಯನ್ನು ತಳಮಟ್ಟದಿಂದ ಬಲಪಡಿಸುವ ಉದ್ದೇಶದಿಂದ ದೇಶಾದ್ಯಂತ ನಡೆಯುತ್ತಿರುವ 'ಸಂಘಟನ್ ಸೃಜನ್ ಅಭಿಯಾನ'ದಡಿ ಕರ್ನಾಟಕದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆಯನ್ನು ಆಗಸ್ಟ್ 24ರೊಳಗೆ ಪೂರ್ಣಗೊಳಿಸುವಂತೆ ಸೂಚಿಸಲಾಗಿದೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ತಿಳಿಸಿದ್ದಾರೆ.

ಇಂದಿರಾ ಗಾಂಧಿ ಭವನದಲ್ಲಿ ಶುಕ್ರವಾರ ನಡೆದ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹಾತ್ಮಾ ಗಾಂಧೀಜಿ ಅವರು ಕಾಂಗ್ರೆಸ್ ಅಧ್ಯಕ್ಷರಾಗಿ ಶತಮಾನೋತ್ಸವ ಪೂರೈಸಿದ ಹಿನ್ನೆಲೆಯಲ್ಲಿ ಬೆಳಗಾವಿಯಲ್ಲಿ ನಡೆದ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ ದೇಶಾದ್ಯಂತ ಸಂಘಟನಾ ಪುನರ್‌ರಚನೆಗೆ ನಿರ್ಧಾರ ಕೈಗೊಳ್ಳಲಾಗಿತ್ತು. ಬೂತ್ ಮಟ್ಟದಿಂದ ಪ್ರದೇಶ ಕಾಂಗ್ರೆಸ್ ಸಮಿತಿವರೆಗೆ ಪಕ್ಷವನ್ನು ಬಲಪಡಿಸುವ ಉದ್ದೇಶದಿಂದ ಈ ಅಭಿಯಾನ ಆರಂಭಿಸಲಾಗಿದೆ ಎಂದರು.

ದೇಶದ ಒಟ್ಟು 1,054 ಜಿಲ್ಲೆಗಳ ಪೈಕಿ ಈಗಾಗಲೇ 762 ಜಿಲ್ಲೆಗಳಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡಿದೆ. ಜಿಲ್ಲಾ ಅಧ್ಯಕ್ಷರ ನೇಮಕದ ಬಳಿಕ ಜಿಲ್ಲಾ ಕಾಂಗ್ರೆಸ್ ಸಮಿತಿಯ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಪದಾಧಿಕಾರಿಗಳು, ಮಂಡಲ ಸಮಿತಿಗಳು ಹಾಗೂ ಬೂತ್ ಸಮಿತಿಗಳನ್ನು ರಚಿಸಲಾಗುವುದು. ಕೇರಳ, ಅಸ್ಸಾಂ, ಪಶ್ಚಿಮ ಬಂಗಾಳ, ಉತ್ತರ ಪ್ರದೇಶ, ಕರ್ನಾಟಕ ಸೇರಿದಂತೆ ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಸಂಘಟನಾ ಪುನರ್‌ರಚನೆ ಪ್ರಕ್ರಿಯೆ ನಡೆಯುತ್ತಿದೆ ಎಂದು ತಿಳಿಸಿದರು.

ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷದ ಆಡಳಿತವಿರುವ 40 ಜಿಲ್ಲೆಗಳಿಗೆ ಹಿರಿಯ ನಾಯಕರು, ಸಂಸದರು, ಮಾಜಿ ಸಚಿವರು, ಶಾಸಕರು ಹಾಗೂ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸದಸ್ಯರನ್ನು ವೀಕ್ಷಕರನ್ನಾಗಿ ನೇಮಿಸಲಾಗಿದೆ. ಈ ವೀಕ್ಷಕರು ಜಿಲ್ಲೆಗಳಿಗೆ ತೆರಳಿ ಕನಿಷ್ಠ ಏಳು ದಿನಗಳ ಕಾಲ ಸ್ಥಳೀಯವಾಗಿ ವಾಸ್ತವ್ಯ ಹೂಡಿ, ಕಾರ್ಯಕರ್ತರು, ಸಂಘಟನೆಯ ಪ್ರಮುಖರು ಹಾಗೂ ಗಣ್ಯರೊಂದಿಗೆ ಚರ್ಚೆ ನಡೆಸಲಿದ್ದಾರೆ.

ಬಳಿಕ ಸ್ಥಳೀಯ ನಾಯಕತ್ವಕ್ಕೆ ಸೂಕ್ತ ಅಭ್ಯರ್ಥಿಗಳ ಹೆಸರನ್ನು ಶಿಫಾರಸು ಮಾಡಲಿದ್ದಾರೆ. ನಂತರ ಪ್ರದೇಶ ಕಾಂಗ್ರೆಸ್ ಸಮಿತಿ ನಾಯಕರು, ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸದಸ್ಯರು, ಮುಖ್ಯಮಂತ್ರಿ ಹಾಗೂ ಉಸ್ತುವಾರಿ ಕಾರ್ಯದರ್ಶಿಗಳೊಂದಿಗೆ ಸಮಾಲೋಚನೆ ನಡೆಸಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರನ್ನು ಆಯ್ಕೆ ಮಾಡಲಾಗುವುದು ಎಂದು ವೇಣುಗೋಪಾಲ್ ವಿವರಿಸಿದರು.

ಸಂಘಟನ್ ಸೃಜನ್ ಅಭಿಯಾನ ಅತ್ಯಂತ ಯಶಸ್ವಿಯಾಗಿ ನಡೆಯುತ್ತಿದೆ. ಜಿಲ್ಲಾ ಅಧ್ಯಕ್ಷರ ನೇಮಕದ ನಂತರ ಅವರ ಕಾರ್ಯವೈಖರಿ, ಸಂಘಟನಾ ಸಾಮರ್ಥ್ಯ ಮತ್ತು ಪಕ್ಷದ ಸಾಧನೆಯನ್ನು ನಿರಂತರವಾಗಿ ಪರಿಶೀಲಿಸಲಾಗುವುದು. ಅವರು ನೀಡಿರುವ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸುತ್ತಿದ್ದಾರೆಯೇ ಎಂಬುದನ್ನು ಆಧರಿಸಿ ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು ಎಂದರು.

ಪಕ್ಷದ ಸಂಘಟನೆಯಲ್ಲಿ ಯುವಕರಿಗೆ ಹೆಚ್ಚಿನ ಅವಕಾಶ ನೀಡುವುದು ಕಾಂಗ್ರೆಸ್‌ನ ಉದ್ದೇಶವಾಗಿದೆ. ಶೇ.50ರಷ್ಟು ಜಿಲ್ಲೆಗಳಲ್ಲಿ 50 ವರ್ಷಕ್ಕಿಂತ ಕಡಿಮೆ ವಯಸ್ಸಿನವರನ್ನು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರನ್ನಾಗಿ ನೇಮಿಸುವ ಗುರಿ ಹೊಂದಲಾಗಿದೆ. ಇದರ ಜೊತೆಗೆ ಸಾಮಾಜಿಕ ನ್ಯಾಯಕ್ಕೂ ಆದ್ಯತೆ ನೀಡಲಾಗುವುದು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಾಯಕರಿಗೂ ಸೂಕ್ತ ಪ್ರಾತಿನಿಧ್ಯ ಕಲ್ಪಿಸುವ ಉದ್ದೇಶವಿದೆ ಎಂದು ಹೇಳಿದರು.

ಪ್ರತಿ ಜಿಲ್ಲೆಯಿಂದ ಕನಿಷ್ಠ ಆರು ಅರ್ಹರ ಹೆಸರನ್ನು ಶಿಫಾರಸು ಮಾಡಬೇಕು. ನಂತರ ಚರ್ಚೆ ಮತ್ತು ಸಮಾಲೋಚನೆ ಮೂಲಕ ಸೂಕ್ತ ಅಭ್ಯರ್ಥಿಯನ್ನು ಆಯ್ಕೆ ಮಾಡಲಾಗುವುದು. ಅಂತಿಮವಾಗಿ ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ಈ ಪ್ರಕ್ರಿಯೆ ನಡೆಯಲಿದೆ. ಅಧ್ಯಕ್ಷರ ಆಯ್ಕೆಯಾದ ಬಳಿಕವೂ ಅವರ ಸಂಘಟನಾ ಕಾರ್ಯಕ್ಷಮತೆ ಮತ್ತು ಸಾಧನೆಯ ಮೇಲೆ ನಿರಂತರ ನಿಗಾ ಇರಿಸಲಾಗುವುದು ಎಂದು ಕೆ.ಸಿ. ವೇಣುಗೋಪಾಲ್ ತಿಳಿಸಿದರು.

ಚುನಾವಣೆ ಮಾತ್ರ ಕಾಂಗ್ರೆಸ್‌ನ ಉದ್ದೇಶವಲ್ಲ

2028 ಮತ್ತು 2029ರ ಚುನಾವಣೆಗಳನ್ನು ಗಮನದಲ್ಲಿಟ್ಟುಕೊಂಡೇ ಸಂಘಟನಾ ಪುನರ್‌ರಚನೆ ಮಾಡಲಾಗುತ್ತಿದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಚುನಾವಣೆ ಮಾತ್ರ ಕಾಂಗ್ರೆಸ್‌ನ ಉದ್ದೇಶವಲ್ಲ ಎಂದು ಸ್ಪಷ್ಟಪಡಿಸಿದರು. ದೇಶದ ಪರಿಸ್ಥಿತಿ ದಿನದಿಂದ ದಿನಕ್ಕೆ ಹದಗೆಡುತ್ತಿದೆ. ಇದರ ವಿರುದ್ಧ ಜನರ ಧ್ವನಿಯನ್ನು ಬಲಪಡಿಸಲು ಹಾಗೂ ಜನರನ್ನು ಸಂಘಟಿಸಲು ಕಾಂಗ್ರೆಸ್ ಮುಂದಾಗಿದೆ ಎಂದರು.

**ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಆಗ್ರಹ:**

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಕುರಿತು ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ವೇಣುಗೋಪಾಲ್, ವಿದ್ಯಾರ್ಥಿಗಳ ಪ್ರತಿಭಟನೆಯ ಸಂದರ್ಭದಲ್ಲಿ ದೆಹಲಿಯಲ್ಲಿ ಪೊಲೀಸರು ನಡೆದುಕೊಂಡ ರೀತಿಯನ್ನು ಖಂಡಿಸಿದರು. ದೇಶದ ಯುವಕರ ಭವಿಷ್ಯ ಅಪಾಯದಲ್ಲಿದ್ದು, ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಕುರಿತು ಸಂಸತ್ತಿನಲ್ಲಿ ಸಮರ್ಪಕ ಚರ್ಚೆ ನಡೆಸಲು ಕೇಂದ್ರ ಸರ್ಕಾರ ಸಿದ್ಧವಾಗಿಲ್ಲ ಎಂದು ಆರೋಪಿಸಿದರು.

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ವಿದ್ಯಾರ್ಥಿಗಳ ಮೇಲಿನ ಪೊಲೀಸ್ ದೌರ್ಜನ್ಯದ ಕುರಿತು ಉನ್ನತ ಮಟ್ಟದ ತನಿಖೆ ನಡೆಸಬೇಕು. ವಿದ್ಯಾರ್ಥಿಗಳ ವಿರುದ್ಧ ದಾಖಲಿಸಿರುವ ಪ್ರಕರಣಗಳನ್ನು ಹಿಂಪಡೆಯಬೇಕು. ಜೊತೆಗೆ ನೀಟ್ ಆಕಾಂಕ್ಷಿಗಳ ಸಾವಿನಿಂದ ಸಂಕಷ್ಟಕ್ಕೆ ಒಳಗಾದ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕು ಎಂಬುದು ಕಾಂಗ್ರೆಸ್‌ನ ಆಗ್ರಹವಾಗಿದೆ ಎಂದು ಹೇಳಿದರು.

# ವ್ಯಸನ ಮುಕ್ತ ದಿನಾಚರಣೆಗೆ ಅಗತ್ಯ ಸಿದ್ಧತೆ ಕೈಗೊಳ್ಳಲು ಡಿಸಿ ಸೂಚನೆ

ಬೆಂ.ಗ್ರಾ ಜಿಲ್ಲೆ

ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಅಂಗವಾಗಿ ಪ್ರತಿ ವರ್ಷ ಆ. 1 ರಂದು ಆಚರಿಸುವ ವ್ಯಸನ ಮುಕ್ತ ದಿನಾಚರಣೆಯನ್ನು ಜಿಲ್ಲಾ ಹಾಗೂ ತಾಲೂಕುಗಳಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಡಾ.ಕೆ.ಎನ್ ಅನುರಾಧ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಹಿನ್ನೆಲೆ ವ್ಯಸನಮುಕ್ತ ದಿನಾಚರಣೆಯ ಕುರಿತು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಹಾಂತ ಶಿವಯೋಗಿಗಳ ಜನ್ಮದಿನವನ್ನು ರಾಜ್ಯ ಸರ್ಕಾರವು ಪ್ರತಿ ವರ್ಷ ಆಗಸ್ಟ್ 1ರಂದು ವ್ಯಸನ ಮುಕ್ತ ದಿನವನ್ನಾಗಿ ಆಚರಣೆ ಮಾಡುತ್ತಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಡಳಿತ ಸಹಯೋಗದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಆಚರಣೆ ಮಾಡಬೇಕು. ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ್ ನೇತೃತ್ವದಲ್ಲಿ ಕಾರ್ಯಕ್ರಮ ಆಯೋಜಿಸಬೇಕು ಎಂದರು.

ಕಾರ್ಯಕ್ರಮಕ್ಕೆ ವೇದಿಕೆ ಸಿದ್ಧತೆ, ಉಪನ್ಯಾಸ, ಕುಡಿಯುವ ನೀರು, ಉಪಹಾರ, ಕಾಲೇಜು ಮತ್ತು ಹಾಸ್ಟೆಲ್ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಲು ಕ್ರಮ ವಹಿಸಿ ಎಂದರು.

ಸಭೆಯಲ್ಲಿ ಎಸ್ಪಿ ಚಂದ್ರಕಾಂತ್ ಎಂ.ವಿ, ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ, ಅಶೋಕ್ ಕುಮಾರ್ ಡಿ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಮೋಹನ್ , ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಪಶುವೈದ್ಯಾಧಿಕಾರಿ ನೇಮಕಾತಿಯನ್ನು ಸರ್ಕಾರ ತಡೆಹಿಡಿಯಲಿ: ಛಲವಾದಿ ನಾರಾಯಣಸ್ವಾಮಿ



ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗದ ಪಶುವೈದ್ಯಾಧಿಕಾರಿಗಳ ನೇಮಕಾತಿಯಲ್ಲಿ ಬೃಹತ್ ಅಕ್ರಮ ನಡೆದಿದ್ದು, ಕೂಡಲೇ ಸರ್ಕಾರ ಆಯ್ಕೆ ಪಟ್ಟಿಯನ್ನು ತಡೆಹಿಡಿದು ಮರು ಪರೀಕ್ಷೆ ಮಾಡಬೇಕು ಎಂದು ವಿಧಾನ ಪರಿಷತ್‌ನಲ್ಲಿನ ವಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಆಗ್ರಹಿಸಿದ್ದಾರೆ.

ವಿಧಾನ ಸೌಧದಲ್ಲಿನ ತಮ್ಮ ಕೊಠಡಿಯಲ್ಲಿ ಶುಕ್ರವಾರ ಮಾಧ್ಯಮ ಗಳೊಂದಿಗೆ ಮಾತನಾಡಿದ ಅವರು, ಸರ್ಕಾರದ ಅಧಿಸೂಚನೆಯನ್ನು ಉಲ್ಲಂಘಿಸಿ ಎಸ್‌ಸಿ ಮತ್ತು ಎಟ್‌ಟಿಗೆ ಮೀಸಲಾದ ಬ್ಯಾಕ್ ಲಾಗ್ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗಿದೆ. ಆಯ್ಕೆಯಾಗಲು 80 ಲಕ್ಷದ ಆರೋಪ ಕೇಳಿಬಂದಿದೆ. ಅಲ್ಲದೆ ಅಮಾನತು ಆಗಿರುವ ಅಧ್ಯಕ್ಷರು ಸ್ವಜನಪಕ್ಷಪಾತ ನಡೆಸಿರುವ ಆರೋಪಗಳಿವೆ. ಈ ಎಲ್ಲಾ ಹಿನ್ನೆಲೆಯಲ್ಲಿ ನೇಮಕಾತಿಯನ್ನು ತಡೆಹಿಡಿಯಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ಲೋಕಸೇವಾ ಆಯೋಗವು 2024 ರಲ್ಲಿ 400 ಹುದ್ದೆ ಭರ್ತಿಗೆ ಅಧಿಸೂಚನೆ ಹೊರಡಿಸಿತ್ತು. ಇದರಲ್ಲಿ 342 ಸಾಮಾನ್ಯ ಹಾಗೂ 58 ಬ್ಯಾಕ್ ಲಾಗ್ ಹುದ್ದೆಗಳಿದ್ದವು. 58 ಬ್ಯಾಕ್ ಲಾಗ್ ಹುದ್ದೆಗಳು ಪರಿಶಿಷ್ಟ ಜಾತಿ/ವರ್ಗಕ್ಕೆ ಮೀಸಲಿದ್ದವು. 342 ಹುದ್ದೆಗಳಿಗೆ ಪರೀಕ್ಷೆ ಮತ್ತು ಸಂದರ್ಶನ ಮಾಡಬಹುದು. ಆದರೆ ಬ್ಯಾಕ್ ಲಾಗ್ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ನಿಷೇಧಿಸಲಾಗಿದೆ ಎಂಬ 2025 ರ ಆದೇಶ ಉಲ್ಲಂಘಿಸಿ ಸ್ಪರ್ಧಾತ್ಮಕ ಪರೀಕ್ಷೆಗೆ ಎಸ್‌ಟಿ/ ಎಸ್‌ಸಿ ಅಭ್ಯರ್ಥಿಗಳನ್ನು ಒಳಪಡಿಸಿದ್ದಾರೆ ಎಂದು ದೂರಿದರು.

**80 ಲಕ್ಷ ಲಂಚಕ್ಕೆ ಬೇಡಿಕೆ:**

ಪಶುವೈದ್ಯಾಧಿಕಾರಿ ಹುದ್ದೆಗೆ 80 ಲಕ್ಷ ಲಂಚ ನಡೆದಿದೆ ಎಂಬ ಆರೋಪ ಕೇಳಿಬಂದಿವೆ. ಇದಕ್ಕೆ ಈವರೆಗೆ ಸರ್ಕಾರ ಉತ್ತರ ನೀಡಿಲ್ಲ. ಕಾನೂನುಬಾಹಿರವಾಗಿ ಬ್ಯಾಲ್‌ಲಾಗ್ ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಭರ್ತಿ ಮಾಡುವಂತಿಲ್ಲ. ಅದರೂ ಇವರಿಗೆ ಅಧಿಕಾರ ಕೊಟ್ಟವರು ಯಾರು ಎಂದು ಪ್ರಶ್ನಿಸಿದರು.

**ಅಧ್ಯಕ್ಷರಿಂದ ಸ್ವಜನಪಕ್ಷಪಾತ ಆರೋಪ:**

ಸರ್ಕಾರದ ಆದೇಶವನ್ನೇ ಧಿಕ್ಕರಿಸಿ ಕೆಪಿಎಸ್‌ಸಿ ನೇಮಕಾತಿ ನಡೆದಿರುವುದಲ್ಲದೆ ಸ್ವಜನ ಪಕ್ಷಪಾತವೂ ನಡೆದಿದೆ. ಕಾಲೇಜುಗಳಲ್ಲಿ ಗೋಲ್ಡ್ ಮೆಡಲ್ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳು ಆಯ್ಕೆಯಾಗಿಲ್ಲ. ಕಡಿಮೆ ಅಂಕ ಪಡೆದವರು, ಹಲವಾರು ಬಾರಿ ಫೇಲ್ ಆದವರು ಆಯ್ಕೆಯಾಗಿದ್ದಾರೆ. ಕೆಪಿಎಸ್‌ಸಿ ಅಧ್ಯಕ್ಷರ ನಿಕಟ ಸಂಬಂಧಿ ಹೆಬ್ಬಾಳದ ಕಾಮಧೇನು ವೆಟರ್ನರಿ ಕಾಲೇಜು ಬಾಯ್ಸ್ ಹಾಸ್ಟೆಲ್‌ನ ಸು ಗುರೇಶ್ ಜಾಕಾ ಆಯ್ಕೆಯಾಗಿದ್ದಾರೆ. ಹಣ ಕೊಟ್ಟವರನ್ನು ಆಯ್ಕೆ ಮಾಡಿದ್ದಾರೆ ಎಂಬುದು ಇದರಲ್ಲಿ ತಿಳಿಯುತ್ತದೆ ಎಂದು ಹೇಳಿದರು. ಎಸ್‌ಟಿ/ಎಸ್‌ಟಿ ಅಭ್ಯರ್ಥಿಗಳಿಗೆ ಯಾವುದೇ ಕಾರಣಕ್ಕೂ ಪರೀಕ್ಷೆ ಮಾಡುವಂತಿಲ್ಲ. ಅವರನ್ನು ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಬೇಕು ಎಂದು ಒತ್ತಾಯಿಸಿದರು.

**ಎಒ ಮತ್ತು ಎಎಒ ನೇಮಕಾತಿ ಅಕ್ರಮ:**

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಕೃಷಿ ಅಧಿಕಾರಿ (ಎಒ) ಮತ್ತು ಸಹಾಯಕ ಕೃಷಿ ಅಧಿಕಾರಿ (ಎಎಒ) ನೇಮಕಾತಿಯಲ್ಲೂ ನಿಯಮ ಉಲ್ಲಂಘಿಸಲಾಗಿದೆ. ಈ ಬಗ್ಗೆ ವಿದ್ಯಾರ್ಥಿಗಳು ಜಿಕೆವಿಕೆ ಆವರಣದಲ್ಲಿ ಪ್ರತಿಭಟನೆ ನಡೆಸುತ್ತಿದ್ದಾರೆ ಎಂದು ಹೇಳಿದರು.

# ಬಿಜೆಪಿಯದ್ದು ರಾಷ್ಟ್ರವಿರೋಧಿ ಚಟುವಟಿಕೆ: ರಮೇಶ್ ಬಾಬು

ಬೆಂಗಳೂರು



ಮಕ್ಕಳ ಭವಿಷ್ಯದೊಂದಿಗೆ ಚೆಲ್ಲಾಟ ವಾಡುತ್ತಿರುವ ಬಿಜೆಪಿ ಸರ್ಕಾರದ ನಡೆ ರಾಷ್ಟ್ರ ವಿರೋಧಿ ಚಟುವಟಿಕೆಯಾಗಿದೆ ಎಂದು ಕೆಪಿಸಿಸಿ ಮಾಧ್ಯಮ ಸಂವಹನ ವಿಭಾಗದ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ರಮೇಶ್ ಬಾಬು ಆರೋಪಿಸಿದ್ದಾರೆ.

ಈ ಕುರಿತು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳು ವಿದ್ಯಾರ್ಥಿಗಳ ಭವಿಷ್ಯವನ್ನು ಗಂಭೀರವಾಗಿ ಬಾಧಿಸುತ್ತಿವೆ. ಪರೀಕ್ಷಾ ವ್ಯವಸ್ಥೆಯಲ್ಲಿನ ಲೋಪಗಳಿಂದಾಗಿ ಲಕ್ಷಾಂತರ ವಿದ್ಯಾರ್ಥಿಗಳು ಸಂಕಷ್ಟಕ್ಕೆ ಸಿಲುಕುವಂತಾಗಿದೆ. ಮಕ್ಕಳ ಭವಿಷ್ಯದೊಂದಿಗೆ ಚೆಲ್ಲಾಟವಾಡುತ್ತಿರುವುದು ಬಿಜೆಪಿಯ ಕೇಂದ್ರ ಸರ್ಕಾರ ದೇಶಕ್ಕೆ ನೀಡಿರುವ ದೊಡ್ಡ ಕೊಡುಗೆಯಾಗಿದೆ ಎಂದು ವ್ಯಂಗ್ಯವಾಡಿದರು.

ಅಯೋಧ್ಯೆಯ ರಾಮಮಂದಿರದಲ್ಲಿ ಹುಂಡಿ ಕಳವು ಪ್ರಕರಣದ ಬಳಿಕ ದೇಶದ ದೇವಾಲಯಗಳ ಮುಂದೆ ಹುಂಡಿ ಕಳ್ಳರ ಬಗ್ಗೆ ಎಚ್ಚರಿಕೆ ಫಲಕಗಳನ್ನು ಹಾಕುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಟೀಕಿಸಿದ ಅವರು, ಇದೇ ರೀತಿಯಲ್ಲಿ ಕೇಂದ್ರ ಸರ್ಕಾರದ ಪರೀಕ್ಷಾ ವ್ಯವಸ್ಥೆಯ ಮೇಲೂ ಜನರಿಗೆ ಅನುಮಾನ ಮೂಡುವಂತಾಗಿದೆ ಎಂದು ಹೇಳಿದರು. ಕೇಂದ್ರ ಸರ್ಕಾರ ಸಿಗರೇಟ್ ಪ್ಯಾಕೆಟ್‌ಗಳ ಮೇಲೆ 'ಧೂಮಪಾನ ಆರೋಗ್ಯಕ್ಕೆ ಹಾನಿಕರ' ಎಂಬ ಎಚ್ಚರಿಕೆ ಸಂದೇಶವನ್ನು ಮುದ್ರಿಸುತ್ತದೆ. ಅದೇ ರೀತಿ, ಮುಂದಿನ ದಿನಗಳಲ್ಲಿ ಕೇಂದ್ರ ಬಿಜೆಪಿ ಸರ್ಕಾರ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳ ಪ್ರವೇಶ ಪತ್ರಗಳಲ್ಲೇ 'ಎಚ್ಚರಿಕೆ, ಪ್ರಶ್ನೆಪತ್ರಿಕೆ ಸೋರಿಕೆಯಾಗುವ ಸಾಧ್ಯತೆ ಇದೆ' ಎಂಬ ಸಂದೇಶವನ್ನು ಹಾಕುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ರಮೇಶ್ ಬಾಬು ವ್ಯಂಗ್ಯವಾಡಿದರು. ಪ್ರಶ್ನೆಪತ್ರಿಕೆ ಸೋರಿಕೆ ಸೇರಿದಂತೆ ಪರೀಕ್ಷಾ ಅಕ್ರಮಗಳಿಂದ ವಿದ್ಯಾರ್ಥಿಗಳಲ್ಲಿ ಉಂಟಾಗಿರುವ ಆತಂಕವನ್ನು ಕೇಂದ್ರ ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಪರೀಕ್ಷಾ ವ್ಯವಸ್ಥೆಯನ್ನು ಪಾರದರ್ಶಕಗೊಳಿಸಿ, ವಿದ್ಯಾರ್ಥಿಗಳ ಭವಿಷ್ಯಕ್ಕೆ ಭದ್ರತೆ ಒದಗಿಸಬೇಕು ಎಂದು ಅವರು ಆಗ್ರಹಿಸಿದರು.ಮಕ್ಕಳ ಭವಿಷ್ಯದೊಂದಿಗೆ ಚೆಲ್ಲಾಟವಾಡುತ್ತಿರುವ ಕೇಂದ್ರ ಬಿಜೆಪಿ ಸರ್ಕಾರದ ಇಂತಹ ರಾಷ್ಟ್ರವಿರೋಧಿ ನಡೆಯನ್ನು ಕರ್ನಾಟಕ ಪ್ರದೇಶ ಕಾಂಗ್ರೆಸ್ ಪಕ್ಷ ತೀವ್ರವಾಗಿ ಖಂಡಿಸುತ್ತದೆ ಎಂದು ರಮೇಶ್ ಬಾಬು ಆಕ್ರೋಶ ವ್ಯಕ್ತಪಡಿಸಿದರು.

# ಎಲ್-ನಿನೋ ಪರಿಸ್ಥಿತಿಯಲ್ಲಿ ತೋಟಗಾರಿಕಾ ಬೆಳೆಗಳಲ್ಲಿ ಕೈಗೊಳ್ಳಬೇಕಾದ ಮುನ್ನೆಚರಿಕೆ

ಕೋಲಾರ

ಕೋಲಾರ ಜಿಲ್ಲೆಯು ಆರು ತಾಲ್ಲೂಕುಗಳನ್ನು ಒಳಗೊಂಡು ಪೂರ್ವ ಒಣ ವಲಯಕ್ಕೆ ಸೇರಿರುತ್ತದೆ. ಪ್ರಮುಖವಾಗಿ ಜಿಲ್ಲೆಯಲ್ಲಿ ತೋಟಗಾರಿಕಾ ಬೆಳೆಗಳಲ್ಲಿ ಹಣ್ಣಿನ ಬೆಳೆಗಳಾದ ಮಾವು, ದ್ರಾಕ್ಷಿ, ಸೀಬೆ, ಬಾಳೆ ಮತ್ತು ದಾಳಿಂಬೆ ಹಾಗೂ ತರಕಾರಿ ಬೆಳೆಗಳಾದ ಟೊಮ್ಯಾಟೋ, ಬದನೆ, ಕಡ್ಡಿ ಬೀನ್ಸ್, ಎಲೆ ಮತ್ತು ಹೂ ಕೋಸು, ಕುಂಬಳ ಜಾತಿ ತರಕಾರಿಗಳು, ಅಲ್ಲದೇ ಹೂವಿನ ಬೆಳೆಗಳಾದ ಗುಲಾಬಿ, ಸೇವಂತಿಗೆ ಮತ್ತು ಸುಗಂಧರಾಜ ಮತ್ತು ತೋಟದ ಬೆಳೆಗಳಾದ ತೆಂಗು, ಅಡಿಕೆ ಬೆಳೆಗಳನ್ನು ಸಹ ಬೆಳೆಯಲಾಗುತ್ತಿದೆ.

ಬಹುವಾರ್ಷಿಕ ಬೆಳೆಗಳಿಗೆ ತೇವಾಂಶ ಸಂರಕ್ಷಣೆಯ ಕ್ರಮಗಳಾಗಿ ಬುಡದ ಸುತ್ತ ಪಾತಿಯಲ್ಲಿ ಸಾವಯವ ತ್ಯಾಜ್ಯಗಳಾದ ತೆಂಗಿನಗರಿ, ತೆಂಗಿನ ಮಟ್ಟೆ, ತೆಂಗಿನ ನಾರು ಹಾಗೂ ಇತರೆ ಬೆಳೆ ತ್ಯಾಜ್ಯಗಳನ್ನು ಹೊದಿಕೆಯಾಗಿ ಹಾಸುವುದು. ನೀರಿನ ಉಳಿತಾಯ ಮತ್ತು ಸಮರ್ಪಕ ಬಳಕೆಗಾಗಿ ಕಡ್ಡಾಯವಾಗಿ ಹನಿ ನೀರಾವರಿ ಪದ್ಧತಿಯನ್ನು ಅಳವಡಿಸಿಕೊಂಡುಬೆಳೆಗೆ ಅನುಗುಣವಾಗಿ ನೀರು ನೀಡುವುದು. ಗಿಡಗಳ ಎಲೆಗಳ ಮೂಲಕ ಭಾಷೀಕರಣ (Evaporation) ಕಡಿಮೆಗೊಳಿಸಲು ಎಲೆಗಳ ಮೇಲೆ Kaolin ಸಿಂಪರಣೆ (ಶೇ.5) ಮತ್ತು ಸೂರ್ಯನ ಕಿರಣಗಳಿಂದ ಸಂರಕ್ಷಿಸಲು ಸುಣ್ಣದ ಧೂಳೀಕರಣ ಅಥವಾ ಸಿಂಪರಣೆ ಮಾಡುವುದು. ಬರ ನಿರೋಧಕತೆಯನ್ನು ಹೆಚ್ಚಿಸಿಕೊಳ್ಳಲು ಎಲೆಗಳ ಮೇಲೆ ಪೊಟ್ಯಾಶಿಯಂ ಸಲ್ಫೇಟ್ (0.2%) ಸಿಂಪಡಿಸುವುದು. ಎಲೆಗಳ ಮೂಲಕ ಭಾಷಿಕರಣ ಕಡಿಮೆಗೊಳಿಸಲು ಶೇ. 30– 40 ರಷ್ಟು ರೆಂಬೆಗಳನ್ನು ಸವರುವುದರಿಂದರ (ಕಡಿಣಟಟಿಟರ)ಎಲೆಗಳ ಭಾಷೀಕರಣದ ವಿಸ್ತೀರ್ಣ ಕಡಿಮೆಗೊಳಿಸಲಾಗುವುದು. ತರಕಾರಿ ಬೆಳೆಗಳನ್ನು ನಾಟಿ ಮಾಡುವಾಗ ಕಡ್ಡಾಯವಾಗಿ ಹನಿ ನೀರಾವರಿ ಮತ್ತು ಪ್ಲಾಸ್ಟಿಕ್ ಹೊದಿಕೆ ಅಳವಡಿಸಿಕೊಳ್ಳುವುದರ ಜೊತೆಗೆ ಹೆಚ್ಚು ಸಾವಯವ ಅಂಶ ಭೂಮಿಗೆ ಸೇರಿಸುವುದರಿಂದ ತೇವಾಂಶದ ಸಂರಕ್ಷಣೆ ಮಾಡುವುದು.

ತರಕಾರಿ ನಾಟಿ ಮಾಡುವ ಸಮಯದಲ್ಲಿ ಪ್ಲಾಸ್ಟಿಕ್ ಹೊದಿಕೆ (Mulching) ಅಳವಡಿಸಿಕೊಂಡು ಸಸಿಗಳನ್ನು ನಾಟಿಮಾಡುವ ಸಮಯದಲ್ಲಿ ಸಸಿಗಳ ಬುಡಗಳು ಪಾಲಿಥಿನ್ ಹೊದಿಕೆಗಳ ಸಂಪರ್ಕಕ್ಕೆ ಬಾರದಂತೆ ಮಾಡಲು ನಾಟಿ ಮಾಡುವರಂಧ್ರಗಳಲ್ಲಿ ಪೇಪರ್‌ಕಪ್ಸ್ ಅಳವಡಿಸಿ ತರಕಾರಿ ಸಸಿಗಳನ್ನು ನಾಟಿ ಮಾಡುವುದು. ತರಕಾರಿ ಬೆಳೆಗಳನ್ನು ಬೆಳೆಯುವಾಗ ಕಡಿಮೆ ಖರ್ಚಿನಲ್ಲಿ ನಿರುಪಯುಕ್ತ ಬಟ್ಟೆ ಮತ್ತು ಇತರೆ ನೆರಳು ಪರದೆಗಳನ್ನು ಕಟ್ಟುವುದರ ಮೂಲಕ ಬೆಳೆಗಳನ್ನು ಬಿಸಿಲಿನ ತಾಪಮಾನದಿಂದ ರಕ್ಷಿಸಿಕೊಳ್ಳಬಹುದು.

ತರಕಾರಿ ಬೆಳೆಗಳಲ್ಲಿ ಹೂ ಉದುರುವಿಕೆಯನ್ನು ಕಡಿಮೆಗೊಳಿಸಲು 40ppm NAA (Planofix) ಸಿಂಪರಣೆಮಾಡುವುದು. ಬೆಳೆಗಳ ತಾಕುಗಳ ಸುತ್ತ ಬಿಸಿಗಾಳಿಯನ್ನು ನಿಯಂತ್ರಿಸಲು ಮೇವಿನ ಜೋಳವನ್ನು ಬೆಳೆಯುವುದು. ಹೊಸದಾಗಿ ನಾಟಿ ಮಾಡಿರುವಅಡಿಕೆ ಸಸಿಗಳ ಸಂರಕ್ಷಣೆಗೆ ನೈರುತ್ಯ ದಿಕ್ಕಿನ(South-west) ಬಿಸಿಲಿನ ಸಂರಕ್ಷಿಸಲು ನಿರುಪಯುಕ್ತ ಬಟ್ಟೆ ಮತ್ತುಇತರೆ ನೆರಳು ಪರದೆಗಳನ್ನು 'ವಿ' ಆಕಾರದಲ್ಲಿ ಕಟ್ಟುವುದು ಹಾಗೂ ಫಸಲು ನೀಡುವ ಅಡಿಕೆ ಮರದ ಬುಡಗಳಿಗೆ ಸುಣ್ಣದ ಲೇಪನ ಮಾಡುವುದು ಹಾಗೂ ನೈರುತ್ಯ ಭಾಗದಿಂದ ಬುಡಗಳನ್ನು ಅಡಿಕೆ ಪಟ್ಟೆಗಳನ್ನು ಕಟ್ಟಿ ಸಂರಕ್ಷಿಸುವುದು. ಪಾಲಿ ಮನೆಗಳಲ್ಲಿ ತಾಪಮಾನ ಮತ್ತು ಬಿಸಿಲಿನಿಂದ ಸಂರಕ್ಷಿಸಲು ಶೇ. 75 ರಷ್ಟು ನೆರಳು ಪರದೆಯನ್ನು ಅಳವಡಿಸಿಕೊಳ್ಳುವುದು ಮತ್ತು ಪಾಲಿಮನೆಯ ಮೇಲ್ಛಾವಣಿ ಮೇಲೆ ಗೋಣಿ ಚೀಲಗಳನ್ನು ಹೊದಿಸಿ ಆಗಿಂದಾಗ್ಗೆ ನೀರು ಸಿಂಪರಣೆ ಮಾಡಿ ವಾತಾವರಣ ತಂಪು ಮಾಡುವುದು. ಪಾಲಿ ಮನೆಯ ಮೇಲೇ ಬಿದ್ದ ನೀರನ್ನು ಕೃಷಿಹೊಂಡಗಳಲ್ಲಿ ಸಂಗ್ರಹಿಸುವುದು. ಪಾಲಿ ಮನೆಯಲ್ಲಿ ಉಷ್ಣತೆಯನ್ನು ಕಡಿಮೆ ಮಾಡಲು ಎಕ್ಸಾಸ್ಟ್ ಫ್ಯಾನ್‌ಗಳನ್ನು ಅಳವಡಿಸಿಕೊಂಡು ಬಿಸಿ ಗಾಳಿಯನ್ನು ಹೊರಹಾಕುವುದು.

ತರಕಾರಿ ಮತ್ತು ಹೂವುಗಳನ್ನು ಕಡ್ಡಾಯವಾಗಿ ಬೆಳಿಗ್ಗೆ ಅಥವಾ ಸಂಜೆ ಸಮಯದಲ್ಲಿ ಕಟಾವು ಮಾಡಿ ನೀರಿನಲ್ಲಿ ಅದ್ದುವುದು/ ಸಿಂಪಡಿಸುವುದು ಮತ್ತು ತಂಪಾದಜಾಗದಲ್ಲಿ ಶೇಖರಣೆ ಮಾಡುವುದು. ಅಂತರ್ಜಲ ಮಟ್ಟವನ್ನು ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಮಾವಿನ ತಾಕಿನಲ್ಲಿ ಮಳೆ ನೀರನ್ನು ಸಂಗ್ರಹಿಸಲು ಖಡಿಜಟಟಿಖ್ಸ ಚಿಟಿಜ ಛಣಟಿಛ ನಿರ್ಮಾಣ ಮಾಡುವುದು. ಕೃಷಿ ಹೊಂಡದಿಂದ ನೀರಿನ ಸಂರಕ್ಷಣೆ/ಮರುಪೂರಣ ಮಾಡುವುದರಿಂದ ಅಂತರ್ಜಲ ನಿರ್ವಹಣೆಯಲ್ಲಿ ಸುಸ್ಥಿರತೆ ಕಾಪಾಡಿಕೊಳ್ಳಬಹುದು. ಬೆಳೆಗಳಲ್ಲಿ ಕೀಟ/ ರೋಗ ಬಾಧೆಗಳ ಮುನ್ಸೂಚನೆಯನ್ನು ಪಡೆದು, ಕೀಟ ಹಾಗೂ ರೋಗಗಳ ನಿರ್ವಹಣೆಗೆ ಸ್ವಯಂ ಚಾಲಿತ ಹವಾಮಾನ ಘಟಕಗಳ ಮಾಹಿತಿಯನ್ನು ಬಳಸುವುದು. ಧೀರ್ಘಾವದಿ ಬೆಳೆಗಳನ್ನು ಬೆಳೆಯದೇ, ಕಡಿಮೆ ನೀರನ್ನು ಬಳಸಿ ಬೆಳೆಯಬಹುದಾದ ತೋಟಗಾರಿಕೆ ಬೆಳೆಗಳನ್ನು ಬೆಳೆಯುವುದು. ತೋಟದ ಮಧ್ಯಭಾಗದಲ್ಲಿ ವರ್ಷಕ್ಕೆ ಎರಡು ಬಾರಿ ಹಸಿರೆಲೆ ಗೊಬ್ಬರದ ಬೆಳೆಗಳು ಅಥವಾ ಹೊದಿಕೆ ಬೆಳೆಗಳನ್ನು ಬೆಳೆಯುವುದು ಉತ್ತಮ. ಇದರಿಂದ ಮಣ್ಣಿನ ಫಲವತ್ತತೆ ಹೆಚ್ಚಾಗುತ್ತದೆ. ಉದಾ: ಹುರುಳಿ, ಸೆಣಬು, ಡಯಾಂಚಾ, ಅಲಸಂದೆ ಮತ್ತು ಅವರೆ. ಕೊಳವೆ ಬಾವಿಗಳನ್ನು ಮರುಪೂರಣ ಮಾಡುವುದರಿಂದ ಅಂತರ್ಜಲ ನಿರ್ವಹಣೆಯಲ್ಲಿ ಸುಸ್ಥಿರತೆ ಕಾಪಾಡಿಕೊಳ್ಳಬಹುದೆಂದು ತೋಟಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

26/07/2026
# ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಮಹಿಳೆಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬೇಕು: ಭವ್ಯ ಮಹೇಶ್

ವಿಜಯಪುರ

ಮಹಿಳೆಯರು ತಾವು ಕರಗತ ಮಾಡಿಕೊಂಡಿರುವ ಕರಕುಶಲ ಕಲೆ, ಗೃಹಬಳಕೆ ವಸ್ತುಗಳು ಹಾಗೂ ವೈವಿಧ್ಯಮಯ ಅಡುಗೆ ಪದಾರ್ಥಗಳನ್ನು ತಯಾರಿಸಿದ ನಂತರ ಸೂಕ್ತ ಮಾರುಕಟ್ಟೆ ಸಿಗುತ್ತಿಲ್ಲ ಎಂದು ಚಿಂತಿಸಬೇಕಿಲ್ಲ. ಇಂತಹ ಮೇಳಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ತಮ್ಮ ಉತ್ಪನ್ನಗಳಿಗೆ ಉತ್ತಮ ಬೇಡಿಕೆ ಸೃಷ್ಟಿಸಿಕೊಂಡು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬೇಕು ಎಂದು ಪುರಸಭೆ ಅಧ್ಯಕ್ಷೆ ಭವ್ಯ ಮಹೇಶ್ ಕರೆ ನೀಡಿದರು.

ಪಟ್ಟಣದ ಶ್ರೀ ಸುಬ್ಬಮ್ಮ ಚನ್ನಪ್ಪ ಸಮುದಾಯ ಭವನದಲ್ಲಿ ಜೆ.ಪಿ. ಈವೆಂಟ್ಸ್ ವತಿಯಿಂದ ಮೂರು ದಿನಗಳ ಕಾಲ ಆಯೋಜಿಸಿರುವ 'ಆಷಾಢ ಶಾಪಿಂಗ್, ಆಹಾರ ಮೇಳ ಹಾಗೂ ಮಾವಿನ ಹಬ್ಬ' ವಿಶೇಷ ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯಾವುದೇ ಕೃತಕ ಬಣ್ಣ ಹಾಗೂ ರಾಸಾಯನಿಕಗಳನ್ನು ಬಳಸದೆ ತಯಾರಿಸಿದ ಶುದ್ಧ ಮನೆಮದ್ದು ತಿಂಡಿ–ತಿನಿಸುಗಳು, ಕರಕುಶಲ ಆಭರಣಗಳು, ಸೀರೆಗಳು,



ರೆಡಿಮೇಡ್ ಉಡುಪುಗಳು ಮತ್ತು ಮಕ್ಕಳ ಆಟಿಕೆಗಳು ಮಾರುಕಟ್ಟೆ ದರಕ್ಕಿಂತ ಕಡಿಮೆ ಬೆಲೆಯಲ್ಲಿ ಈ ಮೇಳದಲ್ಲಿ ದೊರೆಯಲಿವೆ.

ಸಾರ್ವಜನಿಕರು ಮೇಳಕ್ಕೆ ಭೇಟಿ ನೀಡಿ ಖರೀದಿಸುವುದರಿಂದ ಸ್ವಂತ ಉದ್ಯೋಗ ನೆಚ್ಚಿಕೊಂಡಿರುವ ಮಹಿಳೆಯರು ಹಾಗೂ ಸ್ತ್ರೀಶಕ್ತಿ ಸ್ವ–ಸಹಾಯ ಸಂಘಗಳ ಶ್ರಮಕ್ಕೆ ನಿಜವಾದ ಪ್ರೋತ್ಸಾಹ ನೀಡಿದಂತಾಗುತ್ತದೆ ಎಂದು ಅವರು ಮನವಿ ಮಾಡಿದರು.

ಮಾವಿನ ಹಬ್ಬ ವಿಶೇಷ: ಮೂರು ದಿನಗಳ ಮೇಳದಲ್ಲಿ ಮಾವಿನ ಹಬ್ಬದ ವಿಶೇಷ ಮಳಿಗೆಗಳಿದ್ದು, ವಿವಿಧ ತಳಿಯ ನೈಸರ್ಗಿಕವಾಗಿ ಹಣ್ಣಾದ ಮಾವಿನಹಣ್ಣುಗಳು ಹಾಗೂ ಮಾವಿನ ಉತ್ಪನ್ನಗಳು ಗ್ರಾಹಕರನ್ನು ಆಕರ್ಷಿಸುತ್ತಿವೆ. ಮೊದಲ ದಿನವೇ ನೂರಾರು ಸಾರ್ವಜನಿಕರು ಹಾಗೂ ಮಹಿಳೆಯರು ಮೇಳಕ್ಕೆ ಭೇಟಿ ನೀಡಿ ಖರೀದಿ ಮಾಡಿದರು.

ಶಿವಮೊಗ್ಗ, ಮಂಡ್ಯ, ಮೈಸೂರು, ಬೆಂಗಳೂರು ಸೇರಿದಂತೆ ವಿವಿಧೆಡೆಯಿಂದ ಆಗಮಿಸಿದ್ದ ಸುಮಾರು 60 ಕ್ಕೂ ಹೆಚ್ಚು ಮಂದಿ ಮಳಿಗೆಗಳನ್ನು ತೆರೆದಿದ್ದಾರೆ.

## ಮಾದಕ ವಸ್ತುಗಳ ವಿರೋಧಿ ಅಭಿಯಾನ

ಶಿಡ್ಲಘಟ್ಟ

ತಾಲೂಕು ಆಡಳಿತ, ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಆಶ್ರಯದಲ್ಲಿ ಶುಕ್ರವಾರ ನಗರದ ನೆಹರೂ ಕ್ರೀಡಾಂಗಣದಲ್ಲಿ ಮಾದಕ ವಸ್ತುಗಳ ವಿರೋ ದಿನಾಚರಣೆಯ ಅಭಿಯಾನ ನಡೆಯಲಿದೆ. ವಿದ್ಯಾರ್ಥಿ, ಯುವಜನರು ಹಾಗೂ ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ಬಳಕೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜನಜಾಗೃತಿ ಮೂಡಿಸಲು ತಾಲೂಕು ಆಡಳಿತ ಸನ್ನದ್ಧವಾಗಿದೆ.

ನೆಹರೂ ಕ್ರೀಡಾಂಗಣದಲ್ಲಿ ಅಭಿಯಾನಕ್ಕೆ ಪೂರ್ವ ಸಿದ್ಧತೆಗಳು ನಡೆಯುತ್ತಿದ್ದು ಸಿದ್ಧತೆಗಳನ್ನು ಪರಿಶೀಲಿಸಿದ ಸರ್ಕಲ್ ಇನ್ಸ್‌ಪೆಕ್ಟರ್ ಆನಂದ್ ಕುಮಾರ್, ನಗರದ ನೆಹರೂ ಕ್ರೀಡಾಂಗಣದಲ್ಲಿ ಮಾದಕ ವಸ್ತುಗಳ ವಿರೋಧಿ ಅಭಿಯಾನವನ್ನು ಹಮ್ಮಿಕೊಂಡಿದ್ದೇವೆ. ಶಾಸಕ ಬಿ.ಎನ್.ರವಿಕುಮಾರ್, ಎಸ್ಪಿ ಕುಶಲ್ ಚೌಕ್ಸೆ ಸೇರಿದಂತೆ ಇತರೆ ಪ್ರಮುಖರು ಭಾಗವಹಿಸಲಿದ್ದಾರೆ ಎಂದರು.

ವಾಲೀಬಾಲ್, ಕ್ರಿಕೇಟ್ ಪಂದ್ಯಾವಳಿಗಳನ್ನು ಹಮ್ಮಿಕೊಂಡಿದ್ದು ಪೊಲೀಸರು, ಪತ್ರಕರ್ತರು ಹಾಗೂ ಸಾರ್ವಜನಿಕರ ಆಟಗಾರರ ತಂಡಗಳು ಕ್ರೀಡಾಕೂಟದಲ್ಲಿ ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ಡ್ರಗ್ಸ್ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈ ಜೋಡಿಸಬೇಕೆಂದು ಮನವಿ ಮಾಡಿದರು.

## ಪೊಲೀಸ್ ಕಾನ್‌ಸ್ಟೇಬಲ್ ಪರೀಕ್ಷೆಗೆ ಪೂರ್ವ ಸಿದ್ಧತೆ

ದೊಡ್ಡಬಳ್ಳಾಪುರ

ಆ. 02 ರಂದು ನಡೆಯಲಿರುವ ಕರ್ನಾಟಕ ಪೊಲೀಸ್ ಕಾನ್‌ಸ್ಟೇಬಲ್ ಪರೀಕ್ಷೆಗೆ ಯಾವುದೇ ರೀತಿಯ ತೊಂದರೆ, ಅಡಚಣೆ ಉಂಟಾಗದಂತೆ ವ್ಯವಸ್ಥಿತ ಸಿದ್ಧತೆ ಕೈಗೊಳ್ಳಲು ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಡಳಿತ ಭವನದ ನ್ಯಾಯಾಲಯ ಸಭಾಂಗಣದಲ್ಲಿ ನಡೆದ ಪೊಲೀಸ್ ಕಾನ್‌ಸ್ಟೇಬಲ್ ಪರೀಕ್ಷೆಯ ಪೂರ್ವ ಸಿದ್ಧತೆ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಆ.2 ರಂದು ನಡೆಯಲಿರುವ ಪೊಲೀಸ್ ಕಾನ್‌ಸ್ಟೇಬಲ್ ಹುದ್ದೆಗಳ ನೇಮಕಾತಿ ಪರೀಕ್ಷೆಗೆ ಜಿಲ್ಲೆಯಲ್ಲಿ 07 ಪರಿಕ್ಷಾ ಕೇಂದ್ರಗಳಲ್ಲಿ 3463 ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ.

ಜಿಲ್ಲೆಯಲ್ಲಿ ಎಲ್ಲಾ ಪರೀಕ್ಷಾ ಕೇಂದ್ರಗಳ ಕೊಠಡಿಗಳಲ್ಲಿ ಪಾರದರ್ಶಕ ಹಾಗೂ ಸುವ್ಯವಸ್ಥಿತವಾಗಿ ಪರೀಕ್ಷೆ ನಡೆಸುವ ನಿಟ್ಟಿನಲ್ಲಿ ಸಿಸಿ ಕ್ಯಾಮರಾ ಕಣ್ಗಾವಲು ಕಡ್ಡಾಯವಾಗಿದ್ದು, ಅವುಗಳು ಸುಸ್ಥಿತಿಯಲ್ಲಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಡಿಸಿ ಸೂಚಿಸಿದರು.

ಪರೀಕ್ಷಾ ಕೇಂದ್ರಗಳು ಹಾಗೂ ಅಭ್ಯರ್ಥಿಗಳ ಸಂಖ್ಯೆ:

*ಕೊಂಗಾಡಿಯಪ್ಪ ಪದವಿ ಪೂರ್ವ ಕಾಲೇಜು(ಬಿಬಿ0009), ವಿವೇಕಾನಂದ ರಸ್ತೆ, ದೊಡ್ಡಬಳ್ಳಾಪುರ, ಕೇಂದ್ರ ಸಂಖ್ಯೆ: 101, ಅಭ್ಯರ್ಥಿಗಳ ಸಂಖ್ಯೆ: 751.

* ಸರ್ಕಾರಿ ಪದವಿ ಪೂರ್ವ ಕಾಲೇಜು(ಬಿಬಿ0010), ಗಂಗಾಧರಪುರ, ಮಾದಗೊಂಡನಹಳ್ಳಿ ರಸ್ತೆ, ದೊಡ್ಡಬಳ್ಳಾಪುರ ಕೇಂದ್ರ ಸಂಕೇತ: 102, ಅಭ್ಯರ್ಥಿಗಳ ಸಂಖ್ಯೆ: 432.

* ಸರ್ಕಾರಿ ಪದವಿ ಪೂರ್ವ ಕಾಲೇಜು(ಪ್ರೌಢಶಾಲೆ ವಿಭಾಗ) (ಃಃ0047), ಹೊಸ ಬಸ್ ನಿಲ್ದಾಣ(ಕೆಎಸ್‌ಆರ್‌ಟಿಸಿ), ದೊಡ್ಡಬಳ್ಳಾಪುರ ಕೇಂದ್ರ ಸಂಕೇತ: 103, ಅಭ್ಯರ್ಥಿಗಳ ಸಂಖ್ಯೆ: 504.

* ದೇವರಾಜ್ ಅರಸು ಪದವಿ ಪೂರ್ವ ಕಾಲೇಜು(ಬಿಬಿ0088), ಕೊಡಿಗೆಹಳ್ಳಿ, ದೊಡ್ಡಬಳ್ಳಾಪುರ, ಕೇಂದ್ರ ಸಂಕೇತ: 104, ಅಭ್ಯರ್ಥಿಗಳ ಸಂಖ್ಯೆ: 600.

* ವಿದ್ಯಾನಿಧಿ ಸ್ವತಂತ್ರ ಪದವಿ ಪೂರ್ವ ಕಾಲೇಜು(ಬಿಬಿ0162), ಗಂಗಾಧರಪುರ ದೊಡ್ಡಬಳ್ಳಾಪುರ, ಕೇಂದ್ರ ಸಂಕೇತ: 105, ಅಭ್ಯರ್ಥಿಗಳ ಸಂಖ್ಯೆ: 312.

* ವಾಣಿ ಪದವಿ ಪೂರ್ವ ಕಾಲೇಜು (ಬಿಬಿ0209) ಪಾಲನಜೋಗಿಹಳ್ಳಿ, ದೊಡ್ಡಬಳ್ಳಾಪುರ, ಕೇಂದ್ರ ಸಂಕೇತ: 106, ಅಭ್ಯರ್ಥಿಗಳ ಸಂಖ್ಯೆ: 384.

* ಸರ್ಕಾರಿ ಪ್ರಥಮ ದರ್ಜೆ ಕಾಲೇಜು, (ಬಿಬಿ3001), ಮಾದಗೊಂಡನಹಳ್ಳಿ, ಬಸವ ಭವನ ರಸ್ತೆ, ದೊಡ್ಡಬಳ್ಳಾಪುರ, ಕೇಂದ್ರ ಸಂಕೇತ: 107, ಅಭ್ಯರ್ಥಿಗಳ ಸಂಖ್ಯೆ: 480.

ಈ ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ವಿ ಚಂದ್ರಕಾಂತ, ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಮೋಹನ್‌ಕುಮಾರ್ ಸೇರಿದಂತೆ ಹೊಸಕೋಟೆ, ದೊಡ್ಡಬಳ್ಳಾಪುರ ಹಾಗೂ ನೆಲಮಂಗಲ ತಾಲ್ಲೂಕು ತಹಶೀಲ್ದಾರ್‌ರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಪರೀಕ್ಷಾ ಕೇಂದ್ರಗಳ ಪ್ರಾಂಶುಪಾಲರು

## ಹೈಟೆಕ್ ಹಾರ್ವೆಸ್ಟರ್ ಹಬ್‌ಗಳಿಗೆ ಆಹ್ವಾನ

ಕೋಲಾರ

2026–27ನೇ ಸಾಲಿನ ಕೃಷಿ ಯಂತ್ರೋಪಕರಣಗಳನ್ನು ರೈತರಿಗೆ ಬಾಡಿಗೆ ಆಧಾರದಲ್ಲಿ ಒದಗಿಸುವಂತೆ ಹೈಟೆಕ್ ಹಾರ್ವೆಸ್ಟರ್ ಹಬ್‌ಅನ್ನು ಸ್ಥಾಪಿಸಲು ಹೈಟೆಕ್ ಹಾರ್ವೆಸ್ಟರ್ ಹಬ್ ಯೋಜನೆಯಡಿ ಸಾಮಾನ್ಯ ವರ್ಗದ ವೈಯಕ್ತಿಕ ಫಲಾನುಭವಿಗಳಿಗೆ ಕಂಬೈನ್ ಹಾರ್ವೆಸ್ಟರ್ ಹಬ್ಸ್ಥಾಪಿಸಲು ಅವಕಾಶವಿರುತ್ತದೆ.

ಹೈಟೆಕ್ ಹಾರ್ವೆಸ್ಟರ್ ಹಬ್ ಯೋಜನೆಯಡಿ ಕಡ್ಡಾಯವಾಗಿ ಕಂಬೈನ್ಡ್ ಹಾರ್ವೆಸ್ಟರ್, ಟ್ರಾಕ್ಟರ್ ಚಾಲಿತ ಬೇಲರ್ ಕಡ್ಡಾಯವಾಗಿದ್ದು, ಇತರೆ ಕೃಷಿ ಯಂತ್ರೋಪಕರಣಗಳನ್ನು ಹಬ್‌ನಲ್ಲಿ ಪಡೆಯಲು ಅವಕಾಶವಿರುತ್ತದೆ. ರೈತರು ಹೈಟೆಕ್ ಹಾರ್ವೆಸ್ಟರ್ ಹಬ್‌ಗಳಿಗೆ ಅರ್ಜಿಯನ್ನು ಸಂಬಂಧಿಸಿದ ದಾಖಲಾತಿಗಳಾದ ಪಹಣಿ, ಜಾತಿ ಪ್ರಮಾಣ ಪತ್ರ, ಗುರುತಿನ ಪತ್ರ, ಬ್ಯಾಂಕ್ ಖಾತೆ ಸಂಖ್ಯೆ ನಿಗಧಿತ ಮೊತ್ತದ ಛಾಪಾ ಕಾಗದದ ಮೇಲೆ ಹಬ್ ಕಂಬೈನ್ಡ್‌ಅನ್ನು ಪರಭಾರೆ ಮಾಡುವುದಿಲ್ಲವೆಂದು ಮುಚ್ಚಳಿಕೆ ಪತ್ರ ಇತ್ಯಾದಿಗಳನ್ನು ಆಯಾ ಹೋಬಳಿ ರೈತ ಸಂಪರ್ಕ ಕೇಂದ್ರ/ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಸಲ್ಲಿಸುವುದು.

ವೈಯಕ್ತಿಕ ಫಲಾನುಭವಿಗಳಿಗೆ ಶೇ.50ರ ಸಹಾಯಧನದಲ್ಲಿ ಗರಿಷ್ಠ ರೂ.40.0 ಲಕ್ಷಗಳ ಸಹಾಯಧನವನ್ನು Credit Linked Back Ended Subsidy ಮುಖಾಂತರ ಪಡೆಯಲು ಅವಕಾಶವಿರುತ್ತದೆ ಹಾಗೂ ಕೃಷಿ ಮೂಲಭೂತ ಸೌಕರ್ಯನಿಧಿ– ಂಖಈ ಯೋಜನೆಯಡಿ ಸಾಲದ ನೆರವನ್ನು ಪಡೆಯಲು ಸಹ ಅವಕಾಶವಿರುತ್ತದೆ. ಆಸಕ್ತ ರೈತರು ಹೆಚ್ಚಿನ ಮಾಹಿತಿಗಾಗಿ ಕೃಷಿ ಇಲಾಖೆಯ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರಕಛೇರಿ /ಹೋಬಳಿ ಮಟ್ಟದ ರೈತ ಸಂಪರ್ಕ ಕೇಂದ್ರಗಳಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದೆಂದು ಕೃಷಿ ನಿರ್ದೇಶಕಿ ಎಂ.ಎನ್. ಮಂಜುಳ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 'ಶರಣ ಸಂಸ್ಕೃತಿಯನ್ನು ನಾಡಿಗೆ ಪರಿಚಯಿಸಿ'

ತಿಪಟೂರು

ಶರಣ ಸಂಸ್ಕೃತಿಯನ್ನು ನಾಡಿಗೇ ಪರಿಚಯಿಸಿ, ಸರಳ ಕನ್ನಡ ನುಡಿಯಲ್ಲಿ ವಚನಗಳನ್ನು ರಚಿಸಿ ನಡೆ, ನುಡಿಗಳೆರಡರಲ್ಲೂ ಸಮಾಜಕ್ಕೆ ಮಾದರಿಯಾಗಿ ಬದುಕಿ, ಬಾಳಿದವರು ಶರಣರು. ತಾಲೂಕು ಶರಣ ಸಾಹಿತ್ಯ ಪರಿಷತ್ತು ದತ್ತಿ ಉಪನ್ಯಾಸಗಳು, ವಚನಗಾಯನ ಮುಂತಾದ ಚಟುವಟಿಕೆಗಳನ್ನು ತಾಲೂಕಿನಾದ್ಯಂತ ಹಮ್ಮಿಕೊಳ್ಳುವುದರ ಮೂಲಕ ಶರಣ ಸಂಸ್ಕೃತಿಯ ಪ್ರಸಾರವನ್ನು ಯಶಸ್ವಿಯಾಗಿ ಮಾಡುತ್ತಿದೆ ಎಂದು ಎಸ್.ವಿ.ಪಿ. ಕಾಲೇಜಿನ ನಿವೃತ್ತ ಪ್ರಾಂಶುಪಾಲ ಕೆ.ಎನ್.ರೇಣುಕಯ್ಯನವರು ಮೆಚ್ಚುಗೆ ವ್ಯಕ್ತ ಪಡಿಸಿದರು.

ನಗರದ ಎಸ್.ವಿ.ಪಿ.ಕಾಲೇಜಿನ ಸಭಾಂಗಣದಲ್ಲಿ ತಾಲೂಕು ಶರಣ ಸಾಹಿತ್ಯ ಪರಿಷತ್ ವತಿಯಿಂದ ಹಮ್ಮಿಕೊಂಡಿದ್ದ ವಿದ್ಯಾರ್ಥಿ ಸಂಘಗಳ ಉದ್ಘಾಟನೆ, ದತ್ತಿ ಉಪನ್ಯಾಸ ಹಾಗೂ ಶರಣ ಧರ್ಮ ಚಿಂತನಾ ಗೋಷ್ಠಿ ಕಾರ್ಯಕ್ರಮದಲ್ಲಿ ಭಾಗವಹಿಸಿ



ಮಾತನಾಡಿದರು.

ಈ ವೇಳೆ ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಪಿ.ಆರ್.ಗುರುಸ್ವಾಮಿ, ಬಿಇಓ ತಾರಾಮಣಿ ಮಾತನಾಡಿ, ನಗರದಲ್ಲಿ ಎಸ್.ವಿ.ಪಿ ಶಿಕ್ಷಣ ಸಂಸ್ಥೆ ಪ್ರತಿಷ್ಠಿತ ಸಂಸ್ಥೆಯಾಗಿದ್ದು, ಈ ವರ್ಷ ಎಸ್.ಎಸ್. ಎಲ್.ಸಿ. ಯಲ್ಲಿ ಶೇಕಡಾ ತೊಂಬತ್ತೊಂಬತ್ತರಷ್ಟು ಫಲಿತಾಂಶ ಪಡೆಯುವ ಮೂಲಕ ಉತ್ತಮ ಸಾಧನೆ ಮಾಡಿದೆ. ಸಂಸ್ಥಾಪಕರಾದ ಎಸ್. ಕೆ.ರಾಜಶೇಖರಯ್ಯನವರ ಮಾರ್ಗ ದರ್ಶನ, ಬೋಧಕ ಸಿಬ್ಬಂದಿ, ವಿದ್ಯಾರ್ಥಿ, ಪೋಷಕರ ಪರಿಶ್ರಮವೇ ಕಾರಣ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪರಿಷತ್‌ನ ಗೌರವಾಧ್ಯಕ್ಷ ಜಗದೀಶ್, ನಿವೃತ್ತ ಪ್ರಾಂಶುಪಾಲ ಶಿವಗಂಗಪ್ಪ, ಕಾತ್ಯಾಯಿನಿ, ಮಂಜಪ್ಪ, ಸೋಮಶೇಖರ್, ಜುಂಜಪ್ಪ ಹಾಗೂ ವಿಜಯಕು ಮಾರಿ ಸೇರಿದಂತೆ ಪರಿಷತ್‌ನ ಪದಾಧಿಕಾರಿಗಳು, ಮುಖಂಡರು, ಕಾಲೇಜಿನ ಆಡಳಿತ ಮಂಡಳಿ, ಬೋಧಕ ವೃಂದ, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

ಅತ್ಯುನ್ನತ ಶ್ರೇಣಿಯಲ್ಲಿ ಪಾಸಾದ ವಿದ್ಯಾರ್ಥಿಗಳಿಗೆ, ವಚನ ಗಾಯಕರಿಗೆ ಸನ್ಮಾನಿಸಿ, ಗೌರವಿಸಲಾಯಿತು.

## ಪರಿಶೀಲನಾ ಸಮೀಕ್ಷೆಗೆ ಸಾರ್ವಜನಿಕರು ಸಹಕರಿಸುವಂತೆ ಮನವಿ

ಶಿಡ್ಲಘಟ್ಟ

ರಾಜ್ಯ ಸರ್ಕಾರದ ಗೃಹಜ್ಯೋತಿ ಯೋಜನೆಯಡಿ ಅನರ್ಹ ಫಲಾನುಭವಿಗಳನ್ನು ಗುರುತಿಸಿ ಸರ್ಕಾರದ ಅನುದಾನದ ದುರುಪಯೋಗವನ್ನು ತಡೆಯುವ ನಿಟ್ಟಿನಲ್ಲಿ ಪರಿಶೀಲನಾ ಕಾರ್ಯವನ್ನು ಕಟ್ಟುನಿಟ್ಟಾಗಿ ನಡೆಸಬೇಕು ಎಂದು ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಎಚ್.ಎಂ. ಮುನಿಯಪ್ಪ ಅಧಿಕಾರಿಗಳಿಗೆ ಸೂಚಿಸಿದರು.

ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಎಚ್.ಎಂ. ಮುನಿಯಪ್ಪ ಅವರ ಅಧ್ಯಕ್ಷತೆಯಲ್ಲಿ ಶುಕ್ರವಾರ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಗೃಹಜ್ಯೋತಿ ಫಲಾನುಭವಿಗಳ ಪರಿಶೀಲನಾ ಅರ್ಜಿ ವಿತರಣೆ ಹಾಗೂ ಸಮೀಕ್ಷೆ ಕುರಿತ ಸಭೆಯಲ್ಲಿ ಅವರು ಮಾತನಾಡಿದರು.

ಗೃಹಜ್ಯೋತಿ ಯೋಜನೆಯ ಫಲಾನುಭವಿಗಳ ಮನೆಮನೆಗೆ ತೆರಳಿ ಪರಿಶೀಲನೆ ನಡೆಸುವ



ಸಂದರ್ಭದಲ್ಲಿ ಸಾರ್ವಜನಿಕರು ಅಗತ್ಯ ದಾಖಲೆಗಳನ್ನು ಒದಗಿಸಿ ಸಹಕರಿಸಬೇಕು. ಪರಿಶೀಲನೆಗೆ ಬರುವ ಸಿಬ್ಬಂದಿಗೆ ಆಧಾರ್ ಕಾರ್ಡ್, ಪಡಿತರ ಚೀಟಿ ರೇಷನ್ ಕಾರ್ಡ್, ಇತ್ತೀಚಿನ ವಿದ್ಯುತ್ ಬಿಲ್ (ಆರ್.ಆರ್. ಸಂಖ್ಯೆ), ಮತದಾರರ ಗುರುತಿನ ಚೀಟಿ ಹಾಗೂ ಅಗತ್ಯವಿದ್ದಲ್ಲಿ ಬಾಡಿಗೆ ಒಪ್ಪಂದ ಪತ್ರ ಸೇರಿದಂತೆ ಸಂಬಂಧಿತ ದಾಖಲೆಗಳನ್ನು ನೀಡುವಂತೆ ಅವರು ಮನವಿ ಮಾಡಿದರು.ಗೃಹಜ್ಯೋತಿ ಸಮೀಕ್ಷೆ ಕುರಿತು ಫಲಾನುಭವಿಗಳು ಯಾವುದೇ ಗೊಂದಲಕ್ಕೆ ಒಳಗಾಗಬಾರದು. ಸಮೀಕ್ಷೆಗೆ ಸಂಬಂಧಿಸಿದಂತೆ ಯಾವುದೇ ಅನುಮಾನ ಅಥವಾ ಸಮಸ್ಯೆಗಳಿದ್ದರೆ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಸದಸ್ಯರು ಅಥವಾ ತಮ್ಮನ್ನು ನೇರವಾಗಿ ಸಂಪರ್ಕಿಸಬಹುದು ಎಂದು ತಿಳಿಸಿದರು.

ಸಭೆಯಲ್ಲಿ ತಾಲ್ಲೂಕು ಯೋಜನಾಧಿಕಾರಿ ಅನಿಲ್ ಕುಮಾರ್, ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಸದಸ್ಯರು, ಬೆಸ್ಕಾಂ ಅಧಿಕಾರಿಗಳು, ತಾ.ಪಂ ಸಿಬ್ಬಂದಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

## ಸೊಸೈಟಿ ಚುನಾವಣೆಗೆ ಎನ್‌ಡಿಎ ಅಭ್ಯರ್ಥಿಗಳ ನಾಮಪತ್ರ ಸಲ್ಲಿಕೆ

ದೊಡ್ಡಬಳ್ಳಾಪುರ

ತೂಬಗೆರೆ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘ ನಿಯಮಿತ (ವಿಎಸ್‌ಎಸ್‌ಎನ್) ನಿರ್ದೇಶಕರ ಚುನಾವಣೆಗೆ ಬಿಜೆಪಿ–ಜೆಡಿಎಸ್ (ಎನ್‌ಡಿಎ) ಮೈತ್ರಿ ಅಭ್ಯರ್ಥಿಗಳು ಶುಕ್ರವಾರ ನಾಮಪತ್ರ ಸಲ್ಲಿಸಿದರು.

ಇದಕ್ಕೂ ಮುನ್ನ ಅಭ್ಯರ್ಥಿಗಳು ತೂಬಗೆರೆ ಇತಿಹಾಸ ಪ್ರಸಿದ್ಧ ಶ್ರೀಲಕ್ಷ್ಮೀ ವೆಂಕಟರಮಣ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ದೇವರ ಆಶೀರ್ವಾದ ಪಡೆದರು.

ಬಳಿಕ ಮಿತ್ರಪಕ್ಷಗಳ ಮುಖಂಡರು, ಕಾರ್ಯಕರ್ತರು ಹಾಗೂ ಬೆಂಬಲಿಗರ ಸಮ್ಮುಖದಲ್ಲಿ ಮೆರವಣಿಗೆಯೊಂದಿಗೆ ತೆರಳಿ ಚುನಾವಣಾಧಿಕಾರಿಗಳಿಗೆ ನಾಮಪತ್ರ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡರು, ಸಹಕಾರ ಸಂಘವು ರೈತರ ಅಭಿವೃದ್ಧಿಗೆ ಪ್ರಮುಖ ವೇದಿಕೆಯಾಗಿದ್ದು, ಪಾರದರ್ಶಕ ಆಡಳಿತ, ರೈತಪರ



ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಹಾಗೂ ಸಹಕಾರ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಎನ್‌ಡಿಎ ಅಭ್ಯರ್ಥಿಗಳನ್ನು ಬೆಂಬಲಿಸುವಂತೆ ಮತದಾರರಲ್ಲಿ ಮನವಿ ಮಾಡಿದರು. 'ಸಹಕಾರ ಸಂಘದ ಅಭಿವೃದ್ಧಿ, ರೈತರ ಹಿತಾಸಕ್ತಿ ಮತ್ತು ಉತ್ತಮ ಆಡಳಿತದ ಸಂಕಲ್ಪದೊಂದಿಗೆ ಚುನಾವಣೆಯಲ್ಲಿ ಸ್ಪರ್ಧಿಸುತ್ತಿರುವ ಅಭ್ಯರ್ಥಿಗಳಿಗೆ ಮತದಾರರು ಬೆಂಬಲ ನೀಡುವ ವಿಶ್ವಾಸವಿದೆ' ಎಂದು ಅವರು ಹೇಳಿದರು. ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳ ಮುಖಂಡರು, ಕಾರ್ಯಕರ್ತರು, ಎನ್‌ಡಿಎ

## 'ವಿಬಿಜಿ ರಾಮ್ ಜಿ ಯೋಜನೆ ಲಾಭ ಪಡೆದುಕೊಳ್ಳಿ'

ತುಮಕೂರು

ತಾಲ್ಲೂಕಿನ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಬಿ.ವಿ. ಅಶ್ವಿಜ ದಿಢೀರ್ ಭೇಟಿ ನೀಡಿ, ವಿಬಿ–ಜಿ ರಾಮ್ ಜಿ ಯೋಜನೆಯಡಿ ಪ್ರಗತಿಯಲ್ಲಿರುವ ಕಾಮಗಾರಿಯನ್ನು ಪರಿಶೀಲಿಸಿದರು.

ತಾಲ್ಲೂಕಿನ ದೊಡ್ಡಸಾಗ್ಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಭಕ್ತರಹಳ್ಳಿ ಗ್ರಾಮದ ರಾಮಯ್ಯ ಅವರ ಜಮೀನಿನಿಂದ ವೀರ ಚೌಡಪ್ಪನ ಜಮೀನಿನವರೆಗೆ ಕಾಲುವೆ ಅಭಿವೃದ್ಧಿ ಕಾಮಗಾರಿಯನ್ನು ವೀಕ್ಷಿಸಿದ ಅವರು, ವಿಬಿ–ಜಿ ರಾಮ್ ಜಿ ಯೋಜನೆಯಡಿ ಒಂದು ಆರ್ಥಿಕ ವರ್ಷದಲ್ಲಿ ಒಂದು ಕುಟುಂಬಕ್ಕೆ 125 ದಿನಗಳ ಕೂಲಿ ಕೆಲಸ ನೀಡಲಾಗುತ್ತಿದೆ. ಪುರುಷರು ಹಾಗೂ ಮಹಿಳೆಯರಿಗೆ ಸಮಾನವಾಗಿ ದಿನಕ್ಕೆ 382 ರೂ.ಗಳ ಕೂಲಿ ನೀಡಲಾಗುತ್ತಿದ್ದು, ಗ್ರಾಮೀಣ ಭಾಗದ ಜನತೆ ಈ ಸೌಲಭ್ಯವನ್ನು ಸದುಪಯೋಗ ಪಡಿಸಿಕೊಂಡು ಆರ್ಥಿಕವಾಗಿ ಅಭಿವೃದ್ಧಿ ಹೊಂದುವಂತೆ ಸಲಹೆ ನೀಡಿದರು.

ಕಾಲುವೆ ಅಭಿವೃದ್ಧಿ ಕಾಮಗಾರಿಯಲ್ಲಿ 15 ಮಂದಿ ಕೂಲಿ ಕಾರ್ಮಿಕರು ಕೆಲಸ ಮಾಡುತ್ತಿದ್ದು, ವಿಜಿ–ಜಿ ರಾಮ್ ಜಿ ಯೋಜನೆಯಡಿ ಸ್ಥಳೀಯವಾಗಿಯೇ ಕೆಲಸ ನೀಡಿದ ಕಾರಣ ಗ್ರಾಮದ ಕೂಲಿ ಕಾರ್ಮಿಕರು ಸಂತಸ ವ್ಯಕ್ತಪಡಿಸಿ, ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ ಧನ್ಯವಾದ ಸಲ್ಲಿಸಿ, ಜೀವನೋಪಾಯ ಕಾಮಗಾರಿಗಳನ್ನು ಎಷ್ಟು ನೀಡಿದರೂ, ತಾವು ಮಾಡಲು ಸಿದ್ಧವಿರುವುದಾಗಿ ತಿಳಿಸಿದರು.



ಕೂಲಿ ಕಾರ್ಮಿಕರ ಕೂಲಿ ಕೆಲಸದ ಬೇಡಿಕೆ, ಕೂಲಿ ಕಾರ್ಮಿಕರ ಹಾಜರಾತಿ ಪ್ರಕ್ರಿಯೆ ಸೇರಿದಂತೆ ಕಾಮಗಾರಿ ಸ್ಥಳದಲ್ಲಿ ಕೂಲಿ ಕಾರ್ಮಿಕರಿಗೆ ಒದಗಿಸಲಾದ ಕುಡಿಯುವ ನೀರಿನ ಸೌಲಭ್ಯ, ನೆರಳಿನ ಸೌಲಭ್ಯಗಳನ್ನು ಪರಿಶೀಲಿಸಿದರು.

ಇದೇ ವೇಳೆ ಸ್ಥಳದಲ್ಲಿಯೇ ಹಾಜರಿದ್ದ ಕೊರಟಗೆರೆ ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಅಪೂರ್ವ ಸಿ. ಅನಂತರಾಮು ಹಾಗೂ ಸಹಾಯಕ ನಿರ್ದೇಶಕ(ಗ್ರಾ.ಉ.) ಎಂ.ಬಿ.ಗುರುಮೂರ್ತಿ, ತಾಂತ್ರಿಕ ಸಂಯೋಜಕ ಮಧು ಕೆ.ಎಸ್. ಹಾಗೂ ತಾಂತ್ರಿಕ ಸಹಾಯಕಿ ಹರ್ಷಿತಾ ಅವರೊಂದಿಗೆ ಕಾಮಗಾರಿ ಕುರಿತು ಚರ್ಚಿಸಿ, ಕಾಮಗಾರಿಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವಂತೆ ಸೂಚಿಸಿದರು.

ಸರ್ಕಾರಿ ಶಾಲೆಗೆ ಭೇಟಿ: ದೊಡ್ಡಸಾಗ್ಗೆರೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ದಿಢೀರ್ ಭೇಟಿ ನೀಡಿದ ಅವರು, ಶಾಲಾ ಆವರಣದಲ್ಲಿ ಅನುಷ್ಠಾನಗೊಳಿಸಲಾದ ವಾಲಿಬಾಲ್ ಹಾಗೂ ಬ್ಯಾಸ್ಕೆಟ್‌ಬಾಲ್ ಆಟದ ಮೈದಾನವನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

ಬಳಿಕ ಶಾಲಾ ತರಗತಿಗಳಿಗೆ ಭೇಟಿ ನೀಡಿದ ಸಿಇಓ ಅವರು, ಮಕ್ಕಳ ಇ–ಹಾಜರಾತಿ, ಶಿಕ್ಷಕರ ಹಾಜರಾತಿಯನ್ನು ಪರಿಶೀಲಿಸಿ, ಶಾಲಾ ಮುಖ್ಯೋಪಾಧ್ಯಾಯರಿಗೆ ಇ–ಹಾಜರಾತಿಯನ್ನು ನಿತ್ಯ ಪಡೆಯುವಂತೆ ಸೂಚನೆ ನೀಡಿದರು. ಇದೇ ವೇಳೆ ಶಾಲಾ ಮಕ್ಕಳೊಂದಿಗೆ ಕೆಲಕಾಲ ಸಂವಾದ ನಡೆಸಿದರು.

ಈ ಸಂದರ್ಭದಲ್ಲಿ ಗ್ರಾ.ಪಂ. ಪಿಡಿಓ ನಾಗರಾಜು, ಶಾಲಾ ಮುಖ್ಯೋಪಾಧ್ಯಾಯರು ಸೇರಿದಂತೆ ಗ್ರಾಮ ಪಂಚಾಯಿತಿ ಮಾಜಿ ಸದಸ್ಯರು ಹಾಜರಿದ್ದರು.

## ಕೆ.ವಿ.ಕೆ.ಯಿಂದ ತರಬೇತಿ ಶಿಬಿರ

ದೊಡ್ಡಬಳ್ಳಾಪುರ

ರಾಜಘಟ್ಟ ಗ್ರಾಮದಲ್ಲಿ ಮುಂಗಾರು ದ್ವಿದಳ ಧಾನ್ಯ (ತೊಗರಿ) ಸಂಶೋಧನಾ ಪ್ರಯೋಜನೆ, ಕೃಷಿ ವಿಶ್ವ ವಿದ್ಯಾನಿಲಯ ಬೆಂಗಳೂರು ಇವರು ಕೃಷಿ ವಿಜ್ಞಾನ ಕೇಂದ್ರ ಹಾಡೋನಹಳ್ಳಿ ಮತ್ತು ನಬಾರ್ಡ್ ಜಲಾನಯನ ಅಭಿವೃದ್ಧಿ ಯೋಜನೆ –ಭಾರತೀಯ ಸಮಗ್ರ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ಇವರ ಸಹಯೋಗದೊಂದಿಗೆ ರಾಜಘಟ್ಟ ಗ್ರಾಮದಲ್ಲಿ ಅನುಸೂಚಿತ ಜಾತಿ ಉಪಯೋಜನೆ ಅಡಿಯಲ್ಲಿ 30 ಜನ ರೈತರಿಗೆ ಕೃಷಿ ಪ್ರಗತಿ ಕಾರ್ಯಕ್ರಮದ ಅಂಗವಾಗಿ ತೊಗರಿಯ ಸಮಗ್ರ ಬೆಳೆ ನಿರ್ವಹಣೆ ಕುರಿತಾಗಿ ಒಂದು ದಿನದ ತರಬೇತಿ ಹಮ್ಮಿಕೊಳ್ಳಗಿತ್ತು.

ವಿಶೇಷವಾಗಿ ಬೀಜೋಪಚಾರ ವಿಧಾನ ಮತ್ತು ಸಣ್ಣ ಹಿಡುವಳಿಗೆ ಸುಧಾರಿತ ಕುಂಟೆಯ (ವೀಡರ್) ಬಗ್ಗೆ ಪ್ರಾತ್ಯಕ್ಷಿಕೆ ಮುಖಾಂತರ ತೋರಿಸಲಾಯಿತು. ಜೊತೆಗೆ ಪೂರಕ ಪರಿಕರಗಳಾದ ಸುಧಾರಿತ ತಳಿಯ ಬಿತ್ತನೆ ಬೀಜ, ದ್ವಿದಳ ಧಾನ್ಯಗಳಿಗೆ ಸೂಕ್ತ ಜೈವಿಕ ಗೊಬ್ಬರ, ಕಳೆ/ಕೀಟನಾಶಕ ಮತ್ತು ಸುಧಾರಿತ ಕುಂಟೆಗಳನ್ನು ಆಯ್ದ ರೈತರಿಗೆ ವಿತರಿಸಲಾಯಿತು.

ಈ ಕುರಿತು ತೊಗರಿ ಸಂಶೋಧನಾ ವಿಭಾಗದ ಮುಖ್ಯಸ್ಥರಾದ ಡಾ. ಹೆಚ್.ಸಿ. ಲೋಹಿತಾಶ್ವ ಮಾತಾನಾಡಿ ಈ ಕಾರ್ಯಕ್ರಮದ ಸದ್ಬಳಕೆ ಮಾಡಿಕೊಂಡು ನಮ್ಮ ದೇಶವನ್ನು ಬೇಳೆಕಾಳು ಬೆಳೆಗಳಲ್ಲಿ ಆತ್ಮ ನಿರ್ಭರಮಾಡುವುದರ ಜೊತೆಗೆ ಲಾಭದಾಯಕ ಕೃಷಿಯಿಂದ ತಮ್ಮ ಜೀವನಮಟ್ಟ ಸುಧಾರಿಸಿ ಕೊಂಡು ಇತರೆ ರೈತರಿಗೆ ಮಾದರಿಯಾಗಬೇಕೆಂದು ಕರೆ ನೀಡಿದರು.

ನಬಾರ್ಡ್–ಐ.ಆರ್.ಐ.ಡಿ.ಎಸ್ ಯೋಜನಾಧಿಕಾರಿ ಮಂಜುನಾಥ ಪಟೇಲ್ ರವರು ತಮ್ಮ ತಂಡ ಗ್ರಾಮದಲ್ಲಿ ರೈತ ಅಭಿವೃದ್ಧಿಗೆ ಶ್ರಮಿಸುತ್ತಿದ್ದು ಈ ಕಾರ್ಯಕ್ರಮಕ್ಕೆ ಸಂಪೂರ್ಣ ಸಹಕಾರ ನೀಡುತ್ತಿದ್ದು ಈ ಕಾರ್ಯಕ್ರಮದಿಂದ ಉತ್ತಮ ಫಲಿತಾಂಶ ಸಿಗಲಿದೆಯೆಂದು ತಿಳಿಸಿದರು.

ಈ ತರಬೇತಿಯಲ್ಲಿ ಕೃಷಿ ವಿಶ್ವವಿದ್ಯಾನಿಲಯದ ವಿಜ್ಞಾನಿಗಳಾದ ಡಾ. ಅತೀಕ್ ಉರ್ ರೆಹಮಾನ್, ಡಾ. ಕೇಶವರೆಡ್ಡಿ, ಡಾ. ಮಂಜುನಾಥ, ಡಾ. ದೇವರಾಜು, ಡಾ. ನಿಂಗರಾಜು ತಾಂತ್ರಿಕ, ನಬಾರ್ಡ್–ಐ.ಆರ್.ಐ.ಡಿ.ಎಸ್‌ನ ವೆಂಕಟಾ ಚಲಪತಿ, ಶಾಂತ ರಾಜು, ನಾಗರಾಜು, ಜಲಜಾಕ್ಷಿ, ಅಂಜಿನಪ್ಪ, ಸುತ್ತಮುತ್ತಲಿನ ಗ್ರಾಮದ ರೈತ ಮತ್ತು ರೈತ ಮಹಿಳೆ ಹಾಜರಿದ್ದರು.

## ದೇವಸ್ಥಾನಕ್ಕೆ ತೆರಳುತ್ತಿದ್ದ ಇಬ್ಬರ ಯುವಕರು ಅಪಘಾತದಲ್ಲಿ ದುರ್ಮರಣ

ಶ್ರೀನಿವಾಸಪುರ

ತಾಲ್ಲೂಕಿನ ಮುಳಬಾಗಿಲು–ಶ್ರೀನಿವಾಸಪುರ ರಸ್ತೆಯ ಅರಿಕೆರೆ ಗೇಟ್ ಸಮೀಪ ಈಚರ್ ವಾಹನ ಹಾಗೂ ಬುಲೆಟ್ ಬೈಕ್ ನಡುವೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಇಬ್ಬರು ಯುವಕರು ಸ್ಥಳದಲ್ಲೇ ಮೃತಪಟ್ಟಿರುವ ದುರ್ಘಟನೆ ನಡೆದಿದೆ. ಮೃತರನ್ನು ಚಿಂತಾಮಣಿ ತಾಲ್ಲೂಕಿನ ತಿಮ್ಮಸಂದ್ರ ಗ್ರಾಮದ ಶಶಿ (25) ಹಾಗೂ ಬೆಂಗಳೂರು ಜಿಲ್ಲೆಯ ನೆಲಮಂಗಲದ ಧನುಷ್ (25) ಎಂದು ಗುರುತಿಸಲಾಗಿದೆ.

ಮಾಹಿತಿಯ ಪ್ರಕಾರ, ನಾಲ್ವರು ಸ್ನೇಹಿತರು ಎರಡು ದ್ವಿಚಕ್ರ ವಾಹನಗಳಲ್ಲಿ ಶುಕ್ರವಾರ ಬೆಳ್ಳಂಬೆಳಗ್ಗೆ ಆಂಧ್ರಪ್ರದೇಶದ ಪ್ರಸಿದ್ಧ ಕಾಣಿಪಾಕಂ ಗಣೇಶ ದೇವಸ್ಥಾನಕ್ಕೆ ತೆರಳುತ್ತಿದ್ದರು.

ಈ ವೇಳೆ ಒಂದು ಬೈಕ್‌ಗೆ ಪೆಟ್ರೋಲ್ ತುಂಬಿಸಿಕೊಂಡು ಹಿಂಬದಿಯಿಂದ ಬರುತ್ತಿದ್ದ ಬುಲೆಟ್ ಬೈಕ್ ಅರಿಕೆರೆ ಗೇಟ್ ಸಮೀಪ ಈಚರ್ ವಾಹನಕ್ಕೆ ಡಿಕ್ಕಿ ಹೊಡೆದ ಪರಿಣಾಮ ಭೀಕರ ಅಪಘಾತ ಸಂಭವಿಸಿದೆ. ಅಪಘಾತದ ತೀವ್ರತೆಗೆ ಬುಲೆಟ್ ಬೈಕ್‌ನಲ್ಲಿ ಪ್ರಯಾಣಿಸುತ್ತಿದ್ದ ಶಶಿ ಮತ್ತು ಧನುಷ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಘಟನೆ ತಿಳಿಯುತ್ತಿದ್ದಂತೆ ಶ್ರೀನಿವಾಸಪುರ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ರವಾನಿಸಿದರು. ಈ ಸಂಬಂಧ ಶ್ರೀನಿವಾಸಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಅಪಘಾತದ ನಿಖರ ಕಾರಣದ ಕುರಿತು ಪೊಲೀಸರು ತನಿಖೆ ಕೈಗೊಂಡಿದ್ದಾರೆ.

ಮೃತರ ಸಾವಿನಿಂದ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದ್ದು, ಪ್ರದೇಶದಲ್ಲಿ ಶೋಕದ ವಾತಾವರಣ

## 28ರಂದು ನೇತ್ರ ಶಸ್ತ್ರಚಿಕಿತ್ಸಾ ಶಿಬಿರ

ವೈ.ಎನ್. ಹೊಸಕೋಟೆ

ಗ್ರಾಮದಲ್ಲಿ ಇದೇ 28ರಂದು ಮಂಗಳವಾರ ಉಚಿತ ನೇತ್ರ ಶಸ್ತ್ರಚಿಕಿತ್ಸಾ ಶಿಬಿರವನ್ನು ಆಯೋಜಿಸಲಾಗಿದೆ.

ಶಂಕರ ಕಣ್ಣಿನ ಆಸ್ಪತ್ರೆ ಬೆಂಗಳೂರು ಜಿಲ್ಲಾ ಅಂಧತ್ವ ನಿಯಂತ್ರಣಾ ಸಂಸ್ಥೆ ತುಮಕೂರು ಸೇವಾ ಟ್ರಸ್ಟ್ ಮತ್ತು ಹೆಲ್ತ್ ಸೊಸೈಟಿ, ಪಾವಗಡ, ತಾಲ್ಲೂಕು ವೈದ್ಯಾಧಿಕಾರಿಗಳ ಕಚೇರಿ ಹಾಗೂ ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳ ಸಂಯುಕ್ತ ಆಶ್ರಯದಲ್ಲಿ ಶಿಬಿರ ನಡೆಯಲಿದೆ.

ಶಿಬಿರವು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಗ್ರಾಮದ ಚೌಡೇಶ್ವರಿ ಸಮುದಾಯ ಭವನದಲ್ಲಿ ನಡೆಯಲಿದೆ.

ಶಿಬಿರದಲ್ಲಿ ನೇತ್ರ ತಪಾಸಣೆ ನಡೆಸಿ, ಶಸ್ತ್ರಚಿಕಿತ್ಸೆ ಅಗತ್ಯವಿರುವ ಅರ್ಹ ರೋಗಿಗಳನ್ನು ಉಚಿತ ಚಿಕಿತ್ಸೆಗೆ ಆಯ್ಕೆ ಮಾಡಲಾಗುವುದು. ಸಾರ್ವಜನಿಕರು ಈ ಶಿಬಿರದ ಸದುಪಯೋಗ ಪಡೆದುಕೊಳ್ಳುವಂತೆ ಸೇವಾ ಟ್ರಸ್ಟ್ ಮತ್ತು ಹೆಲ್ತ್ ಸೊಸೈಟಿ,ಅಧ್ಯಕ್ಷರಾದ ಮಾನಂ ಶಶಿಕಿರಣ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 111 ಮಹಿಳೆಯರಿಗೆ ಹೊಲಿಗೆ ಯಂತ್ರ, 64 ಮಂದಿಗೆ ಉಪಕರಣಗಳ ಕಿಟ್ ವಿತರಣೆ

ಶಿಡ್ಲಘಟ್ಟ

ಸರಕಾರದ ಯಾವುದೆ ರೀತಿಯ ಜನ ಸಾಮಾನ್ಯರ ಪರವಾದ ಯೋಜನೆಗಳನ್ನು ಯಾವುದೇ ಭ್ರಷ್ಟಾಚಾರಕ್ಕೆ ಅವಕಾಶ ನೀಡದೆ ಅರ್ಹ ಫಲಾನುಭವಿಗಳಿಗೆ ತಲುಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಹಾಗೂ ಜನಪ್ರತಿನಿಗಳು ಕಾರ್ಯನಿರ್ವಹಿಸಬೇಕಾಗುತ್ತದೆ ಎಂದು ಶಾಸಕ ಬಿ.ಎನ್.ರವಿಕುಮಾರ್ ತಿಳಿಸಿದರು.

ತಾಲೂಕು ಪಂಚಾಯಿತಿ ಕಾರ್ಯಾಲಯದ ಆವರಣದಲ್ಲಿ ಗುರುವಾರ ನಡೆದ ತಾಲೂಕು ಪಂಚಾಯಿತಿ ಹಾಗೂ ಕೈಗಾರಿಕೆ ಇಲಾಖೆಯಿಂದ 111 ಮಹಿಳೆಯರಿಗೆ ಹೊಲಿಗೆ ಯಂತ್ರಗಳು ಹಾಗೂ 64 ಮಂದಿ ಕುಶಲಕರ್ಮಿಗಳಿಗೆ ಉಪಕರಣಗಳ ಕಿಟ್ ವಿತರಿಸಿ ಮಾತನಾಡಿದರು.

2026–27ನೇ ಸಾಲಿನ ಯೋಜನೆಗಳಿಗೆ ಅರ್ಹರು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ಸೌಲಭ್ಯ ಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಕ್ಷೇತ್ರದ ಕೈಗಾರಿಕಾ ವಿಸ್ತರಣಾಕಾರಿಗಳನ್ನು ಸಂಪರ್ಕಿಸಬಹುದು ಎಂದು ಶಾಸಕರು ತಿಳಿಸಿದರು.

ಕಾರ್ಮಿಕ ಇಲಾಖೆಯಿಂದ 95 ಹಾಗೂ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 16 ಸೇರಿ ಒಟ್ಟು 111 ಮಹಿಳೆಯರಿಗೆ ಸ್ವಯಂ ಉದ್ಯೋಗಕ್ಕಾಗಿ ವಿದ್ಯುತ್ ಚಾಲಿತ ಹೊಲಿಗೆ ಯಂತ್ರಗಳನ್ನು ವಿತರಿಸಲಾಯಿತು. ಬಡಗಿ, ಗಾರೆ, ದೋಭಿ, ಕ್ಷೌರಿಕ, ಕಮ್ಮಾರಿಕೆ ಹಾಗೂ ಕಲ್ಲು ಕೆಲಸ ಸೇರಿದಂತೆ ವಿವಿಧ ವೃತ್ತಿಗಳಲ್ಲಿ ತೊಡಗಿರುವ 64 ಮಂದಿ ಕುಶಲಕರ್ಮಿಗಳಿಗೆ ಸುಧಾರಿತ ಉಪಕರಣಗಳ ಕಿಟ್ ಗಳನ್ನು ನೀಡಲಾಯಿತು.

ಕಾರ್ಮಿಕ ಇಲಾಖೆ ಜಿಲ್ಲಾ ಉಪನಿರ್ದೇಶಕ ಟಿ.ಮುಕುಂದ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹೇಮಾವತಿ, ಕೈಗಾರಿಕಾ ವಿಸ್ತರಣಾ ಅಧಿಕಾರಿ ಗೀತಾ, ಚಿಮುಲ್ ನಿರ್ದೇಶಕರಾದ ಬಂಕ್ ಮುನಿಯಪ್ಪ ಮತ್ತು ಹುಜಗೂರು ರಾಮಣ್ಣ, ಸರಕಾರಿ ನೌಕರರ ಸಂಘದ ರಾಜ್ಯ ಕಾರ್ಯದರ್ಶಿ ಕೆ.ಎನ್.ಸುಬ್ಬಾರೆಡ್ಡಿ, ಮುಖಂಡರಾದ ತಾದೂರು ರಘು, ಮೇಲೂರು ಮಂಜುನಾಥ್ ಇನ್ನಿತರರು ಹಾಜರಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy